ಸಂಪುಟ: 04 ಸಂಚಿಕೆ: 216 ಪುಟಗಳು: 08 ಶನಿವಾರ 19 ಅಕ್ಟೋಬರ್ 2023

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನೀವು ನಿಮ್ಮ ಗುರಿ ತಲುಪಬೇಕಾದರೆ ನೀವು ಒಂದೇ ಮನಸ್ಥಿತಿಯಿಂದ ನಿರಂತರವಾಗಿ ಪ್ರಯತ್ನಿಸಬೇಕು.

## ಯಾರನ್ನಾದರೂ ಕೈ ಕಣಕ್ಕೆ ಇಳಿಸಲಿ ಎನ್‌ಡಿಎಯಿಂದ ನಮ್ಮ ಅಭ್ಯರ್ಥಿ

• ಉದಯವಾಹಿನಿ, ಮಂಡ್ಯ

ಚನ್ನಪಟ್ಟಣದ ಉಪಚುನಾವಣೆಗೆ ಎನ್‌ಡಿಎ ಅಭ್ಯರ್ಥಿಯೇ ಕಣಕ್ಕೆ ಇಳಿಯಲಿದ್ದು, ನಮಗೆ ನಮ್ಮ ಕಾರ್ಯಕರ್ತರೇ ಅಭ್ಯರ್ಥಿ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಹೇಳಿದರು. ಅಭ್ಯರ್ಥಿಯ ಆಯ್ಕೆಯಲ್ಲಿ ಯಾವುದೇ ಜಂಜಾಟ ಇಲ್ಲ ಎಂದು ಸ್ಪಷ್ಟಪಡಿಸಿದರು. ಕಾಂಗ್ರೆಸ್‌ನವರು ಯಾವ ಅಭ್ಯರ್ಥಿಯನ್ನಾದರೂ ಕಣಕ್ಕೆ ಇಳಿಸಲಿ. ಅಚ್ಚರಿ ಅಭ್ಯರ್ಥಿಯೋ ಇಲ್ಲ ಇನ್ಯಾವ ಅಭ್ಯರ್ಥಿಯನ್ನ ಸ್ಪರ್ಧೆಗೆ ಇಳಿಸುತ್ತಾರೋ.. ಯಾವ ಅಭ್ಯರ್ಥಿಯನ್ನಾದರೂ ಹಾಕಿಕೊಳ್ಳಲಿ. ಗೆಲ್ಲುವುದಕ್ಕಾಗಿಯೇ ಎಲ್ಲರೂ ಚುನಾವಣೆಯಲ್ಲಿ ಸ್ಪರ್ಧೆ ಮಾಡುವುದು. ಎಲ್ಲರೂ ಸೋಲುತ್ತೇವೆ ಎಂದು ಚುನಾವಣೆ ನಡೆಸಲ್ಲ. ಹೀಗಾಗಿ ನಾವು ಸಹ ಗೆಲ್ಲಲು ನಮ್ಮ ಅಭ್ಯರ್ಥಿ ಎನ್‌ಡಿಎ ಅಭ್ಯರ್ಥಿಯೇ ಎಂದು ಹೇಳಿದ್ದೇನೆ ಎಂದರು.

## ಇಡಿ ದಾಳಿ ಹೋರಾಟಕ್ಕೆ ಸಂದ ಜಯ: ಸ್ನೇಹಮಯಿ ಕೃಷ್ಣ

• ಉದಯವಾಹಿನಿ, ಮೈಸೂರು

'ಮುಡಾ ಕಚೇರಿ ಮೇಲೆ ಜಾರಿ ನಿರ್ದೇಶನಾಲಯವು ದಾಳಿ ಮಾಡಿರುವುದು ಹೋರಾಟಕ್ಕೆ ಸಂದ ಜಯ' ಎಂದು ದೂರುದಾರ ಸ್ನೇಹಮಹಿ ಕೃಷ್ಣ ಹೇಳಿದರು. ನಗರದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿ, 'ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅವರ ಪತ್ನಿ ಪಾರ್ವತಿ ಅವರನ್ನು ಗುರಿಯಾಗಿಸಿಕೊಂಡು ಇ.ಡಿಗೆ ದೂರು ನೀಡಿಲ್ಲ. ಮುಡಾದ ಭ್ರಷ್ಟಾಚಾರ ಪ್ರಕರಣ ಬಯಲಿಗೆಳೆಯಲು ಕೊಟ್ಟದ್ದಾಗಿದೆ' ಎಂದರು. ಪ್ರಕರಣವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುವವರೆಗೂ ಹೋರಾಟ ಕೈಬಿಡುವುದಿಲ್ಲ' ಎಂದು ತಿಳಿಸಿದರು.

## ಕಲೆಕ್ಷನ್ ಮಾಡೋದು ನಿಮಗೆ ಯಾಕ್ರೀ ಬೇಕು: ಯತ್ನಾಳ್ ಗರಂ

• ಉದಯವಾಹಿನಿ, ಬೆಂಗಳೂರು

ಪೊಲೀಸರ ತನಿಖೆಗೆ ಸಹಕರಿಸದಿದ್ದ ಅರೆಸ್ಟ್ ಮಾಡಬೇಕಾಗುತ್ತದೆ ಎಂಬ ಗೃಹ ಸಚಿವ ಜಿ.ಪರಮೇಶ್ವರ್ ಅವರ ಹೇಳಿಕೆ ಟಾಂಗ್ ನೀಡಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ಪರಮೇಶ್ವರ್ ವಿರುದ್ಧದ ಹಗರಣಗಳನ್ನು ಪೊಲೀಸರು ನಿಷ್ಪಕ್ಷಪಾತವಾಗಿ ತನಿಖೆ ಮಾಡಿದರೆ ನನಗಿಂತ ಮೊದಲೇ ಅವರೇ ಅರೆಸ್ಟ್ ಆಗಲಿದ್ದಾರೆ ಎಂದರು. ಪರಮೇಶ್ವರ್ ವಿರುದ್ಧ ದೊಡ್ಡ ಹಗರಣ ನಡೆಸಿರುವ ಆರೋಪಗಳಿವೆ ಅವರೇ ಅರೆಸ್ಟ್ ಆಗುತ್ತಾರೆ ಕಾದು ನೋಡಿ ಎಂದು ಹೇಳಿದರು. ನೀವು ಬರೀ ಕಲೆಕ್ಷನ್ ಮಾಡೋದು ಬಿಡಿ. ನಿಮಗೆಲ್ಲಾ ಇದೆಲ್ಲಾ ಯಾಕೆಬೇಕು ಎಂದು ವಾಗ್ದಾಳಿ ನಡೆಸಿದರು. ದಿನೇಶ್ ಗುಂಡೂರಾವ್ ಕುಟುಂಬದ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿದ್ದಕ್ಕೆ ಯತ್ನಾಳ್ ಕೋರ್ಟ್ ಜಾಮೀನು ರಹಿತ ಅರೆಸ್ಟ್ ವಾರೆಂಟ್ ಜಾರಿಗೊಳಿಸಿತ್ತು.

## ಸದಾನಂದ ಗೌಡ ವಿರುದ್ಧ ಹರಿಹಾಯ್ದ ಎಚ್.ಕೆ.ಪಾಟೀಲ್

• ಉದಯವಾಹಿನಿ, ಬೆಂಗಳೂರು

ವಾಲ್ಮೀಕಿ ಹಗರಣಕ್ಕೆ ಸಂಬಂಧಿಸಿದಂತೆ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿರುವ ಬಿಜೆಪಿ ನಾಯಕ ಡಿವಿ ಸದಾನಂದಗೌಡರ ತರ್ಕ ನನಗೆ ಅರ್ಥವಾಗುತ್ತಿಲ್ಲ ಎಂದು ಸಚಿವ ಎಚ್‌ಕೆ ಪಾಟೀಲ್ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ವಾಲ್ಮೀಕಿ ಹಗರಣ ಪ್ರಕರಣಕ್ಕೆ ಸಂಬಂಧಿಸಿ ಸಿಎಂ ಸಿದ್ದರಾಮಯ್ಯ ಅವರು ಈಗ ಯಾವ ಕ್ರಮ ಕೈಗೊಂಡಿದ್ದಾರೋ ಅದು ಚರ್ಚೆಗೆ ತೆರೆ ಎಳೆಯಲು ಸಾಕು ಎಂಬುದು ಮಾಜಿ ಸಿಎಂ ಸದಾನಂದಗೌಡರಿಗೆ ತಿಳಿದಿರಬೇಕು. ಮಾಜಿ ಸಿಎಂ ಸದಾನಂದ ಗೌಡರು ಹೆಚ್ಚಿನ ಜವಾಬ್ದಾರಿ ವಹಿಸುತ್ತಾರೆ ಎಂದು ನಾನು ನಿರೀಕ್ಷಿಸುತ್ತೇನೆ ಎಂದು ಹೇಳಿದರು. ನಿನ್ನೆ ಸದಾನಂದ ಗೌಡ ಅವರು ಪತ್ರಿಕಾ ಗೋಷ್ಠಿ ನಡೆಸಿ ವಾಲ್ಮೀಕಿ ಹಗರಣ ಪ್ರಕರಣಕ್ಕೆ ಸಂಬಂಧಿಸಿ ಪೋಸ್ಟರ್ ಬಿಡುಗಡೆ ಮಾಡಿ ಕಿಡಿಕಾರಿದ್ದರು. ಅಷ್ಟೇ ಅಲ್ಲದೇ ಸಿದ್ದರಾಮಯ್ಯ ಅವರ ರಾಜೀನಾಮೆ ಒತ್ತಾಯಿಸಿ ಮುಂದಿನ ದಿನಗಳಲ್ಲಿ ಪ್ರತಿಭಟನೆ ನಡೆಸುವುದಾಗಿ ತಿಳಿಸಿದ್ದರು.

## ಬೆಂಗಳೂರು ಸಮೀಪ ಮತ್ತೊಂದು ವಿಮಾನ ನಿಲ್ದಾಣಕ್ಕೆ ಭರದ ಸಿದ್ಧತೆ

• ಉದಯವಾಹಿನಿ, ಬೆಂಗಳೂರು

ಡಿ.ಕೆ ಶಿವಕುಮಾರ್ ಅವರ ನೇತೃತ್ವದಲ್ಲಿ ಬೆಂಗಳೂರಲ್ಲಿ ಮತ್ತೊಂದು ವಿಮಾನ ನಿಲ್ದಾಣ ನಿರ್ಮಾಣದ ಬಗ್ಗೆ ಮಹತ್ವದ ಸಭೆಯನ್ನು ಉನ್ನತ ಮಟ್ಟದ ಅಧಿಕಾರಿಗಳ ಜೊತೆಗೆ ನಡೆಸಲಾಯಿತು. ಬೆಂಗಳೂರು ಹೊರವಲಯದಲ್ಲಿ 2ನೇ ವಿಮಾನ ನಿಲ್ದಾಣ ಪ್ರಕ್ರಿಯೆ ಚುರುಕುಗೊಳಿಸುವ ಸಂಬಂಧ ಇಂದು ಡಿಸಿಎಂ ಡಿಸಿಎಂ ಡಿಕೆ ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ KIADB , BMRCL , BMRDA , BDA ಸಂಬಂಧಿಸಿದ ಇನ್ನಿತರೆ ಇಲಾಖೆಗಳ ಉನ್ನತ ಅಧಿಕಾರಿಗಳೊಂದಿಗೆ ಮತ್ತೊಂದು ಸುತ್ತಿನ ಚರ್ಚೆ ನಡೆಸಲಾಯಿತು. ಈ ಯೋಜನೆಗೆ ಸಂಬಂಧಿಸಿದಂತೆ ವೈಜ್ಞಾನಿಕ ಅಧ್ಯಯನವನ್ನು ಈಗಾಗಲೇ ಕೈಗೊಳ್ಳಲಾಗಿದ್ದು, ಅದರಂತೆ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರಕ್ಕೆ (ಎಎಐ) ಪ್ರಸ್ತಾವನೆ ಸಲ್ಲಿಸಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ.

# ಇಡಿ ಕಣ್ಣು ಮುಡಾ ಮ್ಯಾಗೆ

## ಸಿಎಂಗೆ ಮತ್ತಷ್ಟು ಸಂಕಷ್ಟ

**ದಾಳಿಗೆ ರಾಜಕೀಯ ಕಾರಣವಲ್ಲ**

**ಮುಡಾ ಕಚೇರಿಗೆ ಇ.ಡಿ ದಾಳಿ; ಕಡತಗಳ ಪರಿಶೀಲನೆ**

• ಉದಯವಾಹಿನಿ, ಬೆಂಗಳೂರು:

ಮೈಸೂರಿನಲ್ಲಿರುವ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಕಚೇರಿಯ ಮೇಲೆ ಕೇಂದ್ರ ಸರ್ಕಾರದ ಅಧೀನದಲ್ಲಿರುವ ಜಾರಿ ನಿರ್ದೇಶನಾಲಯ ರೈಡ್ ಮಾಡಿದೆ. ಮುಡಾ ಕೇಸ್‌ನ ದೂರುದಾರ ಸ್ನೇಹಮಯಿ ಕೃಷ್ಣ ಅವರ ದೂರನ್ನು ಆಧರಿಸಿ ರೈಡ್ ನಡೆಸಲಾಗಿದೆ. ಮುಡಾದಲ್ಲಿ ಸಿದ್ದರಾಮಯ್ಯನವರ ಕುಟುಂಬದ 14 ಸೈಟುಗಳ ವಿವಾದ ಮಾತ್ರವಲ್ಲ, ಅಲ್ಲಿ ಬೇರೆ ಬೇರೆ ಬಡಾವಣೆಗಳ ನಿರ್ಮಾಣದ ವೇಳೆ ಸಾವಿರಾರು ಕೋಟಿ ರೂ.ಗಳ ಅವ್ಯವಹಾರ ಆಗಿದೆ ಎಂದು ಕೃಷ್ಣ ಅವರು ದೂರಿನಲ್ಲಿ ಉಲ್ಲೇಖಿಸಿದ್ದರು. ಆ ಹಿನ್ನೆಲೆ ಇಡಿ ದಾಳಿ ನಡೆಸಲಾಗಿದೆ. ಜಾರಿ ನಿರ್ದೇಶನಾಲಯದ ಸುಮಾರು 20 ಅಧಿಕಾರಿಗಳುಳ್ಳ ಎರಡು ತಂಡಗಳು ಈ ರೈಡ್ ನಲ್ಲಿ ಭಾಗವಹಿಸಿವೆ. ಒಂದು ತಂಡ ಮುಡಾ ಕಚೇರಿಯ ಮೇಲೆ ದಾಳಿ ನಡೆಸಿದ್ದರೆ, ಮತ್ತೊಂದು ತಂಡ ಮುಡಾದಿಂದ ನಿರ್ಮಿತವಾಗಿರುವ ದೇವನೂರು ಬಡಾವಣೆಗಾಗಿ ಭೂಮಿ ಕೊಟ್ಟಿದ್ದ ಮಾಲೀಕರಾದ ದೇವರಾಜು ಅವರ ಮನೆಯ ಮೇಲೆ ದಾಳಿ ನಡೆಸಿದೆ.

ಮುಡಾ ಕಚೇರಿಗೆ ಆಗಮಿಸಿದ ತಂಡ, ಸಿಎಂ ಕುಟುಂಬಕ್ಕೆ ಮುಡಾ ವತಿಯಿಂದ ಹಸ್ತಾಂತರವಾಗಿರುವ ಸೈಟುಗಳಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಪರಿಶೀಲನೆ ನಡೆಸಿದರು. ಈ ಪ್ರಕರಣದಲ್ಲಿ ದೇವರಾಜು ಅವರು 4ನೇ ಆರೋಪಿಯಾಗಿದ್ದು ಅವರ ಮನೆ ಬೆಂಗಳೂರಿನ ಕೆಂಗೇರಿಯಲ್ಲಿದೆ. ಕೆಂಗೇರಿಯ ಮೈಸೂರು ರಸ್ತೆಯಲ್ಲಿರುವ ಅವರ ನಿವಾಸಕ್ಕೆ ಆಗಮಿಸಿದ ಇಡಿ ಅಧಿಕಾರಿಗಳ ತಂಡ ಅಲ್ಲಿಯೂ ಹಲವಾರು ದಾಖಲೆಗಳನ್ನು ಪರಿಶೀಲಿಸುತ್ತಿದೆ.



**ಮುಡಾ ಮೇಲೆ ಇಡಿ ರೈಡ್!**

**1** ಸಿಎಂ ಕುಟುಂಬದ ಸೈಟು ವ್ಯವಹಾರ ಮಾತ್ರವಲ್ಲದೆ ಇತರ ಬಡಾವಣೆಗಳ ಫೈಲುಗಳನ್ನು ಜಾಲಾಡುತ್ತಿರುವ ಅಧಿಕಾರಿಗಳು.

**2** ಸಿಎಂ ಕುಟುಂಬದೊಂದಿಗೆ ಥಳುಕು ಹಾಕಿಕೊಂಡಿರುವ ಬಡಾವಣೆಗಾಗಿ ಭೂಮಿ ಒಪ್ಪಿಸಿದ್ದ ದೇವರಾಜು ಅವರ ನಿವಾಸದ ಮೇಲೂ ದಾಳಿ.

ಮೈಸೂರು ನಗರಾಭಿವೃದ್ಧಿ ನಿವೇಶನ ಹಂಚಿಕೆ ಪ್ರಕರಣದಲ್ಲಿ ಮಹತ್ವದ ಬೆಳವಣಿಗೆಯಾಗಿದ್ದು, ಜಾರಿ ನಿರ್ದೇಶನಾಲಯ ಇಂದು ಎರಡು ಕಡೆ ದಾಳಿ ನಡೆಸಿ ದಾಖಲಾತಿಗಳನ್ನು ಪರಿಶೀಲಿಸಿದ್ದು, ಸಂಬಂಧಪಟ್ಟವರ ವಿಚಾರಣೆ ಆರಂಭಿಸಿದೆ. ಕೇಂದ್ರ ಸರ್ಕಾರದ ತನಿಖಾ ಸಂಸ್ಥೆಯಾದ ಜಾರಿ ನಿರ್ದೇಶನಾಲಯದ 20ಕ್ಕೂ ಹೆಚ್ಚು ಅಧಿಕಾರಿಗಳ ತಂಡ ಮೈಸೂರಿನ ಮುಡಾ ಕಚೇರಿ, ಕೆಂಗೇರಿಯಲ್ಲಿರುವ ಜಮೀನಿನ ಮಾಲೀಕ 4ನೇ ಆರೋಪಿ ದೇವರಾಜು ಅವರ ಮನೆ ಮೇಲೆ ದಾಳಿ ನಡೆಸಿದ್ದಾರೆ.



ಈ ಬೆಳವಣಿಗೆ ರಾಜ್ಯ ರಾಜಕೀಯದಲ್ಲಿ ಭಾರೀ ಸಂಚಲನ ಮೂಡಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕುಟಂಬಕ್ಕೆ ಮುಡಾದಿಂದ ಬದಲಿ ನಿವೇಶನ ನೀಡಿರುವ ಪ್ರಕರಣ ಸುನಾಮಿಯನ್ನೇ ಎದುರಿಸಿತ್ತು.ಸಾಮಾಜಿಕ ಕಾರ್ಯಕರ್ತರಾದ ಸ್ನೇಹಮಯಿ ಕೃಷ್ಣ, ಟಿ.ಜೆ.ಅಬ್ರಹಾಂ ಹಾಗೂ ಜೆಡಿಎಸ್ ಮುಖಂಡ ಪ್ರದೀಪ್‌ಕುಮಾರ್ ಹಗರಣದ ತನಿಖೆ ನಡೆಸಬೇಕೆಂದು ಲೋಕಾಯುಕ್ತ ಮತ್ತು ವಿಶೇಷ ಜನಪ್ರತಿನಿಧಿಗಳ ನ್ಯಾಯಾಲಯದ ಮೊರೆ ಹೋಗಿದ್ದರು. ಕಾನೂನು ತೊಡಕು ನಿವಾರಿಸುವ ಸಲುವಾಗಿ ರಾಜ್ಯಪಾಲರಿಂದ ಸೂಕ್ತ ಪೂರ್ವಾನುಮತಿ ಪಡೆದು ಪ್ರಕರಣ ಮುಂದುವರೆಸಲಾಗಿದೆ. ಹೈಕೋರ್ಟ್ ಮತ್ತು ಕೆಳಹಂತದ ನ್ಯಾಯಾಲಯದ ನಿರ್ದೇಶನದ ಮೇರೆಗೆ ಮೈಸೂರು ಲೋಕಾಯುಕ್ತ ಪೊಲೀಸರು ಪ್ರಕರಣ ದಾಖಲಿಸಿ ವಿಚಾರಣೆ ನಡೆಸಿದ್ದರು. ಈವರೆಗೂ 3ನೇ ಆರೋಪಿಯಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಬಾಮೈದ ಮಲ್ಲಿಕಾರ್ಜುನ ಸ್ವಾಮಿ ಹಾಗೂ 4ನೇ ಆರೋಪಿಯಾಗಿರುವ ಜಮೀನು ಮಾಲೀಕ ದೇವರಾಜು ಅವರ ವಿಚಾರಣೆ ಮಾತ್ರ ನಡೆದಿದೆ. ಮೊದಲನೆ, 2ನೇ ಆರೋಪಿಗಳಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಅವರ ಪತ್ನಿ ಪಾರ್ವತಿ ಅವರ ಹೇಳಿಕೆಗಳು ದಾಖಲಾಗಿಲ್ಲ. ಈ ನಡುವೆ ದೂರುದಾರರಾದ ಸ್ನೇಹಮಯಿ ಕೃಷ್ಣ, ಕೇಂದ್ರ ತನಿಖಾ ಸಂಸ್ಥೆಗಳಾದ ಸಿಬಿಐ ಅಥವಾ ಇಡಿಯಿಂದ ಮಾತ್ರ ನಿಷ್ಪಕ್ಷಪಾತ ತನಿಖೆ ಸಾಧ್ಯ ಎಂಬ ಅಭಿಪ್ರಾಯ ವ್ಯಕ್ತಪಡಿಸುತ್ತಾ ಬಂದಿದ್ದಾರೆ. ಜಾರಿ ನಿರ್ದೇಶನಾಲಯಕ್ಕೆ ಖುದ್ದು ದೂರು ನೀಡಿ ದಾಖಲೆಗಳನ್ನು ಸಲ್ಲಿಸಿರುವುದಲ್ಲದೆ ಹೇಳಿಕೆಯನ್ನು ನೀಡಿದರು.ಅದರ ಆಧಾರದ ಮೇಲೆ ಈವರೆಗೂ ಕಾನೂನಾತ್ಮಕ ಪರಿಶೀಲನೆಗಳನ್ನು ನಡೆಸಿದ್ದ ಜಾರಿ ನಿರ್ದೇಶನಾಲಯ ಅಖಾಡಕ್ಕಿಳಿದಿದೆ. ಕೇಂದ್ರ ಭದ್ರತಾ ಪಡೆಗಳ ಸಶಸ್ತ್ರ ಕಾವಲಿನೊಂದಿಗೆ ಶೋಧ ಕಾರ್ಯಾಚರಣೆ ನಡೆಸಲಾಗಿದೆ. ಮುಡಾದ ಕಾರ್ಯದರ್ಶಿ ಪ್ರಸನ್ನಕುಮಾರ್ ಅವರು ಈ ಬಗ್ಗೆ ಹೇಳಿಕೆ ನೀಡಿದ್ದು, ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಮುಡಾ ಕಚೇರಿಗೆ ಬಂದು ಮಾಹಿತಿ ಕೇಳಿದ್ದಾರೆ. ದಾಖಲಾತಿಗಳ ಪರಿಶೀಲನೆ ನಡೆಸಿದ್ದಾರೆ. ಇನ್ನೆರಡು ದಿನ ಶೋಧ ಕಾರ್ಯ ನಡೆಯುವ ಸಾಧ್ಯತೆಗಳಿವೆ ಎಂದು ತಿಳಿಸಿದರು.

### ಎರಡು ದಿನ ರೈಡ್

ರೈಡ್ ಬಗ್ಗೆ ಮುಡಾ ಕಾರ್ಯದರ್ಶಿಯವರು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ್ದು, ಮುಡಾ ಅಧಿಕಾರಿಗಳು ಎರಡು ದಿನಗಳ ಕಾಲ ತಪಾಸಣೆ ನಡೆಸುವುದಾಗಿ ಹೇಳಿದ್ದಾರೆ. ಅವರ ತನಿಖೆಗೆ ನಾವು ಸಹಕಾರ ಕೊಡಬೇಕಿದೆ. ಅದರಲ್ಲಿ ಯಾವುದೇ ಒತ್ತಡವಿಲ್ಲ ಎಂದು ಹೇಳಿದ್ದಾರೆ. ಅತ್ತ, ಮೈಸೂರು ತಾಲ್ಲೂಕು ಕಚೇರಿಯಿಂದಲೂ ಕೆಲವು ದಾಖಲೆಗಳನ್ನು ನೀಡುವಂತೆ ಇಡಿ ಅಧಿಕಾರಿಗಳು ಸೂಚಿಸಿದ್ದು, ತಾಲ್ಲೂಕು ಕಚೇರಿಯಿಂದ ಈ ಪ್ರಕರಣಕ್ಕೆ ಸಂಬಂಧಿಸಿದ ಕೆಲವು ದಾಖಲೆಗಳನ್ನು ಕಳುಹಿಸಲಾಗುತ್ತಿದೆ.




### ದಾಳಿ ದುರುದ್ದೇಶಪೂರಿತ ಡಿಕೆ ಸುರೇಶ್



ಇಡಿ ರೈಡ್ ಬಗ್ಗೆ ಪ್ರತಿಕ್ರಿಯೆ ನೀಡಿರುವ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮಾಜಿ ಸಂಸದ ಡಿಕೆ ಸುರೇಶ್, ಈಗಾಗಲೇ ಮುಡಾ ವಿಚಾರದಲ್ಲಿ ಲೋಕಾಯುಕ್ತ ತನಿಖೆ ನಡೆಸುತ್ತಿದೆ. ಪ್ರಕರಣವು ನ್ಯಾಯಾಲಯದಲ್ಲಿಯೂ ವಿಚಾರಣೆ ಹಂತದಲ್ಲಿದೆ. ಹಾಗಿರುವಾಗ ಇದರಲ್ಲಿ ಇ.ಡಿ. ಮಧ್ಯಪ್ರವೇಶಿಸುವ ಅಗತ್ಯವಿರಲಿಲ್ಲ. ಇದು ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸುವ, ಕಾಂಗ್ರೆಸ್ ನಾಯಕತ್ವವನ್ನು ಅಸ್ಥಿರಗೊಳಿಸುವ ಕ್ರಮವಾಗಿದೆ ಎಂದು ಅವರು ಹೇಳಿದ್ದಾರೆ. ಇಡಿಯವರು ತನಿಖೆ ನಡೆಸಬೇಕು ಎಂದಾದರೆ ಒಂದಿಷ್ಟು ಪ್ರೊಸೀಜರ್ ಗಳನ್ನು ಪಾಲಿಸಬೇಕಿರುತ್ತದೆ. ಹಣಕಾಸು ಅವ್ಯವಹಾರಗಳು ಅಥವಾ ಅಕ್ರಮ ಹಣ ವರ್ಗಾವಣೆಗಳಂಥ ಪ್ರಕರಣಗಳಲ್ಲಿ ಇಡಿ ದಾಳಿ ನಡೆಸಬೇಕಿದೆ. ಆದರೆ, ಮುಡಾದಲ್ಲಿ ಯಾವುದೇ ಹಣಕಾಸು ವರ್ಗಾವಣೆಯಾಗಿಲ್ಲ. ನ್ಯಾಯಾಲಯದ ವಿಚಾರಣೆಯಲ್ಲೂ ಯಾವುದೇ ಪ್ರಸ್ತಾಪವಾಗಿಲ್ಲ. ಆದರೂ, ಇಡಿ ದಾಳಿ ನಡೆಸಲಾಗಿದೆ. ಇದು ರಾಜಕೀಯ ಪ್ರೇರಿತವಾದ ದಾಳಿಯಲ್ಲದೇ ಮತ್ತೇನೂ ಅಲ್ಲ ಎಂದು ಅವರು ತಿಳಿಸಿದ್ದಾರೆ.

### ಛಲವಾದಿ ಸಮರ್ಥನೆ



ಮುಡಾ ಅಕ್ರಮ ನಿವೇಶನ ಹಂಚಿಕೆ ಸಂಬಂಧ ದಾಖಲೆಗಳನ್ನು ನೀಡುವಂತೆ ಮೂರು ಬಾರಿ ನೋಟಿಸ್ ನೀಡಿದರೂ ಯಾವುದೇ ಉತ್ತರ ಬಾರದ ಕಾರಣ ಜಾರಿನಿರ್ದೇಶನಾಲಯ ದಾಳಿ ನಡೆಸಿದೆ ಎಂದು ವಿಧಾನಪರಿಷತ್ತ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಸಮರ್ಥನೆ ನೀಡಿದ್ದಾರೆ.ಪ್ರಕರಣ ಸಂಬಂಧ ಸೂಕ್ತ ದಾಖಲೆಗಳನ್ನು ನೀಡಬೇಕೆಂದು ಮುಡಾ ಅಧಿಕಾರಿಗಳಿಗೆ 3ರಿಂದ 4 ಬಾರಿ ನೋಟಿಸ್ ನೀಡಿದ್ದರೂ ಯಾವುದೇ ಉತ್ತರ ಬಂದಿರಲಿಲ್ಲ. ಅನಿವಾರ್ಯವಾಗಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಇದರಲ್ಲಿ ತಪ್ಪೇನಿದೆ ಎಂದು ಪ್ರಶ್ನೆ ಮಾಡಿದರು. ಈಗಾಗಲೇ ಅಲ್ಲಿನ ಅಧಿಕಾರಿಗಳನ್ನು ಬೇರೆ ಕಡೆಗೆ ವರ್ಗಾವಣೆ ಮಾಡಲಾಗಿದೆ, ನಿವೇಶನ ವಾಪಸ್ ಮಾಡಲಾಗಿದೆ. ಈ ಪ್ರಕರಣ ಮುಚ್ಚಿ ಹಾಕಲು ಸರ್ಕಾರ ಸಂಚು ಮಾಡಿದೆ. ಇತ್ತ ಲೋಕಾಯುಕ್ತ ತನಿಖೆ ಆರಂಭವಾದರೂ, ಅವರ ತನಿಖೆ ಮೇಲೆ ನಮಗೆ ಅನುಮಾನ ಇದೆ. ಲೋಕಾಯುಕ್ತದವರು ಯಾರನ್ನೂ ಕರೆದು ವಿಚಾರಣೆ ಮಾಡೇ ಇಲ್ಲ. ಈ ಪ್ರಕರಣ ಸಿಬಿಐಗೆ ಕೊಡಲಿ ಎಂದರು.

## ಬೆಂಗಳೂರಿಗೆ ಕುಖ್ಯಾತಿ ತರಲು ಡಿಕೆಶಿ ಅವಿರತ ಶ್ರಮ

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಕಳೆದ ಎರಡು ಮೂರು ದಿನಗಳಿಂದ ಸುರಿದ ಭಾರಿ ಮಳೆಯಿಂದ ಹಲವು ಅವಾಂತರಗಳು ಸೃಷ್ಟಿಯಾಗಿದೆ. ಈ ಬಗ್ಗೆ ವಿಪಕ್ಷ ನಾಯಕ ಆರ್.ಅಶೋಕ್ ಅವರು ರಾಜ್ಯ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಬಯಲಾಯ್ತು ಬ್ರ್ಯಾಂಡ್ ಬೆಂಗಳೂರಿನ ಮುಖವಾಡ, ಬೀದಿಗೆ ಬಂತು ಕಾಂಗ್ರೆಸ್ ಸರ್ಕಾರದ ಬಂಡವಾಳ.

ಒಂದೇ ಮಳೆಗೆ ಬೆಂಗಳೂರಿನ ತುಂಬಾ ಬಾಯ್ತೆರೆದಿರುವ ಯಮಸ್ವರೂಪಿ ರಸ್ತೆ ಗುಂಡಿಗಳು ಭ್ರಷ್ಟ ಕಾಂಗ್ರೆಸ್ ಸರ್ಕಾರದ ಅಸಲಿಯತ್ತು ಏನೆಂಬುದನ್ನು ಬಟಾಬಯಲು ಮಾಡಿದೆ ಎಂದಿದ್ದಾರೆ.

ತನ್ನ ಭ್ರಷ್ಟಾಚಾರದ ಹಸಿವು, ದಾಹ ನೀಗಿಸಿಕೊಳ್ಳಲು ನಾಡಪ್ರಭು ಕೆಂಪೇಗೌಡರು ಕಟ್ಟಿದ ಬೆಂಗಳೂರು ನಗರವನ್ನು ಬಲಿ ಕೊಡುತ್ತಿದೆ ಎಂದು ದೂರಿದ್ದಾರೆ. ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಅವರೇ, ರಾಜಧಾನಿಯ ರಸ್ತೆಗಳು ಕೆರೆಗಳಾಗಿವೆ, ಬಡಾವಣೆಗಳು ಜಲಾವೃತವಾಗಿವೆ. ಬ್ರ್ಯಾಂಡ್ ಬೆಂಗಳೂರು ಹೆಸರಲ್ಲಿ ಲೂಟಿ ಹೊಡೆದು, ಸಿಲಿಕಾನ್ ಸಿಟಿ ಜನರನ್ನು ಮಳೆ ನೀರಲ್ಲಿ ಮುಳುಗಿಸಿ, ಬೆಂಗಳೂರಿನ ಮರ್ಯಾದೆ ಹರಾಜು ಹಾಕಿದ್ದೀರಲ್ಲ, ಇದೇನಾ ತಾವುಗಳು ಬ್ರ್ಯಾಂಡ್ ಬೆಂಗಳೂರು ನಿರ್ಮಾಣ ಮಾಡುವ ಪರಿ ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ.



**ಬಯಲಾಯ್ತು ಬ್ರ್ಯಾಂಡ್ ಬೆಂಗಳೂರಿನ ಮುಖವಾಡ**

## ಪಂಚಮಸಾಲಿ ಲಿಂಗಾಯತರ 2ಎ ಮೀಸಲಾತಿ ವಿಚಾರ

• ಉದಯವಾಹಿನಿ, ಬೆಂಗಳೂರು

ಯಾವುದೇ ಸಮುದಾಯಕ್ಕೆ ಅನ್ಯಾಯವಾಗಬಾರದು ಎಂಬುದು ನಮ್ಮ ಸರ್ಕಾರದ ಉದ್ದೇಶ. ಮೀಸಲಾತಿ ವಿಚಾರ ನ್ಯಾಯಾಲಯದಲ್ಲಿದ್ದು ನಾವು ಹಸ್ತಕ್ಷೇಪ ಮಾಡಲು ಆಗುವುದಿಲ್ಲ. ಮುಂದಿನ ದಿನಗಳಲ್ಲಿ ಪಂಚಮಸಾಲಿ ಸಮುದಾಯದ ಜತೆ ಮತ್ತೆ ಚರ್ಚೆ ಮಾಡುತ್ತೇವೆ ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.

ಪಂಚಮಸಾಲಿ ಲಿಂಗಾಯತರ ಮೀಸಲಾತಿ ವಿಚಾರವಾಗಿ ಸಮುದಾಯದ ನಾಯಕರುಗಳ ಜತೆ ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣದಲ್ಲಿ ಸಭೆ ಬಳಿಕ ಶಿವಕುಮಾರ್ ಅವರು ಮಾಧ್ಯಮಗಳಿಗೆ ಮಾಹಿತಿ ನೀಡಿದರು. ಕಾಲಮಿತಿಯಲ್ಲಿ ಮೀಸಲಾತಿ ನೀಡಬೇಕು ಎಂದರೆ ಅದು ಸಾಧ್ಯವಾಗುವುದಿಲ್ಲ ಎಂದು ಮುಖ್ಯಮಂತ್ರಿಗಳು ಸ್ಪಷ್ಟವಾಗಿ ಹೇಳಿದ್ದಾರೆ. ಹಿಂದೆ ಬಿಜೆಪಿ ಸರ್ಕಾರ ತರಾತುರಿಯಲ್ಲಿ ಬೇರೆ ಸಮಾಜಗಳಿಗೆ ನೋವಾಗುವಂತೆ ತೀರ್ಮಾನ ಮಾಡಿತ್ತು. ನಂತರ ಆ ಸರ್ಕಾರವೇ ನಾವು ಯಾವುದೇ ಮೀಸಲಾತಿ ಜಾರಿ ಮಾಡುವುದಿಲ್ಲ ಎಂದು ನ್ಯಾಯಾಲಯದಲ್ಲಿ ಅಫಿಡವಿಟ್ ಸಲ್ಲಿಸಿದೆ. ಈ ವಿಚಾರ ನ್ಯಾಯಾಲಯದಲ್ಲಿ ಇರುವಾಗ ನಾವು ಹಸ್ತಕ್ಷೇಪ ಮಾಡಲು ಸಾಧ್ಯವಿಲ್ಲ ಎಂದು ತಿಳಿಸಿದರು. ಈಗ ಚುನಾವಣಾ ನೀತಿ ಸಂಹಿತೆ ಇದೆ. ಇದಾದ ನಂತರ ಸಭೆ ಕರೆದು ಮಾತನಾಡುತ್ತೇವೆ ಎಂದು ಸಮುದಾಯದ ಮುಖಂಡರುಗಳಿಗೆ ಗೌರವಯುತವಾಗಿ ಹೇಳಿದ್ದೇವೆ ಅವರ ಭಾವನೆ, ಕಳಕಳಿ ನಮಗೆ ಅರ್ಥವಾಗುತ್ತದೆ. ಮುಂದಿನ ದಿನಗಳಲ್ಲಿ ನಾವು ಅವರ ವಿಚಾರವನ್ನು ಪರಿಗಣಿಸುತ್ತೇವೆ ಎಂದು ತಿಳಿಸಿದರು.

**ಈ ಮಾತು ಕೊಟ್ಟ ಡಿಸಿಎಂ ಡಿಕೆಶಿ**



# 3 ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ಬಿಜೆಪಿಯ ಸಂಭವನೀಯ ಅಭ್ಯರ್ಥಿಗಳ ಪಟ್ಟಿ ರೆಡಿ

● ಚನ್ನಪಟ್ಟಣ, ಶಿಗ್ಗಾವಿ ಹಾಗೂ ಸಂಡೂರು ಕ್ಷೇತ್ರಗಳಿಗೆ ಆಕಾಂಕ್ಷಿಗಳ ಪಟ್ಟಿ ಹೆಚ್ಚಳ ● ಪಕ್ಷದ ರಾಷ್ಟ್ರೀಯ ನಾಯಕರೇ ಅಭ್ಯರ್ಥಿಗಳ ಹೆಸರನ್ನು ಅಂತಿಮಗೊಳಿಸಲಿ

• ಉದಯವಾಹಿನಿ, ಬೆಂಗಳೂರು

ಪ್ರತಿಷ್ಠೆಯ ಕಣವಾಗಿ ಪರಿಣಮಿಸಿರುವ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ಅಭ್ಯರ್ಥಿಗಳ ಆಯ್ಕೆ ಸಂಬಂಧ ವರಿಷ್ಠರ ಚರ್ಚಿಸಲು ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಭಾನುವಾರ ನವದೆಹಲಿಗೆ ತೆರಳುತ್ತಿದ್ದಾರೆ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡ ಕೇಂದ್ರ ಗೃಹಸಚಿವ ಅಮಿತ್ ಷಾ, ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಸೇರಿದಂತೆ ಮತ್ತಿತರ ಪ್ರಮುಖರ ಜೊತೆ ಚರ್ಚಿಸಿ ಅಭ್ಯರ್ಥಿಗಳ ಸಂಭವನೀಯ ಪಟ್ಟಿಯನ್ನು ನೀಡಲಿದ್ದಾರೆ.

ನಂತರ ವರಿಷ್ಠರು ಮತ್ತೊಂದು ಸುತ್ತಿನ ಮಾತುಕತೆ ನಡೆಸಿ ಅಂತಿಮವಾಗಿ ಪಕ್ಷದ ಕೇಂದ್ರ ಚುನಾವಣಾ ಸಮಿತಿಗೆ ಕಳುಹಿಸಿ ಅಭ್ಯರ್ಥಿಗಳ ಹೆಸರನ್ನು ಅಂತಿಮಗೊಳಿಸಲಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಚನ್ನಪಟ್ಟಣ, ಶಿಗ್ಗಾವಿ ಹಾಗೂ ಸಂಡೂರು ವಿಧಾನಸಭಾ ಕ್ಷೇತ್ರಗಳಿಗೆ ಆಕಾಂಕ್ಷಿಗಳ ಪಟ್ಟಿ ಹೆಚ್ಚಾಗಿದ್ದರಿಂದ ಅಂತಿಮವಾಗಿ ಪಕ್ಷದ ರಾಷ್ಟ್ರೀಯ ನಾಯಕರೇ ಅಭ್ಯರ್ಥಿಗಳ ಹೆಸರನ್ನು ಅಂತಿಮಗೊಳಿಸಲಿ ಎಂಬುದು ರಾಜ್ಯ ನಾಯಕರ ಒತ್ತಾಸೆಯಾಗಿದೆ. ಯಾರಿಗೆ ಟಿಕೆಟ್ ಕೊಟ್ಟರೂ ಟಿಕೆಟ್ ಕೈ ತಪ್ಪಿದವರು ಮುನಿಸಿಕೊಂಡು ಅಧಿಕೃತ ಅಭ್ಯರ್ಥಿ ವಿರುದ್ಧ ಬಂಡಾಯ ಸಾರಬಹುದೆಂಬ ಎಚ್ಚರಿಕೆ ಹಿನ್ನಲೆಯಲ್ಲಿ ಎಲ್ಲಾವನ್ನೂ ದೆಹಲಿ ನಾಯಕರೇ ತೀರ್ಮಾನಿಸಲಿ ಎಂಬ ನಿರ್ಧಾರಕ್ಕೆ ರಾಜ್ಯ ನಾಯಕರು ಬಂದಂತಿದೆ.



**ಟಿಕೆಟ್‌ಗೆ ಪಕ್ಷಗಳಲ್ಲಿ ಕಚ್ಚಾಟ**

**ಇಬ್ಬರ ಜಗಳದಲ್ಲಿ ಮೂರನೇಯವರಿಗೆ ಲಾಭ**

ವಿಧಾನಸಭೆ ಮತ್ತು ಲೋಕಸಭೆ ಚುನಾವಣೆಯಲ್ಲಿ ಸೋತಿರುವ ಶ್ರೀರಾಮುಲು, ಕಳೆದ ವಿಧಾನಸಭೆ ಚುನಾವಣೆಯಲ್ಲಿ ಪರಾಭವಗೊಂಡಿದ್ದ ಶಿಲ್ಪ, ಮಾಜಿ ಸಂಸದ ಎನ್.ವೈ.ದೇವೇಂದ್ರಪ್ಪ, ಕೆ.ಎಸ್.ದಿವಾಕರ್ ಸೇರಿದಂತೆ ಹಲವು ಹೆಸರುಗಳು ಮುಂಚೂಣಿಯಲ್ಲಿವೆ. ನಾಮಪತ್ರ ಸಲ್ಲಿಸಲು ಇದೇ ತಿಂಗಳು 25 ಕಡೆಯ ದಿನವಾಗಿರುವುದರಿಂದ ಮುಂದಿನ ವಾರ ಅಭ್ಯರ್ಥಿಗಳ ಹೆಸರು ಅಧಿಕೃತವಾಗಿ ಘೋಷಣೆಯಾಗಲಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ರಾಜ್ಯ ನಾಯಕರ ಮಾತನ್ನು ಕೇಳುವ ಸ್ಥಿತಿಯಲ್ಲಿ ಇಲ್ಲದ ಕಾರಣ ಯೋಗೇಶ್ವರ್ ಸಮಾಧಾನಪಡಿಸಿ ಅವರಿಗೆ ಟಿಕೆಟ್ ನೀಡಬೇಕೇ ಇಲ್ಲವೇ ಸಂಪುಟದ ಯಾವುದಾದರೂ ಸ್ಥಾನಮಾನವನ್ನು ನೀಡುವುದಾದರೆ ನಮ ಅಭ್ಯಂತರವಿಲ್ಲ. ಇಬ್ಬರ ಜಗಳದಲ್ಲಿ ಮೂರನೇಯವರಿಗೆ ಲಾಭ ಎಂಬಂತೆ ಯೋಗೇಶ್ವರ್ ಬಂಡಾಯ ಅಭ್ಯರ್ಥಿಯಾಗಿ ನಿಂತರೆ ಅದು ನೇರವಾಗಿ ಕಾಂಗ್ರೆಸ್ಗೆ ಅನುಕೂಲವಾಗುತ್ತದೆ ಎಂಬುದನ್ನು ವಿಜಯೇಂದ್ರ ಮನವರಿಕೆ ಮಾಡಲಿದ್ದಾರೆ.

ಇಲ್ಲಿ ಯಾವುದೇ ಅಭ್ಯರ್ಥಿ ಹೆಸರನ್ನು ಸಿದ್ದಪಡಿಸಿದರೂ ಅಂತಿಮವಾಗಿ ವರಿಷ್ಠರ ಮುದ್ರೆ ಬಿದ್ದ ನಂತರವೇ ಅಧಿಕೃತವಾಗುತ್ತದೆ ಎಂಬ ಹಿನ್ನಲೆಯಲ್ಲಿ ಕೆಲವು ಸಂಭವನೀಯ ಪಟ್ಟಿಗಳನ್ನು ಮಾತ್ರ ವಿಜಯೇಂದ್ರ ವರಿಷ್ಠರಿಗೆ ನೀಡಲಿದ್ದಾರೆ ಎಂದು ಗೊತ್ತಾಗಿದೆ.

ಕಗ್ಗಂಟಾಗಿ ಪರಿಣಮಿಸಿರುವ ಚನ್ನಪಟ್ಟಣ ಕ್ಷೇತ್ರಕ್ಕೆ ಜೆಡಿಎಸ್, ಬಿಜೆಪಿ ಬೆಂಬಲಿತ ಎನ್ಡಿಎ ಅಭ್ಯರ್ಥಿಯನ್ನು ಕಣಕ್ಕಿಳಿಸಲು ಸಲಹೆ ಮಾಡಲಿದ್ದಾರೆ. ಈ ಕ್ಷೇತ್ರದ ಪ್ರಬಲ ಆಕಾಂಕ್ಷಿಯಾಗಿರುವ ಸಿ.ಪಿ.ಯೋಗೇಶ್ವರ್ ಅವರಿಗೆ ಟಿಕೆಟ್ ನೀಡುವುದು ಇಲ್ಲವೇ ಬಿಡುವುದು ವರಿಷ್ಠರೇ ತೀರ್ಮಾನಿಸಬೇಕು. ಅವರನ್ನು ಕರೆಸಿ ಮಾತುಕತೆ ನಡೆಸಿ ಮನವೊಲಿಸುವ ಜವಾಬ್ದಾರಿಯನ್ನು ದೆಹಲಿ ನಾಯಕರಿಗೆ ಬಿಡಲಾಗಿದೆ. ಬಸವರಾಜ ಬೊಮ್ಮಾಯಿ ಅವರ ರಾಜೀನಾಮೆಯಿಂದ ತೆರವಾಗಿರುವ ಶಿಗ್ಗಾವಿ ಕ್ಷೇತ್ರಕ್ಕೆ ಪುತ್ರ ಭರತ್ ಬೊಮ್ಮಾಯಿ ಅಭ್ಯರ್ಥಿಯಾಗುವುದು ಬಹುತೇಕ ಖಚಿತ.ನಿಮ ಮಗನಿಗೆ ಕ್ಷೇತ್ರದಲ್ಲಿ ಕೆಲಸ ಮಾಡಲು ಸೂಚಿಸಿ ಎಂದು ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಬೊಮ್ಮಾಯಿಗೆ ಸೂಚಿಸಿರುವುದರಿಂದ ಬಹುತೇಕ ಭರತ್ ಬೊಮ್ಮಾಯಿ ಮೊದಲ ಬಾರಿಗೆ ಉಪ ಚುನಾವಣೆಯ ಅಗ್ನಿ ಪರೀಕ್ಷೆ ಎದುರಿಸಲಿದ್ದಾರೆ. ಇದೇ ಕ್ಷೇತ್ರದಿಂದ ಮಾಜಿ ಸಚಿವ ಮುರುಗೇಶ್ ನಿರಾಣಿ ತಮಗೆ ಟಿಕೆಟ್ ನೀಡಬೇಕೆಂದು ದೆಹಲಿಯಲ್ಲಿ ಲಾಬಿ ನಡೆಸಲಿದ್ದಾರೆ. ಅವರಿಗೆ ಟಿಕೆಟ್ ನೀಡಿದರೆ ಹೊರಗಿನವರು ಎಂಬ ಆಪಾದನೆ ಬರುವ ಹಿನ್ನಲೆಯಲ್ಲಿ ಭರತ್ ಬೊಮ್ಮಾಯಿ ಅವರನ್ನೇ ಕಣಕ್ಕಿಳಿಸಲು ಮುಂದಾಗಿದೆ. ಬಳ್ಳಾರಿ ಜಿಲ್ಲೆ ಸಂಡೂರು ಕ್ಷೇತ್ರಕ್ಕೆ ಹಲವು ಹೆಸರುಗಳು ಕೇಳಿಬಂದಿವೆ. ಜಿಲ್ಲೆಯ ಮುಖಂಡರು ಒಬ್ಬೊಬ್ಬರ ಹೆಸರುಗಳನ್ನು ಶಿಫಾರಸ್ಸು ಮಾಡಿದ್ದಾರೆ.

**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,898/Gram24ct ₹7,240/Gram22ct | ಬೆಳ್ಳಿ: ₹99.00/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ತಾನುಂಟು ಜಗಮುಂಟು

ನಿಜಗುಣರ ಪರಮಾನುಭವ ಬೋಧೆಯ ಮಾತು. ಜೀವನಿಗೆ ತಾನು ಹುಟ್ಟುವ ಮೊದಲು ಈ ಜಗದ ಅರಿವಿಲ್ಲ. ಹುಟ್ಟಿದ ಬಳಿಕ ಈ ಜಗದ ಅರಿವು ಒಡನಾಟ. ನಾನು ನನ್ನದೆಂಬ ಬಡಿದಾಟ. ಜೀವನು ಈ ಸ್ಥೂಲ ದೇಹವನ್ನು ತೊರೆದ ಬಳಿಕವೂ ಈ ಜಗದ ಅರಿವು ಸಂಬಂಧ ಸಂಪರ್ಕವಿಲ್ಲ. ಆದ್ದರಿಂದ ತಾನಿದ್ದರೆ ಈ ಜಗತ್ತು, ತಾನಿಲ್ಲದಿದ್ದರೆ ಈ ಜಗತ್ತು ಇಲ್ಲ ಶೂನ್ಯ. ಒಬ್ಬ ಸತ್ತ ಮಾತ್ರಕ್ಕೆ ಜಗತ್ತು ಸುಳ್ಳು ಹೇಗೆ? ಉಳಿದವರಿಗೆ ಜಗತ್ತು ಇದ್ದೇ ಇರುವುದಲ್ಲ ಎಂಬ ಪ್ರಶ್ನೆ ಸಹಜ. ಆದರೆ ಇಲ್ಲಿ ಯಾವ ವ್ಯಕ್ತಿಗೆ ಉಪದೇಶ ನೀಡಲಾಗುತ್ತಿದೆಯೋ ಆ ವ್ಯಕ್ತಿಗೆ ಸುಳ್ಳು ಎಂದರ್ಥ. ಆ ವ್ಯಕ್ತಿ ಯಾರು ಬೇಕಾದರೂ ಆಗಬಹುದು. ನಮಗಾಗಿ ನಮ್ಮ ಬದುಕು. ನಾವೇ ಸ್ಥಿರ ಅಲ್ಲವಾದ ಬಳಿಕ ಜಗತ್ತು ನಮ್ಮೊಂದಿಗೆ ಸ್ಥಿರ ಎಂದು ಹೇಳಲಾಗದು. ಆದ್ದರಿಂದ ಜಗತ್ತು ಮಿಥ್ಯಾ ಎಂಬ ಅಭಿಪ್ರಾಯ. ಇನ್ನು ದೇಹಸಹಿತನಾದಾಗ ಜಗತ್ತನ್ನು ಕಾಣುವ ಜೀವ ದೃಕ್ ನೋಡುವವ ಎನಿಸುವನು. ಜಗತ್ತು ಜೀವನಿಗೆ ದೃಶ್ಯ ಎನಿಸುವುದು. ತನ್ನ ಹಾಗೂ ಜಗದ ಮೂಲ ಸ್ವರೂಪವನ್ನು ತಿಳಿದ ಬಳಿಕ ಎರಡೂ ಬ್ರಹ್ಮ ಪರಮಾತ್ಮನ ಸ್ವರೂಪವೇ ಆಗಿರುವುದರಿಂದ ದೃಕ್ ದೃಶ್ಯ ಎಂಬ ಭೇದ ಅಡಗಿ ತನಗಿಂತ ಜಗತ್ತು ಬೇರೆ ಎಂಬುದಾಗಿ ತೋರದು. ತಾನು ಜಗತ್ತು ಭೇದ ಅಡಗಿ ಎರಡೂ ಶೂನ್ಯ ಎನಿಸುವವು.

## ಬೆಂಗಳೂರು ಕಾಲೇಜಿಗೆ ಬಾಂಬ್ ಬೆದರಿಕೆ ಹಾಕಿದ್ದವ ಅರೆಸ್ಟ್

• ಉದಯವಾಹಿನಿ, ಬೆಂಗಳೂರು

ನಗರದ ಕಾಲೇಜೊಂದಕ್ಕೆ ಬಾಂಬ್ ಬೆದರಿಕೆ ಹಾಕಿದ್ದ ಆರೋಪಿಯನ್ನು ವಿವಿ ಪುರಂ ಪೊಲೀಸರು ಪಶ್ಚಿಮ ಬಂಗಾಳದಲ್ಲಿ ಬಂಧಿಸಿದ್ದಾರೆ. ಆರೋಪಿಯು ಅಕ್ಟೋಬರ್ 4ರಂದು ಬಸವನಗುಡಿಯ ಬಿಐಟಿ ಕಾಲೇಜಿಗೆ ಇ-ಮೇಲ್ ಮೂಲಕ ಬಾಂಬ್ ಬೆದರಿಕೆ ಹಾಕಿದ್ದ. ಕಾಲೇಜು ಆವರಣದಲ್ಲೇ ಹೈಡ್ರೋಜನ್ ಸುಧಾರಿತ ಐಇಡಿ (ಹೆಇಡಿ) ಇಟ್ಟಿದ್ದು, ಅದನ್ನು ಸ್ಫೋಟಿಸುವುದಾಗಿ ತಿಳಿಸಿದ್ದ.ಈ ಸಂಬಂಧ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದ ವಿವಿ ಪುರಂ ಪೊಲೀಸರು ಪಶ್ಚಿಮ ಬಂಗಾಳದ ಡಾರ್ಜಿಲಿಂಗ್‌ನಲ್ಲಿ ಆರೋಪಿಯನ್ನ ಬಂಧಿಸಿದ್ದಾರೆ. ಆರೋಪಿಯಿಂದ ಲ್ಯಾಪ್ ಟಾಪ್, ಮೊಬೈಲ್ ಫೋನ್‌ಗಳನ್ನ ವಶಕ್ಕೆ ಪಡೆಯಲಾಗಿದೆ. ಇನ್ನೂ ವಿಚಾರಣೆ ವೇಳೆ ಆರೋಪಿಯು ಇದೇ ರೀತಿ 10 ಪ್ರಕರಣಗಳಲ್ಲಿ ಭಾಗಿಯಾಗಿರುವುದು ಬೆಳಕಿಗೆ ಬಂದಿದೆ.

## ರಾಜ್ಯದ ಶಾಲೆಗಳಲ್ಲಿ ಎಐ ಬಳಕೆಗೆ ಚಿಂತನೆ

• ಉದಯವಾಹಿನಿ, ಬೆಂಗಳೂರು

ಮಕ್ಕಳಲ್ಲಿ ಪ್ರಾಥಮಿಕ ಹಂತದಲ್ಲೇ ಶೈಕ್ಷಣಿಕ ಹಾಗೂ ತಂತ್ರಜ್ಞಾನದ ಬಗ್ಗೆ ಅರಿವು ಮೂಡಿಸಲು ಸಚಿವ ಮಧು ಬಂಗಾರಪ್ಪ ಹೊಸ ಮಾರ್ಗಸೂಚಿಯನ್ನು ರೂಪಿಸಿದ್ದಾರೆ

ಈ ಬಗ್ಗೆ ಮಾತನಾಡಿದ ಅವರು, ಶಾಲೆಗಳಲ್ಲಿ ಈಗಿನಿಂದಲೇ ಎಐ ತಂತ್ರಜ್ಞಾನ ತರಲು ಪ್ರಯತ್ನಿಸಬೇಕು, ಆಗ ಮಾತ್ರ ಅವರು ದೊಡ್ಡವರಾದ ಮೇಲೆ ಈಗಿನ ತಂತ್ರಜ್ಞಾನದ ಬಗ್ಗೆ ಅಪಾರ ಅರಿವು ಮೂಡಿಸುತ್ತದೆ ಎಂದರು. ನಾನು ಶಿಕ್ಷಣ ಮತ್ತು ಸಾಕ್ಷರತೆ ಸಚಿವನಾದಾಗ ರಾಹುಲ್ ಗಾಂಧಿ ಅವರಿಂದ ಸಿಎಂ ಸಿದ್ದರಾಮಯ್ಯ ಅವರಿಗೆ ಪತ್ರ ರವಾನಿಸಲಾಗಿತ್ತು. ಆಗ ಇಂತಹ ಕಾರ್ಯವನ್ನು ಶಾಲೆಗಳಲ್ಲಿ ಮಾಡಬೇಕು ಎಂದು ಯೋಚಿಸಿದ್ದೆ, ಇದೀಗ ಈ ಬಗ್ಗೆ ತಾನೇ ಖುದ್ದಾಗಿ ರಾಹುಲ್ ಗಾಂಧಿಯವರಿಗೆ ಮನವಿ ಮಾಡಿದ್ದೇನೆ ಎಂದು ಮಧು ಬಂಗಾರಪ್ಪ ಹೇಳಿದರು.

ಮಕ್ಕಳಿಗೆ ಆರಂಭ ಹಂತದಲ್ಲೇ ಈ ರೀತಿಯ ಬಗ್ಗೆ ಜ್ಞಾನ ಮೂಡಿಸಿದರೆ ಭವಿಷ್ಯದಲ್ಲಿ ಸಹಾಯವಾಗುತ್ತದೆ. ಈ ಉಪಕ್ರಮದಲ್ಲಿ ನಮಗೆ ಸಹಾಯ ಮಾಡಲು ದೊಡ್ಡ ಕಂಪನಿಗಳು ಮುಂದೆ ಬಂದಿರುವುದಕ್ಕೆ ನನಗೆ ತುಂಬಾ ಸಂತೋಷವಾಗಿದೆ ಎಂದು ತಿಳಿಸಿದರು. ಹಾಗೆ ಮಕ್ಕಳಿಗೆ ಪ್ರಮಾಣಿತ ಬೋಧನಾ ಪ್ರಕ್ರಿಯೆಯ ಹೊರತಾಗಿ, ಎಐ ನಂತಹ ತಂತ್ರಜ್ಞಾನವನ್ನು ಮಕ್ಕಳಿಗೆ ವಿಭಿನ್ನ ದೃಷ್ಟಿಕೋನದಲ್ಲಿ ಕಲಿಯಲು ಸಹಾಯ ಮಾಡುತ್ತದೆ ಎಂದು ಸಚಿವ ಮಧು ಬಂಗಾರಪ್ಪ ಹೇಳಿದರು.

## ಆಸ್ತಿ ನೋಂದಣಿಗೆ ತುರ್ತು ಇ- ಖಾತಾ ಪಡೆಯುವುದು ಹೇಗೆ ಇಲ್ಲಿದೆ ಸರಳ ಮಾರ್ಗ

• ಉದಯವಾಹಿನಿ, ಬೆಂಗಳೂರು

ಈಗಾಗಲೇ ಆಸ್ತಿ ಸೇಫ್ಟಿಗಾಗಿ ಹೊಸ ನಿಯಮ ಜಾರಿಯಾಗಿದ್ದು, ಅಕ್ಟೋಬರ್ ತಿಂಗಳೊಳಗೆ ಉಪ-ರಿಜಿಸ್ಟ್ರಾರ್‌ನಲ್ಲಿ ತುರ್ತು ಆಸ್ತಿ ನೋಂದಣಿಯನ್ನು ಹೊಂದಿದ್ದರೇ ಇ-ಖಾತಾವನ್ನು ಪಡೆಯಲು ಬಿಬಿಎಂಪಿ ಕೆಲವು ಹಂತಗಳನ್ನು ತಿಳಿಸಿದೆ.ಆಸ್ತಿ ಖಾತಾ ಪಡೆಯುವ ಪ್ರಕಿಯೆಯನ್ನು ಸರಳಗೊಳಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಂಪರ್ಕರಹಿತ ಇ-ಖಾತಾ ವಿತರಣಾ ವ್ಯವಸ್ಥೆಯನ್ನು ಆರಂಭಿಸಿದೆ. ಆಸ್ತಿ ಮಾಲೀಕರು ತಮ್ಮ ಸ್ವತ್ತಿನ ಇ-ಖಾತಾವನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ. ಬಿಬಿಎಂಪಿ ಅಂತಿಮ ಇ-ಖಾತಾ ಪಡೆಯಲು ಹಂತಗಳು ಈ ರೀತಿ ಇದೆ. https://BBMPeAasthi.karnataka.gov.in ನಲ್ಲಿ ವಾರ್ಡ್ ವಾರು ಏಕತಾ ಪಟ್ಟಿಯಿಂದ ನಿಮ್ಮ ಡ್ರಾಫ್ಟ್ ಇ ಖಾತಾವನ್ನು ಆನ್‌ಲೈನ್‌ನಲ್ಲಿ ಡೌನ್‌ಲೋಡ್ ಮಾಡಿ. ಆಸ್ತಿ ತೆರಿಗೆಗಾಗಿ ಬಿಬಿಎಂಪಿ ಆಸ್ತಿ ತೆರಿಗೆ ರಶೀದಿಯಿಂದ ನಿಮ್ಮ ವಾರ್ಡ್ ಹೆಸರು ಮತ್ತು ಸಂಖ್ಯೆಯನ್ನು ತಿಳಿದುಕೊಳ್ಳಬಹುದು.

ಮಾಲೀಕರ ಆಧಾರ್ ಆಧಾರಿತ ಇಕೆವೈಸಿ, ಆಸ್ತಿಯನ್ನು ಪಡೆದ ನೋಂದಾಯಿತ Deed ಸಂಖ್ಯೆ ಸಲ್ಲಿಸಬೇಕು. ಆಸ್ತಿಯ ಮುಂದೆ ಹೊರಗೆ ನಿಂತಿರುವ ಫೋಟೋ ಹಾಗೂ ಬೆಸ್ಕಾಂ ಮೀಟರ್ ಸಂಖ್ಯೆ ಸಲ್ಲಿಸಬೇಕು. ಇದೆಲ್ಲವನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಿದ ನಂತರ, ಎಲ್ಲವೂ ಸರಿ ಯಾಗಿದ್ದರೇ ಒಂದು ದಿನದೊಳಗೆ ಅಂತಿಮ ಏಕತಾವನ್ನು ನೀಡುವ ಸಹಾಯಕ ಕಂದಾಯ ಅಧಿಕಾರಿಯನ್ನು ಭೇಟಿ ಮಾಡಿ. ಆನ್‌ಲೈನ್‌ನಲ್ಲಿ ದಾಖಲೆಗಳನ್ನು ಅಪ್ಲೋಡ್ ಮಾಡಲು ಸಾಧ್ಯವಾಗದಿದ್ದರೇ, ಸಹಾಯಕ ಕಂದಾಯ ಅಧಿಕಾರಿಯನ್ನು ಭೇಟಿಯಾಗಬಹುದು. ಆಸ್ತಿ ಮಾಲೀಕರು ಅಂತಿಮ ಇ-ಖಾತಾ ವಿತರಿಸದಂತೆ ಆಕ್ಷೇಪಣೆಯನ್ನು ಸಲ್ಲಿಸಬಹುದಾಗಿದೆ ಎಂದು ಬಿಬಿಎಂಪಿ ತಿಳಿಸಿದೆ. ಈ ವೇಳೆ ಯಾವುದೇ ರೀತಿಯ ಗೊಂದಗಳಿದ್ದರೇ 1533 ಗೆ ಕರೆ ಮಾಡಿ ಅಥವಾ BBMPeKhata@gmail.com ಗೆ ಇಮೇಲ್ ಮಾಡಲು ಬಿಬಿಎಂಪಿ ತಿಳಿಸಿದೆ.

## ತುಮಕೂರು ಜಿಲ್ಲೆಯ ಹೆಸರು ಬದಲಾಗುವುದೇ?

• ಉದಯವಾಹಿನಿ, ಬೆಂಗಳೂರು

ತುಮಕೂರು ಜಿಲ್ಲೆಯನ್ನು ಗ್ರೇಟರ್ ಬೆಂಗಳೂರು ಎಂದು ಮಾಡುವ ಆಲೋಚನೆ ಮುಂದಿನ ದಿನಗಳಲ್ಲಿದೆ ಎಂದು ಗೃಹಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಮನಗರವನ್ನು ಬೆಂಗಳೂರು ದಕ್ಷಿಣ ಎಂದು ಬದಲಾವಣೆ ಮಾಡಲಾಗಿದೆ.ಅದೇ ರೀತಿ ತುಮಕೂರನ್ನು ಬೆಂಗಳೂರು ಉತ್ತರ ಎಂದು ಬದಲಾಯಿಸುವ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

ತುಮಕೂರು ಬೆಂಗಳೂರಿನ ಸಮೀಪದಲ್ಲಿದೆ. ಅಷ್ಟೇ ಅಲ್ಲದೇ ತುಮಕೂರು ಸಾಕಷ್ಟು ಅಭಿವೃದ್ಧಿಯನ್ನು ಹೊಂದುತ್ತಿದೆ. ಈಗಾಗಲೇ ಮೆಟ್ರೋ ಲೈನ್‌ನನ್ನು ತುಮಕೂರು ಜಿಲ್ಲೆಗೆ ತರಲು ಮನವಿ ಮಾಡಿದ್ದೇವೆ. ಹೀಗಾಗಿ ಮುಂದಿನ ದಿನಗಳಲ್ಲಿ ತುಮಕೂರು ಜಿಲ್ಲೆಯನ್ನು ಗ್ರೇಟರ್ ಬೆಂಗಳೂರು ಎಂದು ಮರುನಾಮಕರಣ ಮಾಡಲು ಪ್ರಸ್ತಾಪ ಸಲ್ಲಿಸುವ ಯೋಚನೆಯಿದೆ ಎಂದು ಹೇಳಿದರು.

ಒಳ ಮೀಸಲಾತಿಯನ್ನು ನೀಡುತ್ತೇವೆ ಎಂದು ಈಗಾಗಲೇ ಅನೇಕ ವೇದಿಕೆಗಳಲ್ಲಿ ತಿಳಿಸಿದ್ದೇವೆ. ಆದರೆ ಇದರಲ್ಲಿ ಕೆಲವು ಡಾಟಾಗಳ ಸಮಸ್ಯೆಗಳು ಇವೆ ಎಂದು ಹೇಳಲಾಗುತ್ತಿದೆ. ಅದೇ ರೀತಿ ಜಾತಿ ಗಣತಿ ಮಾಡುವುದರಿಂದ ಜನಸಂಖ್ಯೆಯೂ ಸಂರಿಯಾದ ರೀತಿಯಲ್ಲಿ ತಿಳಿಯುತ್ತದೆ. ಜಾತಿ ಗಣತಿ ಮೂಲಕ ಒಳ ಮೀಸಲಾತಿ ನೀಡಲು ಅನುಕೂಲವಾಗುತ್ತದೆ ಎಂದರು. ಕಲಬುರಗಿ ಜಿಲ್ಲೆಯ ಜೈಲಿನಲ್ಲಿ ಬ್ಲಾಕ್ ಮೇಲ್ ಪ್ರಕರಣಕ್ಕೆ ಸಂಬಂಧಿಸಿ ಪ್ರತಿಕ್ರಿಯೆ ನೀಡಿದರು. ಡಿಜಿಯವರೇ ಸ್ಥಳಕ್ಕೆ ಭೇಟಿ ನೀಡಿದ್ದಾರೆ. ಅಲ್ಲಿ ಪರಿಶೀಲನೆ ನಡೆಸಿ ಯಾವ ರೀತಿಯ ಕ್ರಮಗಳನ್ನು ತೆಗೆದುಕೊಳ್ಳಬೇಕು ಎನ್ನುವುದನ್ನು ನಿರ್ಧರಿಸುತ್ತಾರೆ ಎಂದು ಹೇಳಿದರು.

# ಈಗಲೇ ಯಾವುದೇ ತೀರ್ಮಾನ ಕೈಗೊಳ್ಳಲು ಸಾಧ್ಯವಿಲ್ಲ

### ಪಂಚಮಸಾಲಿ ಮೀಸಲಾತಿ ವಿಚಾರ: ಹೀಗಿದೆ ಸಿಎಂ ಸಿದ್ಧರಾಮಯ್ಯ ನೇತೃತ್ವದಲ್ಲಿ ನಡೆದ ಸಭೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಎಲ್ಲಾ ದುರ್ಬಲ ವರ್ಗದವರಿಗೂ ನ್ಯಾಯ

ಸಿಎಂ ಸಿದ್ದರಾಮಯ್ಯ ಅವರು ಶುಕ್ರವಾರ ಪಂಚಮಸಾಲಿ ಸಮುದಾಯದ ಮೀಸಲಾತಿ ಕುರಿತಾಗಿ ಜಯಮೃತ್ಯುಂಜಯ ಸ್ವಾಮೀಜಿ ಅವರ ನೇತೃತ್ವದ ನಿಯೋಗ ದೊಂದಿಗೆ ನಡೆಸಿದ ಸಭೆಯ ಮುಖ್ಯಾಂಶಗಳ ಪ್ರವರ್ಗ-2ಎ ಅಡಿ ಮೀಸಲಾತಿ ಒದಗಿಸುವಂತೆ ಪಂಚಮಸಾಲಿ ಲಿಂ ಗಾಯತ ಸಮುದಾಯದ ಬೇಡಿಕೆ ಕುರಿತು ಕಾ ನೂನು ಪ್ರಕಾರ, ಸಂವಿಧಾನದ ಆಶಯಕ್ಕೆ ಅನು ಗುಣವಾಗಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಅವರು ಹೇಳಿದರು.

★ ಸರ್ಕಾರ ಮೀಸಲಾತಿ ವಿಷಯದಲ್ಲಿ ಮುಕ್ತ ಮನಸ್ಸು ಹೊಂದಿದೆ. ನಮ್ಮ ಸರ್ಕಾರ ಸಾಮಾಜಿಕ ನ್ಯಾಯದ ಪರವಾಗಿದೆ. ಎಲ್ಲಾ ದುರ್ಬಲ ವರ್ಗದವರಿಗೂ ನ್ಯಾಯ ದೊರೆಯಬೇಕು ಎಂಬುವುದು ನಮ್ಮ ಸರ್ಕಾರದ ನಿಲುವು.

★ ಶಾಶ್ವತವಾದ ಹಿಂದುಳಿದ ವರ್ಗಗಳ ಆಯೋಗವಿದೆ. ಅದರ ಅಂತಿಮ ಶಿಫಾರಸ್ಸು ಇನ್ನೂ ನಮ್ಮ ಕೈಗೆ ತಲುಪಿಲ್ಲ. ಚುನಾವಣೆ ನೀತಿ ಸಂಹಿತೆ ಇರುವುದರಿಂದ ಮೀಸಲಾತಿ ಕುರಿತಾಗಿ ಅಡ್ವೊಕೇಟ್ ಜನರಲ್, ಕಾನೂನು ಇಲಾಖೆ, ತಜ್ಞರೊಂದಿಗೆ, ಸಂಪುಟದಲ್ಲಿ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು. ಈಗಲೇ ಯಾವುದೇ ತೀರ್ಮಾನ ಕೈಗೊಳ್ಳಲು ಸಾಧ್ಯವಿಲ್ಲ.

★ ಸಂವಿಧಾನದ ಆಶಯದಂತೆ ಕ್ರಮ. ಯಾವುದೇ ತೀರ್ಮಾನ ಕೈಗೊಳ್ಳುವುದಿದ್ದರೂ, ಕಾನೂನು ಪ್ರಕಾರ ಪ್ರಾಮಾಣಿಕವಾಗಿ ಕೈಗೊಳ್ಳಲಾಗುವುದು.

★ ಮೀಸಲಾತಿ ಕುರಿತು ಶಾಶ್ವತ ಹಿಂದುಳಿದ ವರ್ಗಗಳ ಆಯೋಗದ ಮುಂದೆ ಪ್ರಸ್ತಾವನೆ ಸಲ್ಲಿಸಬೇಕು, ಅದರ ಶಿಫಾರಸು ಅನ್ವಯ ಕ್ರಮ ಕೈಗೊಳ್ಳಬೇಕು ಎಂದು ಈ ಹಿಂದೆ ಪಂಚಮಸಾಲಿ ಸಮುದಾಯದ ಮುಖಂಡರು ಭೇಟಿಯಾದಾಗ ನಾ ನು ಸಲಹೆ ನೀಡಿದ್ದೆ. ಯಾವುದೇ ತೀರ್ಮಾನ ನ್ಯಾಯ ಯುತವಾಗಿ ಎಲ್ಲರಿಗೂ ಒಪ್ಪಿತವಾಗುವಂತೆ, ನ್ಯಾಯಾ ಲಯಕ್ಕೂ ಒಪ್ಪಿಗೆಯಾಗುವಂತಿರಬೇಕು ಎಂದರು.

**ಪ್ರವರ್ಗ-3 ಬಿ ಯಲ್ಲಿದೆ**

**ಪಂಚಮಸಾಲಿ ಸಮುದಾಯ ಪ್ರಸ್ತುತ ಪ್ರವರ್ಗ-3 ಬಿ ಯಲ್ಲಿದೆ. ಈ ಪ್ರವರ್ಗದಡಿ ಲಿಂಗಾಯತ ಹಾಗೂ ಅದರ ಉಪಜಾತಿಗಳೇ ಮೀಸಲಾತಿ ಸೌಲಭ್ಯ ಪಡೆಯುತ್ತಿವೆ. ಹಾಗಾಗಿ 2ಎ ಪ್ರವರ್ಗದಡಿ ಪಂಚಮಸಾಲಿಗರನ್ನು ಸೇರಿಸಬೇಕೆಂದು ನಿಯೋಗ ಒತ್ತಾಯಿಸಿತು.**

**ಸೂಕ್ತ ಮೀಸಲಾತಿ ಇಲ್ಲದ ಕಾರಣ ಸಮುದಾಯದ ವಿದ್ಯಾರ್ಥಿಗಳು ಉನ್ನತ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ. ಕೃಷಿ ಕಾರ್ಮಿಕರು ಹೆಚ್ಚಾಗಿರುವ ಪಂಚಮಸಾಲಿ ಸಮುದಾಯವನ್ನು ಪ್ರವರ್ಗ-2ಎ ಸೇರಿಸಿ ಸಾಮಾಜಿಕ ನ್ಯಾಯ ಒದಗಿಸಲು ನಿಯೋಗ ಮನವಿ ಮಾಡಿತು.**

★ ಹಿಂದಿನ ಸರ್ಕಾರ ನಿಮ್ಮ ಮನವಿ ಮೇರೆಗೆ 2ಸಿ ಮತ್ತು 2ಡಿ ಹೊಸ ಪ್ರವರ್ಗ ಮಾಡಿತು. 3ಎ ನಲ್ಲಿರುವ ಒಕ್ಕಲಿಗರನ್ನು 2ಸಿ ಗೆ ಸೇರಿಸುವುದು. 3ಬಿಯಲ್ಲಿರುವ ಲಿಂಗಾಯತರನ್ನು 2ಡಿಗೆ ಸೇರಿಸುವ ಪ್ರಸ್ತಾಪ ಮುಂದಿರಿಸಿತು. ಮುಸ್ಲಿಮರ ಮೀಸಲಾತಿಯನ್ನು ತೆಗೆದು ಹಾಕಿತ್ತು. ಮುಸ್ಲಿಮರು ಇದನ್ನು ಸುಪ್ರೀಂಕೋರ್ಟ್‌ನಲ್ಲಿ ಪ್ರಶ್ನಿಸಿದಾಗ, ಯಥಾಸ್ಥಿತಿ ಮುಂದುವರೆಸಲು ರಾಜ್ಯ ಸರ್ಕಾರ ಒಪ್ಪಿಕೊಂಡಿತ್ತು. ಆದ್ದರಿಂದ ಈ ಪ್ರಕರಣ ಇನ್ನೂ ನ್ಯಾಯಾಲಯದಲ್ಲಿದೆ ಎಂದರು.

**ಪಂಚಮಸಾಲಿಗಳಿಗೆ ಮೀಸಲಾತಿ ನೀಡುವ ಸಂಬಂಧ ವರದಿ ಸಲ್ಲಿಸಲು ಜಯಪ್ರಕಾಶ್ ಹೆಗಡೆ ಅಧ್ಯಕ್ಷತೆಯ ಹಿಂದುಳಿದ ವರ್ಗಗಳ ಆಯೋಗ ಅಧ್ಯಯನ ನಡೆಸಿ, ಮಧ್ಯಂತರ ವರದಿಯನ್ನು ಸಲ್ಲಿಸಿದ್ದರೂ, ಯಾವುದೇ ತೀರ್ಮಾನ ಕೈಗೊಂಡಿಲ್ಲ. ಮಧ್ಯಂತರ ವರದಿ ಆಧಾರದ ಮೇಲೆ ನಿರ್ಧಾರ ಕೈಗೊಳ್ಳಲು ಮನವಿ ಮಾಡಿತು.**

★ ಈಗ ಚುನಾವಣೆ ನೀತಿ ಸಂಹಿತೆ ಜಾರಿಯಲ್ಲಿದೆ. ಆದರೆ ಪೂರ್ವನಿಗದಿಯಂತೆ ಸಮುದಾಯದ ಮುಖಂಡರೊಂದಿಗೆ ಶುಕ್ರವಾರ ಸಭೆ ನಡೆಸಲಾಗಿದೆ ಎಂದು ಮುಖ್ಯಮಂತ್ರಿ ಅವರು ಹೇಳಿದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಲಕ್ಷ್ಮಿ ಹೆಬ್ಬಾಳ್ಕರ್, ಶಿವರಾಜ ತಂಗಡಗಿ, ಶಾಸಕರುಗಳಾದ ವಿನಯ್ ಕುಲಕರ್ಣಿ, ವಿಜಯ್ ಕಾಶಪ್ಪನವರ್, ಸರ್ಕಾರದ ಹಿರಿಯ ಅಧಿಕಾರಿಗಳು, ಸಮುದಾಯದ ಮುಖಂಡರು, ವಕೀಲರು ಇದ್ದರು.

## ಬಿಗ್ ಬಾಸ್ ಕನ್ನಡ 11ಕ್ಕೆ ಜಗದೀಶ್ ಗುಡ್ ಬೈ

• ಉದಯವಾಹಿನಿ, ಬೆಂಗಳೂರು



**ಕೊನೆಗೂ ಮನೆಯಿಂದ ಔಟ್**

ತನ್ನ ಮಾತಿನ ಶೈಲಿಯಿಂದಲೇ ಬಿಗ್ ಬಾಸ್ ಕನ್ನಡ 11ಕ್ಕೆ ಆಯ್ಕೆಯಾಗಿದ್ದಂತ ಸ್ಪರ್ಧಿ ಜಗದೀಶ್, ಕೆಲ ದಿನಗಳಲ್ಲೇ ಮನೆಯಿಂದ ಹೊರ ಬಿದ್ದಾರೆ. ಬಿಗ್ ಬಾಸ್ ಕನ್ನಡ 11 ಸೀಸನ್ ಗೆ ಗುಡ್ ಬೈ ಹೇಳಿದ್ದಾರೆ. ಹೌದು.. ಬಿಗ್ ಬಾಸ್ ಕನ್ನಡ ಸೀಸನ್‌ನಲ್ಲಿ ಮಹತ್ವದ ಬೆಳವಣಿಗೆ ಎನ್ನುವಂತೆ ಸ್ಪರ್ಧಿ ಜಗದೀಶ್ ಕೊನೆಗೂ ಮನೆಯಿಂದ ಹೊರ ಬಂದಿದ್ದಾರೆ.

ರಿಯಾಲಿಟಿ ಶೋನಲ್ಲಿ ಗಲಾಟೆ, ಕೂಗಾಡ, ಜಗಳದ ಮೂಲಕ ಹವಾ ಕ್ರಿಯೇಟ್ ಮಾಡಿದ್ದಂತ ಜಗದೀಶ್, ಸ್ಪರ್ಧಿಯ ಮೇಲೆ ಹಲ್ಲೆ ಕೂಡ ಮಾ ಡಿದ್ದರು. ಇದೀಗ ಅವರು ಬಿಗ್ ಬಾಸ್ ಗೆ ಗುಡ್ ಬೈ ಹೇಳಿದ್ದಾರೆ. ಈ ಕುರಿತಂತೆ ಹೇಳಿಕೆ ಬಿಡುಗಡೆ ಮಾಡಿರುವಂತ ಅವರು, ಬಿಗ್ ಬಾಸ್ ಮನೆಯಿಂದ ಹೊರಬಂದ ಜಗದೀಶ್ ಅವರು ವೀಕ್ಷಕರಿಗೆ ಧನ್ಯವಾದ ತಿಳಿಸಿದ್ದಾರೆ. ನಿಮ್ಮ ಪ್ರತಿ ಒಂದು ಚಪ್ಪಾಳೆ, ಮೆಸೇಜ್, ನಿಮ್ಮ ಆಶೀರ್ವಾದ ನನ್ನ ಈ ಬಿಗ್‌ಬಾಸ್ ಪಯಣ ಸಕ್ಸಸ್, ಅದು ನೀವು ಇಟ್ಟ ಈ ನಂಬಿಕೆ. ಮತ್ತೊಮ್ಮೆ ಕೋಟಿ ಕೋಟಿ ನಮನಗಳನ್ನು ತಿಳಿಸಿದ್ದಾರೆ.

**ಸಾರ್ಥಕ ಆಯಿತು, ನನ್ನ ಈ ಹುಟ್ಟು, ಈ ಪ್ರೀತಿ, ನನ್ನ ಗೆಲುವಿಗೆ ನೀವು ಕೊಟ್ಟ ಆ ಒಡನಾಟ, ನನ್ನ ಬಳಿ ಪದಗಳು ಕಡಿಮೆ, ವಿಶ್ಲೇಷಣೆ ಮಾಡಲು. ನೂರಾರು ಕ್ಯಾಮೆರಾ, ಸಾವಿರಾರು ಬಿಗ್ ಬಾಸ್ ವರ್ಕ್ ಫೋರ್ಸ್, ಆ Director, ಆ ಮಾಂತ್ರಿಕ ತಂತ್ರಜ್ಞರು, ಅವರ 24/7 ಡೆಡಿಕೇಷನ್ ಹಾಗೂ ನನ್ನ 20 ಕೋಟಿಗೂ ಹೆಚ್ಚಿನ ಬಿಗ್‌ಬಾಸ್ ಅಭಿಮಾನಿ ದೇವರುಗಳ ಆಶೀರ್ವಾದ ಈ ಹೊಸ ಕರ್ನಾಟಕ ಕ್ರಶ್ ಜಗದೀಶ್‌ನಿಂದ ನಿಮಗೆ ಕೋಟಿ ಕೋಟಿ ನಮನ ಎಂದು ಹೇಳಿದ್ದಾರೆ. ಈ ಮೂಲಕ ಬಿಗ್ ಬಾಸ್ ಮನೆಯಿಂದ ಹೊರಗೆ ಬಂದಿದ್ದಾರೆ.**

## ಪ್ರಹ್ಲಾದ್ ಜೋಷಿಯನ್ನು ಸಂಪುಟದಿಂದ ವಜಾ ಮಾಡಿ ಬಂಧಿಸಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಕೆಪಿಸಿಸಿ, ಕಾಂಗ್ರೆಸ್ ಭವನದಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿರವರು ಸಂಪುಟದಿಂದ ವಜಾ ಮಾಡಬೇಕು, ಬಂಧಿಸಬೇಕು ಎಂದು ಕಾಂಗ್ರೆಸ್ ಪಕ್ಷದಿಂದ ಪ್ರತಿಭಟನೆ ನಡೆಸಲಾಯಿತು.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್.ಮನೋಹರ್ , ಹೇಮರಾಜು, ಪುಟ್ಟರಾಜು, ಕಶಾಲ್ ಅರವೇಗೌಡ, ನವೀನ್ ಸಾಯಿ, ವಾಸುದೇವ್ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಎಸ್.ಮನೋಹರ್ ರವರು ಮಾತನಾಡಿ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿರವರ ತಮ್ಮ ಗೋಪಾಲ ಜೋಷಿ ಮತ್ತು ಸಹೋದರಿ ವಿಜಯಲಕ್ಷ್ಮಿ ಜೋಷಿ ಮತ್ತು ಗೋಪಾಲ ಜೋಷಿರವರ ಪುತ್ರ ಸಂಜಯ್ ಜೋಷಿರವರು 2 ಕೋಟಿ ಹಣ ಪಡೆದು ಬಿಜೆಪಿ ಲೋಕಸಭಾ ಕ್ಷೇತ್ರ ಟಿಕೇಟು ನೀಡುಸುತ್ತೇವೆ ಎಂದು ವಂಚನೆ ಮಾಡಿದ್ದಾರೆ. ಬಿಜೆಪಿ ಕೇಂದ್ರ ಸರ್ಕಾರದ ಸಚಿವ ಸಂಪುಟದಲ್ಲಿ ಅರ್ಧದಷ್ಟು ಸಚಿವರು ಭ್ರಷ್ಟಚಾರ ಪ್ರಕರಣದಲ್ಲಿ ಭಾಗಿಯಾಗಿದ್ದಾರೆ.

ಪ್ರಧಾನಿ ನರೇಂದ್ರಮೋದಿರವರು ಹೇಳಿದಂತೆ ನಾ ಖಾವುಂಗ, ನಾ ಖಾನೇ ದುಂಗಾ ಮಾತು ಎಲ್ಲಿ ಹೋಯಿತು. ಕೇಂದ್ರ ಬಿಜೆಪಿ ಸರ್ಕಾರ ಭ್ರಷ್ಟಚಾರದ ಮಹಾ ಸಾಗರವಾಗಿದೆ. ಜಾರಿ ನಿರ್ದೇಶನಾಲಯ ಮತ್ತು ಆದಾಯ ತೆರಿಗೆ ಇಲಾ ಖೆ ದುರ್ಬಳಕೆ ಮಾಡಿಕೊಂಡು ಸರ್ವಧಿಕಾರ ಮೆರೆಯುತ್ತಿದೆ. ಕೇಂದ್ರ ಸಚಿವ ಪ್ರಹ್ಲಾದ್ ಜೋ ಷಿರವರ ಪ್ರಕರಣದಲ್ಲಿ ನೈತಿಕ ಹೊಣೆ ಹೊತ್ತು ಪ್ರಧಾನಮಂತ್ರಿಗಳು ರಾಜೀನಾಮೆ ನೀಡಬೇಕು ಎಂದು ಹೇಳಿದರು.

## ನಟ ದರ್ಶನ್ ವಿರುದ್ಧ ದೂರು ಕೊಟ್ಟ ನಿರ್ಮಾಪಕ

• ಉದಯವಾಹಿನಿ, ಬೆಂಗಳೂರು

ಬೆದರಿಕೆ ಆರೋಪಕ್ಕೆ ಸಂಬಂಧಿಸಿದಂತೆ ನಟ ದರ್ಶನ್ ವಿರುದ್ಧ ನಿರ್ಮಾಪಕರೋರ್ವರು ದೂರು ಕೊಟ್ಟಿದ್ದಾರೆ. ಹೀಗಾಗಲೇ ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಸೇರಿರುವ ನಟ ದರ್ಶನ್ ಗೆ ಸಂಕಷ್ಟ ತಪ್ಪುತ್ತಿಲ್ಲ. ನಟ ದರ್ಶನ್ ವಿರುದ್ಧ ಬೆದರಿಕೆ ಆರೋಪ ಕೇಳಿ ಬಂದಿದ್ದು, ಈ ಸಂಬಂಧ ಎನ್ ಸಿಆರ್ ದಾಖಲಾಗಿದೆ.ನಿರ್ಮಾಪಕ ಭರತ್ ಗೆ ಬೆದರಿಕೆ ಹಾಕಿದ್ದ ಆರೋಪ ದರ್ಶನ್ ವಿರುದ್ಧ ಕೇಳಿ ಬಂದಿದೆ. ಈ ಹಿನ್ನೆಲೆ, ದರ್ಶನ್ ಮತ್ತು ಮ್ಯಾನೇಜರ್ ವಿರುದ್ಧ ಎನ್ ಸಿಆರ್ ದಾಖಲಾಗಿದೆ. ಅಕ್ಟೋಬರ್ 18ರಂದು ಕೆಂಗೇರಿ ಪೊಲೀಸ್ ಠಾಣೆಯಲ್ಲಿ ಎನ್ ಸಿಆರ್ ದಾಖಲಾಗಿದೆ. ಭಗವಾನ್ ಶ್ರೀ ಕೃಷ್ಣ ಚಿತ್ರದ ನಿರ್ಮಾಪಕ ಭರತ್ ಅವರು ಈ ಹಿಂದೆಯೇ ದೂರು ನೀಡಿದ್ದರು. 2022 ರಲ್ಲಿ ಚಿತ್ರದ ನಾಯಕ ಧ್ರುವನ್ ವಿರುದ್ಧ ದೂರು ದಾಖಲಾಗಿದೆ. ನಟ ದರ್ಶನ್ ಕೈಯಲ್ಲಿ ಫೋನ್ ಮೂಲಕ ಬೆದರಿಕೆ ಹಾಕಿಸಿದ ಆರೋಪವೂ ಕೇಳಿ ಬಂದಿದೆ. ಹೀಗಾಗಿ ಬೆದರಿಕೆ ಆರೋಪದಲ್ಲಿ ಭರತ್ ಮತ್ತೆ ನಿನ್ನೆ ದೂರು ನೀಡಿದ್ದಾರೆ.

## ಬಾಲಕನಿಗೆ 'ಫೋರ್ಟಿಸ್ ಆಸ್ಪತ್ರೆ'ಯಲ್ಲಿ ಯಶಸ್ವಿ ಶಸ್ತ್ರಚಿಕಿತ್ಸೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

**ಅತಿ ವಿರಳ ಅಪ್ಲ್ಯಾಸ್ಟಿಕ್ ರಕ್ತ ಹೀನತೆ**

ಅಸ್ಥಿಮಜ್ಜೆಯು ರಕ್ತಕಣಗಳನ್ನು ಉತ್ಪಾದಿಸುವಲ್ಲಿ ವಿಫಲವಾಗಿದ್ದ ಕಾರಣ ಅತಿ ವಿರಳ ಕಾಯಿಲೆಯಾದ ಅಪ್ಲ್ಯಾಸ್ಟಿಕ್ ರಕ್ತ ಹೀನತೆಯಿಂದ ಬಳಲುತ್ತಿದ್ದ 16 ವರ್ಷದ ಬಾಲಕನಿಗೆ ಫೋರ್ಟಿಸ್ ಆಸ್ಪತ್ರೆಯಲ್ಲಿ ಯಶಸ್ವಿ ಚಿಕಿತ್ಸೆ ನೀಡಲಾಗಿದೆ. ಫೋರ್ಟಿಸ್ ಆಸ್ಪತ್ರೆಯ ಮೆಡಿಕಲ್ ಮತ್ತು ಹೆಮಟೋ ಆಂಕೊಲಾಜಿಯ ಹಿರಿಯ ನಿರ್ದೇಶಕಿ ಡಾ. ನೀತಿ ರೈಜಾದಾ, ಹೆಮಟೋ ಆಂಕೊಲಾಜಿ ಸಮಾಲೋಚಕ ಡಾ ನಿಶಿತ್ ಓಜ್ಹಾ, ಪೀಡಿಯಾಟ್ರಿಕ್ ಹೆಮಟೋ ಆಂಕೊಲಾಜಿಯ ಸಲಹೆಗಾರರಾದ ಡಾ ತನುಶ್ರೀ ಪಾಲ್ ಅವರ ವೈದ್ಯ ತಂಡ ಈ ಬಾಲಕನಿಗೆ ಸಮಯೋಚಿತವಾಗಿ ಶಸ್ತ್ರಚಿಕಿತ್ಸೆ ನಡೆಸುವ ಮೂಲಕ ಬಾಲಕನ ಜೀವ ಉಳಿಸಲಾಗಿದೆ.

ಈ ಕುರಿತು ಮಾತನಾಡಿದ ಡಾ. ನೀತಿ ರೈಜಾದಾ, ಆಫ್ರೀಕಾ ಮೂಲಕ 16 ವರ್ಷದ ಮೈಕೆಲ್ ಎಂಬ ಬಾಲಕನು ಕಳೆದ ಎರಡು ತಿಂಗಳಿನಿಂದ ತೀವ್ರವಾದ ಜ್ವರ, ಆಯಾಸ, ದೌರ್ಬಲ್ಯಗಳಿಂದ ಬಳಲುತ್ತಿದ್ದರು, ಅಷ್ಟೇ ಅಲ್ಲದೆ, ಆತನ ಬಲ ಕಿವಿಯಿಂದ ರಕ್ತಸ್ರಾವವಾಗಲು ಪ್ರಾರಂಭಗೊಂಡಿತ್ತು. ಇದರಿಂದ ಭಯಭೀತ ಗೊಂಡ ಅವರ ಕುಟುಂಬ ಆಫ್ರಿಕಾದಲ್ಲಿರುವ ಎಲ್ಲಾ ಆಸ್ಪತ್ರೆಗಳಿಗೆ ತೋರಿಸಿದರೂ ಬಾಲಕನ ಆರೋಗ್ಯ ಸಮಸ್ಯೆ ಏನೆಂದು ತಿಳಿಯಲಿಲ್ಲ. ಹೀಗಾಗಿ ಅವರು ಬೆಂಗಳೂರಿನ ಬನ್ನೇರುಘಟ್ಟ ರಸ್ತೆ ಯಲ್ಲಿನ ಫೋರ್ಟಿಸ್ ಆಸ್ಪತ್ರೆಗೆ ದಾಖಲಾದರು. ಇಲ್ಲಿ ಆ ಬಾಲಕನ ಸಂಪೂರ್ಣ ತಪಾಸಣೆ ಬಳಿಕ, ಆ ಬಾಲಕನಿಗೆ ಅತಿ ವಿರಳ ಅಪ್ಲ್ಯಾಸ್ಟಿಕ್ ರಕ್ತ ಹೀನತೆ ಆಗಿರುವುದು ತಿಳಿದುಬಂತು. ಇದು ಅಸ್ಥಿ ಮಜ್ಜೆಯು ರಕ್ತಕಣಗಳನ್ನು ಉತ್ಪಾದಿಸುವಲ್ಲಿ ವಿಫಲವಾದ ಕಾರಣ ಆ ಬಾಲಕ ರಕ್ತ ಹೀನತೆಗೆ ಒಳಗಾಗಿದ್ದ. ಹೀಗಾಗಿ ಆತನಿಗೆ ಹ್ಯಾಪ್ಲೋಡೆಂಟಿಕಲ್ ಸ್ಟೆಮ್ ಸೆಲ್ ಕಸಿ ಮಾಡುವ ಅವಶ್ಯಕತೆ ಅನಿ ವಾರ್ಯವಾಗಿತ್ತು. ಆದರೆ, ಬಾಲಕನ ರಕ್ತದ ಗುಂಪಿಗೆ ಹೊಂದುವಂತೆ ಸ್ಟೆಮ್‌ಸೆಲ್ ಸಿಗದೇ ಸಮಸ್ಯೆ ಎದುರಾಗಿತ್ತು. ಈ ಮಧ್ಯೆ ಬಾಲಕನ ಹಿರಿಯ ಸಹೋದರಿಯೇ ತನ್ನ ತಮ್ಮನಿಗೆ ಹ್ಯಾ ಪ್ಲೋಡೆಂಟಿಕಲ್ ದಾನ ಮಾಡಲು ಮುಂದಾದರು. ಆದರೆ, ಬಾಲಕನಿಗೆ ಬಲಕಿವಿ ಸೋಂಕಿನಿಂದ ಸೋರುತ್ತಿದ್ದ ಕಾರಣ, ಮೊದಲು ಕಿವಿ ಶಸ್ತ್ರಚಿಕಿತ್ಸೆ ಮುಂದಾಗಬೇಕಾಯಿತು.

**ಬಾಲಕನ ಬಲ ಕಾರ್ಟಿಕಲ್ ಮಾಸ್ಟೊಡೆಕ್ಟಮಿ (ಕಿವಿ ಸುತ್ತ ಇರುವ ಸೋಂಕಿನ ಅಂಗಾಂಶ) ತೆಗೆದು ಹಾಕಿ ಶಸ್ತ್ರಚಿಕಿತ್ಸೆ ಮಾಡಲಾಯಿತು. ಇದಾದ ಬಳಿಕ ಬಾಲಕನಿಗೆ ಹ್ಯಾಪ್ಲೋಡೆಂಟಿಕಲ್ ಸ್ಟೆಮ್ ಸೆಲ್ ಕಸಿಯನ್ನು ಯಶಸ್ವಿಯಾಗಿ ನಡೆಸಲಾಯಿತು. ಇದೀಗ ಬಾಲಕ ಗುಣಮುಖರಾಗುತ್ತಿದ್ದಾನೆ ಎಂದರು.**

## ರಾಜ್ಯ ಸರ್ಕಾರಿ ಶಾಲಾ ಮಕ್ಕಳಿಗೆ ಕಲಿಕೆ ಸುಧಾರಣೆಗೆ 'ಶಿಕ್ಷ ಕೋಪೈಲಟ್ ಯೋಜನೆ' ಜಾರಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು, ಶಿಕ್ಷಣ ಫೌಂಡೇಶನ್, ಮೈಕ್ರೋಸಾಫ್ಟ್ ರಿಸರ್ಚ್ ಇಂಡಿಯಾದ ಸಹಯೋಗದೊಂದಿಗೆ ಸರ್ಕಾರಿ ಶಾಲೆಗಳಲ್ಲಿ ಕಲಿಕೆಯ ಫಲಿತಾಂಶಗಳನ್ನು ಸುಧಾರಿಸುವ ಗುರಿಯೊಂದಿಗೆ ಶಿಕ್ಷ ಕೋಪೈಲಟ್ ಯೋಜನೆಯನ್ನು ಜಾರಿಗೆ ತರಲಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ನಚಿವ ಮಧು ಬಂಗಾರಪ್ಪ ತಿಳಿಸಿದರು.

ವಿಧಾನ ಸೌಧದ ಸಮಿತಿ ಕೊಠಡಿಯಲ್ಲಿ ಸಮಗ್ರ ಶಿಕ್ಷಣ ಕರ್ನಾಟಕ, ಅವರು ಶಿಕ್ಷ ಕೋಪೈಲಟ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಸಚಿವರು ಸ್ಥಳೀಯ ಪಠ್ಯಕ್ರಮ, ಭಾಷೆ ಮತ್ತು ಸಂದರ್ಭವನ್ನು ಆಧರಿಸಿ ಸಮಗ್ರ ಬೋಧನಾ ಸಂಪನ್ಮೂಲಗಳು ಮತ್ತು ಕಲಿಕೆಯ ಅನುಭವಗಳನ್ನು ರಚಿಸಲು ಶಿಕ್ಷ ಕೋಪೈಲಟ್ ಯೋಜನೆ ಶಿಕ್ಷಕರನ್ನು ಸಶಕ್ತಗೊಳಿಸುತ್ತದೆ. ಕರ್ನಾಟಕ ರಾಜ್ಯದ ನಗರ ಮತ್ತು ಗ್ರಾಮೀಣ ಭಾಗಗಳ ಎಲ್ಲಾ ಶೈಕ್ಷಣಿಕ ಜಿಲ್ಲೆಗಳಲ್ಲಿ 750ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳಿಂದ ಆಯ್ದ 1000 ಶಿಕ್ಷಕರಿಗೆ ಶಿಕ್ಷ ಕೋಪೈಲಟ್ -ಎಐ ಚಾಲಿತ ಡಿಜಿಟಲ್ ಸಹಾಯವನ್ನು ನೀಡಲಾಗುವುದು ಎಂದು ತಿಳಿಸಿದರು. ಶಿಕ್ಷಣ ಕೋಪೈಲಟ್ ಉತ್ತಮ ಗುಣಮಟ್ಟದ ವೈಯಕ್ತೀಕರಿಸಿದ ವಿಷಯವನ್ನು ರಚಿಸಲು ಶಿಕ್ಷಕರನ್ನು ಸಬಲೀಕರಣಗೊಳಿಸುತ್ತದೆ. ಶಿಕ್ಷಕರ ಹಿಮ್ಮಾಹಿತಿ ಆಧಾರದ ಮೇಲೆ ಚಟುವಟಿಕೆಗಳು, ಮೌಲ್ಯಮಾಪನಗಳು, ನೈಜ-ಪ್ರಪಂಚದ ಉದಾಹರಣೆಗಳು, ಅನ್ವಯಗಳು, ಕಿರು ವೀಡಿಯೊಗಳು, ಸಮಗ್ರ ಪಾಠ ಯೋಜನೆಗಳಂತಹ ಬೋಧನಾ ಸಂಪನ್ಮೂಲಗಳನ್ನು ರಚಿಸಲು ಶಿಕ್ಷ ಕೋಪೈಲಟ್ ಸಹಾಯ ಮಾಡುತ್ತದೆ. ಇದು ಸ್ವಯಂ ಕಲಿಕೆ ಮತ್ತು ಸಂವಾದಾತ್ಮಕ ವಿಷಯ ರಚನೆಗಾಗಿ ಶಿಕ್ಷಕರಿಗೆ ಚಾಟ್-ಬಾಟ್ ಅನ್ನು ಸಹ ಒದಗಿಸುತ್ತದೆ ಎಂದು ಸಚಿವರು ತಿಳಿಸಿದರು.

## ಜಾಮೀನು ರದ್ದುಗೊಳಿಸಲು ಸುಪ್ರೀಂ ನಕಾರ

• ಉದಯವಾಹಿನಿ, ಬೆಂಗಳೂರು

ಸಂತ್ರಸ್ತೆ ಅಪಹರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಭವಾನಿ ರೇವಣ್ಣ ಅವರಿಗೆ ನೀಡಿದ್ದ ನಿರೀಕ್ಷಣಾ ಜಾಮೀನನ್ನು ರದ್ದುಗೊಳಿಸಲು ಸುಪ್ರೀಂಕೋರ್ಟ್ ನಿರಾಕರಿಸಿದೆ. ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳಾದ ಸೂರ್ಯಕಾಂತ್, ಉಜ್ಜಲ್ ಭುಯಾನ್ ಅವರ ಪೀಠವು ಕರ್ನಾಟಕ ಹೈಕೋರ್ಟ್ ಆದೇಶದಲ್ಲಿ ಮಧ್ಯ ಪ್ರವೇಶಿಸಲು ನಿರಾಕರಿಸಿ, ಎಸ್‌ಐಟಿ ಸಲ್ಲಿಸಿದ ಮನವಿಯನ್ನು ರದ್ದುಗೊಳಿಸಿತು.

ಮಗನಿಂದ ಲೈಂಗಿಕ ದೌರ್ಜನ್ಯಕ್ಕೊಳಗಾದ ಮಹಿಳೆಯನ್ನು ದೂರು ದಾಖಲಿಸದಂತೆ ತಡೆ ಯಲು ಭವಾನಿ ರೇ ವಣ್ಣ ಯತ್ನಿಸಿದ್ದಾರೆ ಎಂದು ಆರೋಪಿಸಲಾಗಿತ್ತು. ಇನ್ನು ಪ್ರಕರಣದ ವಿಚಾರಣೆ ನಡೆಸಿದ ವೇಳೆ ಸುಪ್ರೀಂ ಕೋರ್ಟ್ ನ್ಯಾಯಪೀಠ, ಪ್ರಕರಣದಲ್ಲಿ ಈಗಾ ಗಲೇ ಚಾರ್ಜ್‌ಶೀಟ್ ಸಲ್ಲಿಕೆ ಮಾಡಲಾಗಿದೆ. ರಾಜಕೀಯ ಕುಟುಂಬ ಎಂದು ಜಾಮೀನು ನಿರಾಕರಿಸಲು ಸಾಧ್ಯವಿಲ್ಲ, ಕೆಲ ರಾಜಕಾರಣಿಗಳು ಅಧಿಕಾರ ದುರ್ಬಳಕೆ ಮಾಡಿಕೊಳ್ಳಬಹುದು. ಈ ಪ್ರಕರಣದಲ್ಲಿ ತನಿಖೆ ದಾರಿ ತಪ್ಪಿದೆಯಾ ತಪ್ಪಿದ್ದರೆ ನಾವು ನಿಮ ನೆರವಿಗೆ ಬರಬಹುದು. ಆದರೆ ಇಲ್ಲಿ ಯಾ ವುದೂ ಆ ರೀತಿ ಕಾಣುತ್ತಿಲ್ಲ ಎಂದಿದೆ.

ಪ್ರಕರಣದ ಪ್ರಮುಖರನ್ನು ಬಂಧಿಸಿ ವಿಚಾರಣೆ ನಡೆಸಲಾಗಿದೆ. ಆರೋಪಿ ಮಗ ಮತ್ತು ಪತಿಯನ್ನು ಬಂಧಿಸಿ ವಿಚಾರಣೆ ನಡೆಸಲಾಗಿದೆ. ಜಾಮೀನು ರದ್ದು ಮಾಡಲು ಯಾವುದೇ ಸಕಾರಣ ಕಾಣುತ್ತಿಲ್ಲ. ಪ್ರತಿಷ್ಠಿತ ರಾಜಕೀಯ ಕುಟುಂಬ ಎಂದು ಜಾಮೀನು ರದ್ದು ಮಾಡಲಾಗದು ಎಂದು ಸುಪ್ರೀಂಕೋರ್ಟ್ ಹೇಳಿದೆ.

## ಉಪಚುನಾವಣೆಯ ಬಳಿಕ ರಾಜ್ಯದ ಜನತೆಗೆ ಬೆಲೆ ಏರಿಕೆ ಬರೆ 'ಗ್ಯಾರಂಟಿ'

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ವಿಧಾನಸಭೆಯ ಉಪಚುನಾವಣೆಯ ಬಳಿಕ ಮುಂದಿನ ದಿನಗಳಲ್ಲಿ ರಾಜ್ಯದ ಜನರಿಗೆ ಹಾಲಿನ ದರ, ಬಸ್ ಪ್ರಯಾಣ ದರ, ನೀರಿನ ದರಗಳ ಏರಿಕೆಯ ಶಾಕ್ ಎದುರಾಗುವ ಸಾಧ್ಯತೆ ಇದೆ.

ಚಾಮರಾಜನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಪಶುಸಂಗೋಪನಾ ಸಚಿವ ಕೆ. ವೆಂಕಟೇಶ್, ಪ್ರತಿ ಲೀಟರ್‌ಗೆ 5 ರೂ.ಹಾಲಿನ ದರ ಹೆಚ್ಚಿಸಬೇಕೆಂಬ ಪ್ರಸ್ತಾವನೆಯಿದೆ. ಅದರ ಕುರಿತು ಸರ್ಕಾರ ಪರಿಶೀಲನೆ ನಡೆಸುತ್ತಿದೆ ಎಂದು ಹೇಳಿದ್ದಾರೆ. ಈ ಮೊದಲು ರಾಮನಗರದಲ್ಲಿ ನಡೆದ ರೈತರ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಲಿನ ದರ ಹೆಚ್ಚಳದ ಸುಳಿವು ನೀಡಿದ್ದರು. ರೈತರ ಜೊತೆ ಸಭೆ ನಡೆಸಿ ಚರ್ಚಿಸಿದ ಬಳಿಕ ಈ ಕುರಿತು ನಿರ್ಧಾರ ತೆಗೆದುಕೊಳ್ಳುವುದಾಗಿ ತಿಳಿಸಿದ್ದರು. ಈಗ ರೈತರ ಅನುಕೂಲಕ್ಕಾಗಿ ಮತ್ತೊಮೆ ದರ ಹೆಚ್ಚಿಸಬೇಕೆಂಬ ಪ್ರಸ್ತಾವನೆ ಇದೆ ಎಂದರು.

ಈ ಹಿಂದೆ ಪ್ರತಿ ಲೀಟರ್ ಹಾಲಿಗೆ 50 ಗ್ರಾಂ ಹೆಚ್ಚುವರಿ ಹಾಲನ್ನು ಸೇರ್ಪಡೆ ಮಾಡಿ 2 ರೂ. ದರ ಹೆಚ್ಚಿಸಲಾಗಿತ್ತು. ಇತ್ತೀಚೆಗೆ ಹೆಚ್ಚುವರಿ ಹಾಲಿನ ಪ್ರಮಾಣ ನಾಪತ್ತೆಯಾಗಿದೆ. ಈಗ ನೇರವಾ ಗಿ ಹಾಲಿನ ದರವನ್ನೇ ಹೆಚ್ಚಿಸುವ ಚರ್ಚೆಗಳು ನಡೆಯುತ್ತಿವೆ.

**ಬಹುತೇಕ ಡಿಸೆಂಬರ್ ಅಂತ್ಯದೊಳಗೆ ಮತ್ತೊಂದು ಸುತ್ತಿನ ಸಭೆ ನಡೆಸಿ ಈ ಬಗ್ಗೆ ನಿರ್ಧಾರ ತೆಗೆದುಕೊಳ್ಳುವ ಸಾಧ್ಯತೆ ಇದೆ. ಜೊತೆಯಲ್ಲಿನ ಬೆಂಗಳೂರಿನ ಮೆಟ್ರೊ ಸಂಚಾರ ದರ ವನ್ನು ರಚಿಸ ಬೇಕೆಂಬ ಚರ್ಚೆಗಳಿವೆ. ಇದ ಕ್ಕಾಗಿ ಈಗಾ ಗಲೇ ಸಮಿತಿಯೊಂದನ್ನು ರಚನೆ ಮಾಡಿ ಪರಿಶೀಲಿಸಲಾಗುತ್ತಿದೆ ಎಂದರು.**

ಮತ್ತೊಂದೆಡೆ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಬಳಿಕ ನಷ್ಟದಲ್ಲಿರುವ ಕೆ ಎಸ್‌ಆರ್‌ಟಿಸಿ, ಬಿಎಂಟಿಸಿ ಸೇರಿದಂತೆ ಸಾರಿಗೆ ಸಂ ಸ್ಥೆಗಳ ಪ್ರಯಾಣ ದರವನ್ನು ಹೆಚ್ಚಳ ಮಾಡುವ ಚರ್ಚೆಗಳಾಗಿವೆ.

# ಈ ಬೆಳವಣಿಗೆ ರಾಜ್ಯ ರಾಜಕೀಯದಲ್ಲಿ ಭಾರೀ ಸಂಚಲನ

### ಮೈಸೂರಿನ ಮುಡಾ ಕಚೇರಿ ಹಾಗೂ ಹಗರಣದ ಆರೋಪಿ ದೇವರಾಜು ಮನೆ ಮೇಲೆ ಇಡಿ ದಾಳಿ

• ಉದಯವಾಹಿನಿ, ಬೆಂಗಳೂರು




ಉದಯವಾಹಿನಿ ಚಿತ್ರ

**ಎರಡು ಕಡೆ ದಾಳಿ**

ಮೈಸೂರು ನಗರಾಭಿವೃದ್ಧಿ ನಿವೇಶನ ಹಂಚಿಕೆ ಪ್ರಕರಣದಲ್ಲಿ ಮಹತ್ವದ ಬೆಳವಣಿಗೆಯಾಗಿದ್ದು, ಜಾರಿ ನಿರ್ದೇಶನಾಲಯ ಶುಕ್ರವಾರ ಎರಡು ಕಡೆ ದಾಳಿ ನಡೆಸಿ ದಾಖಲಾತಿಗಳನ್ನು ಪರಿಶೀಲಿಸಿದ್ದು, ಸಂಬಂಧಪಟ್ಟವರ ವಿಚಾರಣೆ ಆರಂಭಿಸಿದೆ.

ಕೇಂದ್ರ ಸರ್ಕಾರದ ತನಿಖಾ ಸಂಸ್ಥೆಯಾದ ಜಾರಿ ನಿರ್ದೇಶನಾಲಯದ 20ಕ್ಕೂ ಹೆಚ್ಚು ಅಧಿಕಾರಿಗಳ ತಂಡ ಶುಕ್ರವಾರ ಮೈಸೂರಿನ ಮುಡಾ ಕಚೇರಿ ಹಾಗೂ ಕೆಂಗೇರಿಯಲ್ಲಿರುವ ಜಮೀನಿನ ಮಾಲೀಕ 4ನೇ ಆರೋಪಿ ದೇವರಾಜು ಅವರ ಮನೆ ಮೇಲೆ ದಾಳಿ ನಡೆಸಿದ್ದಾರೆ. ಈ ಬೆಳವಣಿಗೆ ರಾಜ್ಯ ರಾಜಕೀಯದಲ್ಲಿ ಭಾರೀ ಸಂಚಲನ ಮೂಡಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕುಟುಂಬಕ್ಕೆ ಮುಡಾದಿಂದ ಬದಲಿ ನಿವೇಶನ ನೀಡಿರುವ ಪ್ರಕರಣ ಸುನಾಮಿಯನ್ನೇ ಎದುರಿಸಿತ್ತು. ಸಾಮಾಜಿಕ ಕಾರ್ಯಕರ್ತರಾದ ಸ್ನೇಹಮಯಿ ಕೃಷ್ಣ, ಟಿ.ಜೆ. ಅಬ್ರಹಾಂ ಹಾಗೂ ಜೆಡಿಎಸ್ ಮುಖಂಡ ಪ್ರದೀಪ್‌ಕುಮಾರ್ ಹಗರಣದ ತನಿಖೆ ನಡೆಸಬೇಕೆಂದು ಲೋಕಾಯುಕ್ತ ಮತ್ತು ವಿಶೇಷ ಜನಪ್ರತಿನಿಧಿಗಳ ನ್ಯಾಯಾಲಯದ ಮೊರೆ ಹೋಗಿದ್ದರು.

ಕಾನೂನು ತೊಡಕು ನಿವಾರಿಸುವ ಸಲುವಾಗಿ ರಾಜ್ಯಪಾಲರಿಂದ ಸೂಕ್ತ ಪೂರ್ವಾನುಮತಿ ಪಡೆದು ಪ್ರಕರಣ ಮುಂದುವರೆಸಲಾಗಿದೆ. ಹೈಕೋರ್ಟ್ ಮತ್ತು ಕೆಳಹಂತದ ನ್ಯಾಯಾಲಯದ ನಿರ್ದೇಶನದ ಮೇರೆಗೆ ಮೈಸೂರು ಲೋಕಾಯುಕ್ತ ಪೊಲೀಸರು ಪ್ರಕರಣ ದಾಖಲಿಸಿ ವಿಚಾರಣೆ ನಡೆಸಿದ್ದರು.

ಈವರೆಗೂ 3ನೇ ಆರೋಪಿಯಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಬಾಮೈದ ಮಲ್ಲಿಕಾರ್ಜುನ ಸ್ವಾಮಿ, 4ನೇ ಆರೋಪಿಯಾಗಿರುವ ಜಮೀನು ಮಾಲೀಕ ದೇವರಾಜು ಅವರ ವಿಚಾರಣೆ ಮಾತ್ರ ನಡೆದಿದೆ. ಮೊದಲನೆ, 2ನೇ ಆರೋಪಿಗಳಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಅವರ ಪತ್ನಿ ಪಾರ್ವತಿ ಅವರ ಹೇಳಿಕೆಗಳು ದಾಖಲಾಗಿಲ್ಲ. ಈ ನಡುವೆ ದೂರುದಾರರಾದ ಸ್ನೇಹಮಯಿ ಕೃಷ್ಣ, ಕೇಂದ್ರ ತನಿಖಾ ಸಂಸ್ಥೆಗಳಾದ ಸಿಬಿಐ ಅಥವಾ ಇಡಿಯಿಂದ ಮಾತ್ರ ನಿಷ್ಪಕ್ಷಪಾತ ತನಿಖೆ ಸಾಧ್ಯ ಎಂಬ ಅಭಿಪ್ರಾಯ ವ್ಯಕ್ತಪಡಿಸುತ್ತಾ ಬಂದಿದ್ದಾ ರೆ. ಜಾರಿ ನಿರ್ದೇಶನಾಲಯಕ್ಕೆ ಖುದ್ದು ದೂರು ನೀಡಿ ದಾಖಲೆಗಳನ್ನು ಸಲ್ಲಿಸಿರುವುದಲ್ಲದೆ ಹೇಳಿಕೆಯನ್ನು ನೀಡಿದರು. ಜಾರಿ ನಿರ್ದೇಶನಾಲಯದ ದಾಳಿ ಬೆನ್ನಲ್ಲೇ ರಾಜಕೀಯ ಕೆಸರೆರಚಾಟಗಳು ಆರಂಭಗೊಂಡಿವೆ. ಕೇಂದ್ರ ಸಂಸ್ಥೆಯ ತನಿಖೆ ಚುರುಕುಗೊಂಡಿದ್ದೇ ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಸಂಕಷ್ಟ ಕಟ್ಟಿಟ್ಟ ಬುತ್ತಿ ಎಂಬ ಚರ್ಚೆಗಳಿವೆ.

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಹಗರಣದಲ್ಲಿ ಜಾರಿ ನಿರ್ದೇಶನಾಲಯ ತನಿಖೆ ಆರಂಭಿಸಿ ಬಿ.ನಾಗೇಂದ್ರ ಅವರನ್ನು ಬಂಧಿಸಿತ್ತು. ಇದರಿಂದಾಗಿ ಅವರು ತಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕಾಯಿತು. ಇತ್ತೀಚೆಗಷ್ಟೇ ಜಾಮೀನು ಪಡೆದು ಅವರು ಬಿಡುಗಡೆಯಾಗಿದ್ದಾರೆ.

**ಅದರ ಆಧಾರದ ಮೇಲೆ ಈವರೆಗೂ ಕಾನೂನಾತ್ಮಕ ಪರಿಶೀಲನೆಗಳನ್ನು ನಡೆಸಿದ್ದ ಜಾರಿ ನಿರ್ದೇಶನಾಲಯ ಶುಕ್ರವಾರ ಅಖಾಡಕ್ಕಿಳಿದಿದೆ. ಕೇಂದ್ರ ಭದ್ರತಾ ಪಡೆಗಳ ಸಶಸ್ತ್ರ ಕಾವಲಿನೊಂದಿಗೆ ಶೋಧ ಕಾರ್ಯಚರಣೆ ನಡೆಸಲಾಗಿದೆ. ಮುಡಾದ ಕಾರ್ಯದರ್ಶಿ ಪ್ರಸನ್ನಕುಮಾರ್ ಅವರು ಈ ಬಗ್ಗೆ ಹೇಳಿಕೆ ನೀಡಿದ್ದು, ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಮುಡಾ ಕಚೇರಿಗೆ ಬಂದು ಮಾಹಿತಿ ಕೇಳಿದ್ದಾರೆ. ದಾಖಲಾತಿಗಳ ಪರಿಶೀಲನೆ ನಡೆಸಿದ್ದಾರೆ. ಇನ್ನೆರಡು ದಿನ ಶೋಧ ಕಾರ್ಯ ನಡೆಯುವ ಸಾಧ್ಯತೆಗಳಿವೆ ಎಂದು ತಿಳಿಸಿದರು.**

**ಆರೋಪ ಗಂಭೀರ ಸ್ವರೂಪ**

**ಈಗ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮೇಲೆ ಮುಡಾ ಹಗರಣದ ಆರೋಪ ಗಂಭೀರ ಸ್ವರೂಪದ್ದಾಗಿದೆ. ಜಾರಿನಿರ್ದೇಶನಾಲಯದ ತನಿಖೆ ಆರಂಭವಾಗುತ್ತಿರುವುದು ಕಾಂಗ್ರೆಸ್‌ನಲ್ಲಿ ಮಿಶ್ರ ಪ್ರತಿಕ್ರಿಯೆಯನ್ನು ಹುಟ್ಟುಹಾಕಿದೆ. ಕೆಲವರಿಗೆ ಒಳಗೊಳಗೆ ಖುಷಿ ಇದ್ದರೆ, ಸಿದ್ದರಾಮಯ್ಯ ಅವರ ಬೆಂಬಲಿಗರು ಆತಂಕ ದುಗುಡದಿಂದ ಬಳಲುವಂತಾಗಿದೆ.**

ಅಂತರಾಳದಿಂದ.. EDITORIAL

# ಬೆಂಗಳೂರಿನಲ್ಲಿ ನಗರ ಮಹಾಪೂರ ಬಿಬಿಎಂಪಿ ಆಡಳಿತ ವೈಫಲ್ಯವೇ ಕಾರಣ



ಉದಯವಾಹಿನಿ ಚಿತ್ರ

ಬೆಂಗಳೂರು ಮಹಾನಗರವು ಆರು ತಿಂಗಳಿನಲ್ಲಿ ಮೂರನೇ ಬಾರಿ ಪ್ರವಾಹ ಪರಿಸ್ಥಿತಿ ಎದುರಿಸಿದೆ. ಮೇ ತಿಂಗಳಿನಲ್ಲಿ ಮುಂಗಾರುಪೂರ್ವ ಮಳೆ ಸುರಿದಾಗ ಒಮ್ಮೆ ಪ್ರವಾಹ ಉಂಟಾಗಿತ್ತು. ಆಗಸ್ಟ್‌ನಲ್ಲಿ ಮುಂಗಾರು ಮಳೆ ಹೆಚ್ಚು ಪ್ರಮಾಣದಲ್ಲಿ ಸುರಿದಾಗಲೂ ನಗರದ ಪೂರ್ವ ಭಾಗದಲ್ಲಿ ದೊಡ್ಡ ಪ್ರಮಾಣದಲ್ಲಿ ಪ್ರವಾಹ ಸೃಷ್ಟಿಯಾಗಿತ್ತು. ಈಗ ಮೂರನೇ ಬಾರಿ ಪ್ರವಾಹದಿಂದ ನಗರದ ಜನರು ಸಂಕಷ್ಟ ಎದುರಿಸುತ್ತಿದ್ದಾರೆ. ಸೋಮವಾರ ರಾತ್ರಿಯಿಂದ ಬುಧವಾರ ಬೆಳಿಗ್ಗೆಯವರೆಗೂ ಸುರಿದ ಮಳೆಗೆ ನಗರದ ಹಲವು ಭಾಗಗಳಲ್ಲಿ ರಾಜಕಾಲುವೆಗಳು ಉಕ್ಕಿ ಹರಿದು ರಸ್ತೆಗಳು ನದಿಗಳಂತಾದವು. ಅಂಡರ್‌ಪಾಸ್‌ಗಳಲ್ಲಿ ನೀರು ತುಂಬಿಕೊಂಡು ವಾಹನ ಸಂಚಾರಕ್ಕೆ ಅಡಚಣೆಯಾಯಿತು. ಹಲವೆಡೆ ತಗ್ಗು ಪ್ರದೇಶಗಳಲ್ಲಿನ ಮನೆಗಳು, ಅಪಾರ್ಟ್‌ಮೆಂಟ್‌ಗಳು, ವಾಣಿಜ್ಯ ಕಟ್ಟಡಗಳಿಗೆ ನೀರು ನುಗ್ಗಿತು. ಯಲಹಂಕದ ಕೇಂದ್ರೀಯ ವಿಹಾರ ಅಪಾರ್ಟ್‌ಮೆಂಟ್ ಮತ್ತು ಹೊರಮಾವು ಬಳಿಯ ಸಾಯಿ ಬಡಾವಣೆಯು ಸಂಪೂರ್ಣ ಜಲಾವೃತ ವಾಗಿದ್ದವು. ಈ ಎರಡೂ ಕಡೆ ಜನರ ಸಂಚಾರ, ಕುಡಿಯುವ ನೀರು ಪೂರೈಕೆಯಂತಹ ಕೆಲಸಕ್ಕೆ ಟ್ರ್ಯಾಕ್ಟರ್ ಗಳ ಮೊರೆ ಹೋಗಬೇಕಾಯಿತು. ಅಲ್ಲಿ ಪರಿಸ್ಥಿತಿ ಇನ್ನೂ ಸುಧಾರಿಸಿಲ್ಲ. ಈ ಬಾರಿಯೂ ದಿನವೊಂದರಲ್ಲಿ ಸುರಿದ ಮಳೆಯ ಗರಿಷ್ಠ ಪ್ರಮಾಣ 10 ಸೆಂಟಿಮೀಟರ್ ದಾಟಿಲ್ಲ. ಆದರೂ, 'ನಗರ ಮಹಾಪೂರ' ಸೃಷ್ಟಿಯಾಗಿ ನಿವಾಸಿಗಳು ಯಾತನೆ ಅನುಭವಿಸುವಂತಾಯಿತು. ಬಿಬಿಎಂಪಿ ವ್ಯಾಪ್ತಿಯ ಹಲವು ಪ್ರದೇಶ ಗಳಲ್ಲಿ ಇಂತಹ ಸ್ಥಿತಿ ಉಂಟಾಗಿದ್ದಕ್ಕೆ ಮಳೆಗಾಲವನ್ನು ಎದುರಿಸಲು ಸಮರ್ಪಕವಾಗಿ ಸಿದ್ಧತೆ ಮಾಡಿ ಕೊಳ್ಳುವಲ್ಲಿ ಪಾಲಿಕೆ ಆಡಳಿತವು ವಿಫಲವಾಗಿರುವುದೇ ಕಾರಣ. ಮಳೆಗಾಲವನ್ನು ಎದುರಿಸಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ' ಎಂದು ಬೆಂಗಳೂರು ಅಭಿವೃದ್ಧಿ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಹಲವು ಬಾರಿ ಹೇಳಿದ್ದರು. ಆದರೆ, ಆರು ತಿಂಗಳ ಅವಧಿಯಲ್ಲಿ ಮೂರು ಬಾರಿ ಉಂಟಾದ ಪ್ರವಾಹವು ಬಿಬಿಎಂಪಿಯ ಮಳೆಗಾಲದ ಸಿದ್ಧತೆಯು ಬಾಯಿ ಮಾತಿಗೆ ಸೀಮಿತವಾಗಿತ್ತು ಎಂಬುದನ್ನು ಜಾಹೀರುಗೊಳಿಸಿದೆ. ಹೆಚ್ಚು ಮಳೆ ಬಿದ್ದಾಗ ಜಗತ್ತಿನ ಎಲ್ಲಾ ದೊಡ್ಡ ನಗರಗಳಲ್ಲೂ ಪ್ರವಾಹ ಸ್ಥಿತಿ ಉಂಟಾಗುತ್ತಿದೆ ಎಂಬ ಸಬೂಬು ಮುಂದಿಟ್ಟು ವೈಫಲ್ಯ ಮುಚ್ಚಿಕೊಳ್ಳಲು ಅಧಿಕಾರಸ್ಥರು ಪ್ರತಿ ಬಾರಿಯೂ ಪ್ರಯತ್ನಿಸುತ್ತಾರೆ. ಆದರೆ, ಬೆಂಗಳೂರಿನಲ್ಲಿ ಸಾಧಾರಣ ಮಳೆಯಾದರೂ ಕೆಲವೆಡೆ ಜನಜೀವನ ಅಸ್ತವ್ಯಸ್ತಗೊಳ್ಳುವಂತಹ ಸ್ಥಿತಿ ಇದೆ. ಪ್ರವಾಹ ಪರಿಸ್ಥಿತಿ ಎದುರಿಸುವ ಮತ್ತು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವ ವಿಷಯದಲ್ಲಿ ಯಾವುದೇ ಸಬೂಬು ಸಮರ್ಥನೀಯವಲ್ಲ. ಬೆಂಗಳೂರು ನಗರವು ಎತ್ತರದ ದಿಣ್ಣೆಗಳು ಹಾಗೂ ತಗ್ಗು ಪ್ರದೇಶಗಳ ಮಿಶ್ರಣದಿಂದ ಕೂಡಿದೆ. ಎತ್ತರದ ಪ್ರದೇಶಗಳಲ್ಲಿ ಬಿದ್ದ ಮಳೆಯ ನೀರು ತಗ್ಗುಪ್ರದೇಶಕ್ಕೆ ಹರಿದು, ಅಲ್ಲಿಂದ ರಾಜಕಾಲುವೆಗಳ ಮೂಲಕ ಕೆರೆಗಳನ್ನು ತಲುಪುತ್ತಿತ್ತು. ಆದರೆ, ಬಹುತೇಕ ರಾಜಕಾಲುವೆಗಳು ಒತ್ತುವರಿಯ ಕಾರಣದಿಂದ ಕಿರಿದಾಗಿವೆ. ಸುಮಾರು 2,000 ಸ್ಥಳಗಳಲ್ಲಿ ರಾಜಕಾಲುವೆಗಳ ಒತ್ತುವರಿ ತೆರವು ಕಾರ್ಯ ವರ್ಷದಿಂದಲೂ ಬಾಕಿ ಉಳಿದಿದೆ. ಈ ವರ್ಷ ಮಳೆಗಾಲಕ್ಕೂ ಮುನ್ನ ಚರಂಡಿಗಳು, ದ್ವಿತೀಯ ಹಂತದ ಕಾಲುವೆಗಳು ಮತ್ತು ರಾಜಕಾಲುವೆಗಳಲ್ಲಿ ಹೂಳು ತೆಗೆಯುವ ಕೆಲಸವೂ ಸಮರ್ಪಕವಾಗಿ ನಡೆದಿಲ್ಲ. ಕೆಲವೆಡೆ ತೆಗೆದ ಹೂಳನ್ನು ಅಲ್ಲಿಯೇ ರಾಶಿ ಹಾಕಿದ್ದರಿಂದ ಮಳೆ ಸುರಿದಾಗ ಅದು ಮತ್ತೆ ಕಾಲುವೆಗಳನ್ನು ಸೇರಿದೆ. ಕೆರೆಗಳ ಒತ್ತುವರಿ ಮುಂದುವರಿದಿರುವುದು ಹಾಗೂ ಕೆರೆಗಳ ಅಂಗಳಗಳಲ್ಲಿ ಕಟ್ಟಡ ನಿರ್ಮಾಣಕ್ಕೆ ಅಂಕುಶ ಹಾಕದಿರುವುದು ಕೂಡ ಸಮಸ್ಯೆ ಬಿಗಡಾಯಿಸಲು ಕಾರಣ ಎಂಬುದು ನಿರ್ವಿವಾದ. ವೈಟ್‌ಫೀಲ್ಡ್ ಸುತ್ತಮುತ್ತಲಿನ ಪ್ರದೇಶ, ಯಲಹಂಕ ಸೇರಿದಂತೆ ಕೆಲವು ಭಾಗಗಳಲ್ಲಿ ಇತ್ತೀಚಿನ ವರ್ಷಗಳಲ್ಲಿ ಪದೇ ಪದೇ ಪ್ರವಾಹ ಸ್ಥಿತಿ ಉಂಟಾಗುತ್ತಿದೆ. ಪ್ರವಾಹ ಉಂಟಾದಾಗ ಮಾತ್ರ ಅಧಿಕಾರಿಗಳು ಎಚ್ಚರಗೊಂಡು ಸ್ಥಳದಲ್ಲಿ ಕಾಣಿಸಿಕೊಳ್ಳುತ್ತಾರೆ. ಪ್ರವಾಹ ತಡೆಗೆ ದೀರ್ಘಕಾಲೀನ ಪರಿಹಾರ ಹುಡುಕುವಲ್ಲಿ ಬಿಬಿಎಂಪಿ ಸರಿಯಾದ ಪ್ರಯತ್ನವನ್ನೇ ಮಾಡಿಲ್ಲ ಎಂಬುದಕ್ಕೆ ಈಗಿನ ಪರಿಸ್ಥಿತಿಯೇ ಪುರಾವೆ ಒದಗಿಸುತ್ತದೆ.

**ಮಳೆ ಸುರಿದಾಗಲೆಲ್ಲ ಜನಜೀವನ ಅಸ್ತವ್ಯಸ್ತಗೊಳ್ಳುವಂತಹ ಪರಿಸ್ಥಿತಿಯಿಂದ ನಗರವನ್ನು ಪಾರು ಮಾಡುವುದಕ್ಕೆ ಆದ್ಯತೆ ನೀಡಬೇಕಿದೆ**

ಸುಮಾರು 830 ಚದರ ಕಿ.ಮೀ. ವಿಸ್ತೀರ್ಣದಲ್ಲಿರುವ ಬಿಬಿಎಂಪಿಯ ವ್ಯಾಪ್ತಿಯನ್ನು ಮತ್ತಷ್ಟು ವಿಸ್ತರಿಸಿ 'ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚಿಸಲು ಡಿ.ಕೆ. ಶಿವಕುಮಾರ್ ಮುಂದಾಗಿದ್ದಾರೆ. 'ಬ್ರ್ಯಾಂಡ್ ಬೆಂಗಳೂರು' ಹೆಸರಿನಲ್ಲಿ ಬೃಹತ್ ಯೋಜನೆಗಳನ್ನೂ ಘೋಷಿಸುತ್ತಿದ್ದಾರೆ. ಪದೇ ಪದೇ ಜನರನ್ನು ಕಾಡುವ ಪ್ರವಾಹ ಸ್ಥಿತಿ ನಿಯಂತ್ರಣದ ವಿಷಯ ಬಿಬಿಎಂಪಿಯ ಆದ್ಯತಾ ಪಟ್ಟಿಯಿಂದಲೇ ಬದಿಗೆ ಸರಿದಂತೆ ಭಾಸವಾಗುತ್ತಿದೆ. ಸಾವಿರಾರು ಕೋಟಿ ರೂಪಾಯಿ ಮೊತ್ತದ ಯೋಜನೆಗಳನ್ನು ಘೋಷಿಸಿ, ಕಾರ್ಯಗತಗೊಳಿಸುವುದಷ್ಟೇ ಅಭಿವೃದ್ಧಿ ಎಂಬ ಭ್ರಮೆಯಿಂದ ಅಧಿಕಾರಸ್ಥರು ಹೊರಬರಬೇಕಿದೆ. ಮಳೆ ಸುರಿದಾಗಲೆಲ್ಲ ಜನಜೀವನ ಅಸ್ತವ್ಯಸ್ತಗೊಳ್ಳುವಂತಹ ಪರಿಸ್ಥಿತಿಯಿಂದ ನಗರವನ್ನು ಪಾರು ಮಾಡುವುದು ಆದ್ಯತೆ ಆಗಬೇಕಿದೆ. ಬೆಂಗಳೂರು ನಗರವನ್ನು ಪದೇ ಪದೇ ಕಾಡುತ್ತಿರುವ 'ನಗರ ಮಹಾಪೂರ'ದಂತಹ ಸಮಸ್ಯೆಗಳ ನಿವಾರಣೆಗೆ ದೃಢವಾದ ಪ್ರಯತ್ನ ಮಾಡಬೇಕಿದೆ. ಬಿಬಿಎಂಪಿಯಲ್ಲಿ ಚುನಾಯಿತ ಪ್ರತಿನಿಧಿಗಳ ಆಡಳಿತ ಇಲ್ಲದಿರುವುದೂ ಈಗಿನ ದುರವಸ್ಥೆಗೆ ಒಂದು ಕಾರಣವಾಗಿರಬಹುದು. ರಾಜಕಾಲುವೆಗಳ ಒತ್ತುವರಿ ತೆರವು, ಹೂಳು ತೆಗೆಯುವುದು ಸೇರಿದಂತೆ ಪ್ರವಾಹ ನಿಯಂತ್ರಣಕ್ಕೆ ಪೂರಕವಾದ ಎಲ್ಲಾ ಕೆಲಸಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕು. ಈ ವಿಷಯದಲ್ಲಿ ಬಿಬಿಎಂಪಿಯನ್ನಷ್ಟೇ ಹೊಣೆ ಮಾಡಿದರೆ ಸಾಲದು, ರಾಜ್ಯ ಸರ್ಕಾರವೂ ಜವಾಬ್ದಾರಿ ತೆಗೆದುಕೊಳ್ಳಬೇಕು.

# ಪರಮಾತ್ಮನಿಗೆ ಕೃತಜ್ಞತೆ

ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ಅಶ್ವತ್ಥಮರದ ಒಂದು ಕೊಂಬೆ ಒಣಗಿದರೆ ಮತ್ತೊಂದು ಚಿಗುರುತ್ತದೆ. ಹೇಗೆ ಆ ಮರವು ತನ್ನ ಚಿರನೂತನತೆಯನ್ನು ಕಾಪಾಡಿಕೊಳ್ಳುತ್ತದೋ, ಹಾಗೆಯೇ ಸಕಲ ಜೀವರಾಶಿಗಳಿಂದ ಕೂಡಿದ ಈ ಜಗತ್ತೆಂಬ ವಿಶ್ವ ವೃಕ್ಷವೂ ಎಂದೆಂದೂ ಬಾಡದೆ ಇರುತ್ತದೆ. ಅಂತಹ ವಿಶ್ವವೃಕ್ಷದ,ಒಂದು ರೆಂಬೆ ನೀನೆಂದು ತಿಳಿ.ನೂರಾರು ವರ್ಷಗಳು ಜೀವಂತವಾಗಿರುವ ಒಂದು ವಿಶಾಲವಾದ ಅಶ್ವತ್ಥವೃಕ್ಷವು ನೂರಾರು ರೆಂಬೆ ಕೊಂಬೆಗಳಿಂದ ಕೂಡಿರುತ್ತದೆ. ಋತು ಚಕ್ರದ ದಾಳಿಗೊಳಗಾಗಿ ಹಲವು ಕೊಂಬೆಗಳು ಬಾಡಿ ಒಣಗಿದರೂ ಮತ್ತೆ ಅಕ್ಕ-ಪಕ್ಕಗಳಿಂದ ಹೊಸ ಚಿಗುರೊಡೆದು, ಹೊಸ ಕೊಂಬೆಗಳಿಗೆ ಎಡೆ ಮಾಡಿಕೊಟ್ಟು ಆ ಮರದ ನಿತ್ಯ ನೂತನತೆಯನ್ನು ಕಾದುಕೊಳ್ಳುತ್ತದೆ. ಇದು ಆ ಮರದ ಪ್ರಕೃತಿ ಅಥವಾ ಸ್ವಭಾವ.ಇದೇ ಸ್ವಭಾವವನ್ನು ಪಡೆದ ಹಲವಾರು ಗಿಡ ಮರಗಳು ನಮಗೆ ನಿಸರ್ಗದಲ್ಲಿ ಸಿಗುತ್ತವೆ. ನೋಡಿ ಬೇಸಿಗೆಯ ಬಿಸಿಲಿಗೆ ಒಣಗಿ ಸುಟ್ಟು, ನಾಮಾವಶೇಷವಿಲ್ಲವಾಗಿಹೋದ ಹುಲ್ಲಿನ ಬೇರು, ನಮಗೆ ಕಾಣದಿದ್ದರೂ ಭೂಮಿಯೊಳಗಿದ್ದು, ನಾಲ್ಕು ಹನಿ ಮಳೆ ಬಿದ್ದೊಡನೆಯೇ ಚಿಗುರಿ ಧರೆಗೆ ಹಸಿರ ಹಾಸಿಗೆಯನ್ನೇ ಹಾಸುವುದಿಲ್ಲವೇ? ಅದೇ ರೀತಿ ಪ್ರಕೃತಿಯ ಎಲ್ಲವೂ.ಇದನ್ನೇ ಇಡೀ ಜಗತ್ತಿಗೆ ಹೋಲಿಸಿದರೆ, ಜೀವಿಗಳು ಈ ಭುವಿಗೆ ಬೇರೆ ಬೇರೆ ರೂಪಗಳನ್ನು ಧರಿಸಿ ಬರುತ್ತವೆ, ಹೊಸ ಚಿಗುರಿನ ರೂಪದಲಿ. ನಾವು ಪುಟ್ಟ ಪುಟ್ಟ ಮಕ್ಕಳನ್ನು ನೋಡಿದರೆ ನಮಗೆ ಒಂದು ಆನಂದ, ಸಂತೋಷ ಆಗುತ್ತದೆ ಅಲ್ಲವೇ? ಏಕೆಂದರೆ ಅವು ಈ ಜಗತ್ತಿನ ಮಾನವ ಪ್ರಪಂಚದಲ್ಲಿ, ಹೊಸ ಚಿಗುರಿನಂತೆ ನಳನಳಿಸುತ್ತವೆ. ಹೊಸ ಚಿಗುರು, ಹೊಸ ಹೂವು, ಹೊಸ ಸುಗಂಧ, ಹೊಸ ಕಾಯಿ, ಹೊಸ ಹಣ್ಣು ಹೀಗೆ ಎಲ್ಲವೂ ನಮಗೆ ಮುದವನ್ನು ನೀಡುತ್ತವೆ. ಒಂದು ಪುಟ್ಟ ಹಕ್ಕಿ, ಒಂದು ಪುಟ್ಟ ನಾಯಿ ಮರಿ ಅಥವಾ ಹಂದಿ ಮರಿ, ಒಂದು ಹಾವಿನ ಪಿಳ್ಳೆ, ಒಂದು ಕೋತಿ ಮರಿ ಹೀಗೆ ಈ ಜಗತ್ತಿಗೆ ಬಂದ ಹೊಸದರಲ್ಲಿ ಎಲ್ಲವೂ ಆಕರ್ಷಣೀಯವಾಗಿರುತ್ತದೆ ಮತ್ತು ಸಂತೋಷಕ್ಕೆ ಕಾರಣವಾಗಿರುತ್ತದೆ. ಕಾಲಾನುಕಾಲಕ್ಕೆ ಅವುಗಳಿಗೆ ವಯಸ್ಸಾಗಿ, ಬಲಿತು, ಮಾಗಿ, ಒಣಗಿ, ಉದುರಿಹೊಗುತ್ತದೆ. ಅದರ ಸ್ಥಳದಲ್ಲಿ ಮತ್ತೊಂದು ಹುಟ್ಟಿಕೊಳ್ಳುತ್ತದೆ.



ಹಾಗೆ ಹುಟ್ಟಿಕೊಂಡದ್ದು ಮತ್ತೆ ಅದೇ ಚಕ್ರಕ್ಕೆ ಬಲಿಯಾಗುತ್ತದೆ ಮತ್ತೆ ಮತ್ತೆ ಹುಟ್ಟುತ್ತದೆ. ಹಾಗಾಗಿ ಈ ವಿಶ್ವವೃಕ್ಷಕ್ಕೆ ಎಂದಿಗೂ ಅಳಿವಿಲ್ಲ. ನಮ್ಮ ಪ್ರಾಣಿ ಪ್ರಪಂಚಲ್ಲಿದ ಪ್ರತಿಯೊಂದು ಸಂಕುಲವನ್ನೂ (ಪ್ರಭೇದ) ಒಂದೊಂದು ವೃಕ್ಷವೆಂದು ಪರಿಗಣಿಸಿದರೆ, ಆ ಸಂಕುಲದಲ್ಲಿರುವ ಪ್ರತೀ ಪ್ರಾಣಿಯೂ ಆ ವೃಕ್ಷದ ಶಾಖೆಯಂತೆಯೇ ಅಲ್ಲವೇ? ಹಾಗೆಯೇ ಮನುಷ್ಯ ಸಂಕುಲದಲ್ಲಿ ಪ್ರತೀ ಮಾನವನೂ ಒಂದೊಂದು ರೆಂಬೆ.

ಲಕ್ಷಾಂತರ ವರ್ಷಗಳಿಂದ ಈ ಮಾನವ ಸಂಕುಲದ ಕೋಟಿ ಕೋಟಿ ರೆಂಬೆಗಳು ಒಣಗಿ ಉದುರಿಹೋಗಿವೆ ಮತ್ತು ಹೊಸ ಹೊಸ ರೆಂಬೆಗಳು ಹುಟ್ಟುತ್ತಲೇ ಇವೆ. ಇಂದು ಬದುಕಿರುವ ನಾವೂ ಸಹ ಈ ಪರಮಾತ್ಮನ ಸೃಷ್ಟಿಯಾದ ಜಗತ್ತಿನಲ್ಲಿ ಮಾನವ ಸಂಕುಲವೆಂಬ ಒಂದು ಬೃಹತ್ ವೃಕ್ಷದಲ್ಲಿನ ರೆಂಬೆಗಳೇ ತಾನೇ? ತನ್ನಿಂದಲೇ ಸೃಷ್ಟಿಸಿಕೊಂಡ, ತಾನೇ ನಡೆಸುತ್ತಿರುವ ಮತ್ತು ತಾನೇ ವಾಸಿಸುತ್ತಿರುವ ಈ ಜಗತ್ತೆಂಬ ವೃಕ್ಷವನ್ನು ತನಗೆ ಹೇಗೆ ಬೇಕೋ ಹಾಗೆ ಸೃಷ್ಟಿಕೊಂಡಿದ್ದಾನೆ,ಆ ಪರಮಾತ್ಮ.

ಇಂತಹ ಸುಂದರ ಜಗತ್ತಿನಲ್ಲಿ ನಮಗೂ ವಾಸಿಸಲು ಮತ್ತು ಇದರ ಸಕಲ ಸೊಬಗನ್ನೂ ಆಸ್ವಾದಿಸಲು, ನಮಗೆ ಕೃಪೆ ತೋರಿ ಅನುವುಮಾಡಿಕೊಟ್ಟಿದ್ದಾನೆಂದು ನಾವೆಲ್ಲಾ ಅವನಿಗೆ ಅಥವಾ ಆ ಪರಮ ಚೇತನಕ್ಕೆ ಭಕ್ತಿಯಿಂದ ಕೃತಜ್ಞತೆಯನ್ನು ತೋರುವುದಲ್ಲದೆ ಬೇರೇನನ್ನು ತಾನೇ ಮಾಡಲು ಸಾಧ್ಯ?

# ಬಿಗ್ ಬಾಸ್ ಶೋ ನಿಲ್ಲಿಸುವಂತೆ ತುರ್ತು ನೋಟಿಸ್ ಜಾರಿ

• ಉದಯವಾಹಿನಿ, ಬೆಂಗಳೂರು




ಉದಯವಾಹಿನಿ ಚಿತ್ರ

ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ನಡೆಸಿಕೊಡುವ ಕನ್ನಡ ಕಿರುತೆರೆಯ ಜನಪ್ರಿಯ ರಿಯಾಲಿಟಿ ಶೋ ಬಿಗ್‌ಬಾಸ್ 11ನೇ ಆವೃತ್ತಿಯೂ ಶುರುವಾದಗಿನಿಂದಲೂ ಒಂದಲ್ಲ ಒಂದು ಕಾರಣಕ್ಕೆ ಸದ್ದು ಮಾಡುತ್ತಿದ್ದು, ಈ ಬಾರಿ ಕಾರ್ಯಕ್ರಮವು ವಿವಾದದಿಂದಲೇ ಹೆಚ್ಚು ಸದ್ದು ಮಾಡುತ್ತಿದೆ. ಸ್ಪರ್ಧಿಗಳ ನಡುವಿನ ಕಿತ್ತಾಟ ಹಾಗೂ ಅವಾಚ್ಯ ಶಬ್ದಗಳ ಬಳಕೆಯಿಂದಲೇ ಕಾರ್ಯಕ್ರಮವು ಹೆಚ್ಚು ಸುದ್ದಿಯಲ್ಲಿದ್ದು, ಒಂದಲ್ಲ ಒಂದು ಸಂಕಷ್ಟ ಎದುರಿಸುತ್ತಿದ್ದು, ಇದೀಗ ಮತ್ತೊಂದು ಸಂಕಷ್ಟಕ್ಕೆ ಕೊರಳೊಡ್ಡಿದೆ. ಕಾರ್ಯಕ್ರಮವನ್ನು ಮೊದಲು ಸ್ವರ್ಗ-ನರಕ ಎಂಬ ಥೀಮ್‌ನಲ್ಲಿ ಕಾರ್ಯಕ್ರಮ ರೂಪುಗೊಂಡಿತ್ತು. ಆದರೆ, ಮಾನವ ಹಕ್ಕುಗಳ ಉಲ್ಲಂಘನೆಯಾಗಿದೆ ಎಂದು ದೂರು ಸಲ್ಲಿಕೆಯಾಗಿತ್ತು. ಇದಾದ ಬಳಿಕ ಮನೆಯಲ್ಲಿ ಮಹಿಳಾ ಸ್ಪರ್ಧಿಗಳ ಖಾಸಗಿತನಕ್ಕೆ ಧಕ್ಕೆಯಾಗಿದೆ ಅಂತ ಮಹಿಳಾ ಆಯೋಗಕ್ಕೆ ಪತ್ರದ ಮೂಲಕ ವಕೀಲೆ ದೂರು ನೀಡಿದ್ದರು. ನೋಟಿಸ್ ಬಂದ ಬಳಿಕ ಎಚ್ಚೆತ್ತುಕೊಂಡ ಬಿಗ್‌ಬಾಸ್ ಆಯೋಜಕರು ನರಕ-ಸ್ವರ್ಗ ಎಂಬ ಪರಿಕಲ್ಪನೆಯನ್ನು ಅರ್ಧಕ್ಕೆ ನಿಲ್ಲಿಸಿ ಎಲ್ಲಾ ಸ್ಪರ್ಧಿಗಳನ್ನು ಒಂದೇ ಮನೆಯಲ್ಲಿ ಇರುವ ಅವಕಾಶ ಕಲ್ಪಿಸಿಕೊಟ್ಟಿದ್ದರು. ಇದಲ್ಲದೆ ವಾರದ ಕೊನೆಯಲ್ಲಿ ನಿರೂಪಕ ಕಿಚ್ಚ ಸುದೀಪ್ ಮಹಿಳಾ ಸ್ಪರ್ಧಿಗಳಿಂದಲೇ ಸ್ಪಷ್ಟನೆ ಕೊಡಿಸುವ ಮೂಲಕ ಖಾಸಗಿತನಕ್ಕೆ ಯಾವುದೇ ಧಕ್ಕೆಯಾಗಿಲ್ಲ ಎಂಬುದನ್ನು ಹೇಳಿದ್ದರು. ಇದೀಗ ಬಿಗ್‌ಬಾಸ್ ಕಾರ್ಯಕ್ರಮದ ಪ್ರಸಾರವನ್ನು ಖಾಯಂ ಆಗಿ ರದ್ದುಪಡಿಸುವಂತೆ ಶಿವಮೊಗ್ಗ ಜಿಲ್ಲೆಯ ಸಾಗರದ ಮಾನ್ಯ ಪ್ರಧಾನ ವ್ಯವಹಾರ ನ್ಯಾಯಾಧೀಶರ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಲಾಗಿದೆ.

ಕನ್ನಡ ಕಲರ್ಸ್ ವಾಹಿನಿಯಲ್ಲಿ ಪ್ರಸಾರವಾಗುತ್ತಿರುವ ಬಿಗ್ ಬಾಸ್ 11 ನೇ ಸೀಸನ್ ವಿರುದ್ಧ ಶಿವಮೊಗ್ಗ ಜಿಲ್ಲೆಯ ಸಾಗರದ ವಕೀಲ ಕೆ.ಎಲ್ ಭೋಜರಾಜ್ ಎಂಬುವವರು ಪ್ರಧಾನ ವ್ಯವಹಾರ ನ್ಯಾಯಾಧೀಶರ ನ್ಯಾಯಾಲಯದಲ್ಲಿ ವ್ಯವಹಾರ ಪ್ರಕ್ರಿಯಾ ಸಂಹಿತೆ ಆದೇಶ 39 ನಿಯಮ 1 ಮತ್ತು 2 ರೆಡ್ ವಿತ್ ಸೆಕ್ಷನ್ 151ರ ಪ್ರಕಾರ ಅರ್ಜಿ ಸಲ್ಲಿಸಿದ್ದಾರೆ. ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಧೀಶರಾದ ಚಾಂದಿನಿ ಅವರು ಸಿವಿಲ್ ಕಾರ್ಯವಿಧಾನದ ಕೋಡ್ ಕಾಯಿದೆ U/ sec.26, order7, rule1 ಅಡಿಯಲ್ಲಿ ಕಲರ್ಸ್ ಕನ್ನಡ ವಾಹಿನಿಯ ನಿರ್ಮಾಪಕರ ಹಾಗೂ ಸಂಪಾದಕರಿಗೆ ತುರ್ತು ನೋಟಿಸ್ ನೀಡಿದ್ದು, ಮುಂದಿನ ವಿಚಾರಣೆಯನ್ನು ಅಕ್ಟೋಬರ್ 28ರಂದು ನಡೆಸುವುದಾಗಿ ಹೇಳಿ ಅರ್ಜಿಯನ್ನು ಮುಂದೂಡಿದ್ದಾರೆ.

**ಶೀಘ್ರದಲ್ಲೇ ಶೋ ಅಂತ್ಯ**

**11ನೇ ಆವೃತ್ತಿಯ ಬಿಗ್‌ಬಾಸ್ ಒಂದಿಲ್ಲೊಂದು ಕಾರಣಕ್ಕೆ ಸುದ್ದಿಯಲ್ಲಿದ್ದು, ಪ್ರೇಕ್ಷಕರು ಆಯೋಜಕರ ವಿರುದ್ಧ ಕಿಡಿಕಾರುತ್ತಿದ್ದಾರೆ. ಕಾರ್ಯಕ್ರಮ ಶುರುವಾದ ದಿನದಿಂದಲೂ ಸ್ಪರ್ಧಿಗಳ ನಡುವೆ ಒಂದಿಲ್ಲೊಂದು ಕಾರಣಕ್ಕೆ ಜಗಳವಾಗುತ್ತಿದ್ದು, ಅವಾಚ್ಯ ಶಬ್ದಗಳನ್ನು ಹೆಚ್ಚು ಬಳಸುತ್ತಿರುವುದು ಪ್ರೇಕ್ಷಕರಿಗೆ ದೊಡ್ಡ ಕಿರಿಕಿರಿಯನ್ನು ಉಂಟು ಮಾಡಿದೆ. ಇದಲ್ಲದೆ ಕಳೆದ ವಾರ ನಿರೂಪಕ ಕಿಚ್ಚ ಸುದೀಪ್ ಕೂಡ ಇದು ತಮ್ಮ ಕೊನೆಯ ಸೀಸನ್ ಎಂದು ಅಧಿಕೃತವಾಗಿ ಘೋಷಿಸಿದ್ದರು. ಇದೀಗ ಕಾರ್ಯಕ್ರಮದ ಪ್ರಸಾರವನ್ನು ರದ್ದುಪಡಿಸುವಂತೆ ಕೋರಿ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಕೆಯಾಗಿದ್ದು, ಮುಂದಿನ ದಿನಗಳಲ್ಲಿ ಇದು ಯಾವ ಹಂತ ತಲುಪಲಿದೆ ಎಂದು ಕಾದು ನೋಡಬೇಕಿದೆ.**

# ಕೀಬೋರ್ಡ್ ಮೇಲೆ ಎಫ್, ಜೆ ಅಕ್ಷರಗಳ ಕೆಳಗೆ ಒಂದು ಗೆರೆ ಇರೋದು ಯಾಕೆ ಗೊತ್ತಾ?

• ಉದಯವಾಹಿನಿ, ಬೆಂಗಳೂರು




ಉದಯವಾಹಿನಿ ಚಿತ್ರ

ಇತ್ತೀಚಿನ ದಿನಗಳಲ್ಲಿ ಕಂಪ್ಯೂಟರ್ ಮತ್ತು ಲ್ಯಾಪ್‌ಟಾಪ್‌ಗಳನ್ನ ಬಹುತೇಕ ಎಲ್ಲೆಡೆ ಬಳಸಲಾಗುತ್ತದೆ, ಅದು ವಿದ್ಯಾರ್ಥಿಯಾಗಿರಲಿ ಅಥವಾ ಉದ್ಯೋಗಿಯಾಗಿರಲಿ. ಆದರೆ ಕೀಬೋರ್ಡ್‌ನಲ್ಲಿ ಎಫ್ ಮತ್ತು ಜೆ ಅಕ್ಷರಗಳ ಅಡಿಯಲ್ಲಿರುವ ಸಣ್ಣ ಗೆರೆಗಳನ್ನ ಎಂದಾದರೂ ಗಮನಿಸಿದ್ದೀರಾ. ಹಾಗಿದ್ದಲ್ಲಿ, ಅದನ್ನು ಏಕೆ ವಿನ್ಯಾಸಗೊಳಿಸಲಾಗಿದೆ ಎಂದು ನಿಮಗೆ ತಿಳಿದಿದೆಯೇ ನಿಮಗೆ ತಿಳಿದಿಲ್ಲದಿದ್ದರೆ, ಈ ಲೇಖನದಲ್ಲಿ ಉತ್ತರವನ್ನ ಕಂಡುಕೊಳ್ಳಿ.ಈ, ಎ ಗುಂಡಿಗಳಲ್ಲಿ ಏಕೆ ಗುರುತುಗಳಿವೆ. ಎಫ್ ಮತ್ತು ಜೆ ಬಟನ್'ಗಳಲ್ಲಿರುವ ಈ ಚಿಕ್ಕ ಚಿಹ್ನೆಗಳು ಟೈಪಿಂಗ್ ಜಗತ್ತಿನಲ್ಲಿ ದೊಡ್ಡ ಪಾತ್ರವನ್ನ ವಹಿಸುತ್ತವೆ ಎಂದು ತಿಳಿದರೆ ನಿಮಗೆ ಆಶ್ಚರ್ಯವಾಗಬಹುದು. ವಾಸ್ತವವಾಗಿ, ಈ ಸಾಲುಗಳ ಮುಖ್ಯ ಉದ್ದೇಶವು ಟೈಪಿಂಗ್'ನ್ನ ವೇಗಗೊಳಿಸುವುದು, ಕೀಬೋರ್ಡ್'ನ್ನ ನೋಡದೆ ವೇಗವಾಗಿ ಟೈಪ್ ಮಾಡಲು ನಿಮಗೆ ಸಹಾಯ ಮಾಡುತ್ತದೆ.

ಈ ಗುರುತುಗಳು ಟೈಪಿಂಗ್ ಮಾಡಲು ಸಹಾಯ ಮಾಡುತ್ತದೆ. ಎಡ ತೋರು ಬೆರಳನ್ನ ಎಫ್ ಬಟನ್ ಮೇಲೆ ಮತ್ತು ಬಲ ತೋರು ಬೆರಳನ್ನ ಜೆ ಬಟನ್ ಮೇಲೆ ಇರಿಸಿದ್ರೆ, ಉಳಿದ ಬೆರಳುಗಳು ಸ್ವಯಂಚಾಲಿತವಾಗಿ ಸರಿಯಾದ ಸ್ಥಾನಕ್ಕೆ ಚಲಿಸುತ್ತವೆ. ಇದು ಟೈಪಿಂಗ್ ವೇಗ ಮತ್ತು ನಿಖರತೆಯನ್ನ ಹೆಚ್ಚಿಸುತ್ತದೆ. ಇದಲ್ಲದೆ, ಟೈಪ್ ಮಾಡಲು ಪ್ರಾರಂಭಿಸಲು ಕೀಬೋರ್ಡ್‌ನಲ್ಲಿ ಬೆರಳುಗಳ ಸರಿಯಾದ ಸ್ಥಾನದ ಬಗ್ಗೆ ಟೈಪಿಸ್ಟ್‌ಗೆ ತಿಳಿಸಲು ಈ ಗುರುತುಗಳು ಸಹಾಯ ಮಾಡುತ್ತವೆ.

**ಎಫ್ ಮತ್ತು ಜೆ ಬಟನ್'ಗಳನ್ನ ಏಕೆ ಆಯ್ಕೆ ಮಾಡಲಾಗಿದೆ:** ಈಗ ಎಫ್ ಮತ್ತು ಜೆ ಗುಂಡಿಗಳನ್ನ ಮಾತ್ರ ಏಕೆ ಆಯ್ಕೆ ಮಾಡಲಾಗಿದೆ ಎಂಬ ಪ್ರಶ್ನೆ ಉದ್ಭವಿಸುತ್ತದೆ. ಆದ್ದರಿಂದ ಇದಕ್ಕೆ ಕಾರಣವೆಂದರೆ ಈ ಗುಂಡಿಗಳ ಸ್ಥಳ. ವಾಸ್ತವವಾಗಿ, ಈ ಎರಡು ಬಟನ್‌ಗಳು ಕೀಬೋರ್ಡ್‌ನ ಮಧ್ಯದಲ್ಲಿಯೇ ಇರುತ್ತವೆ, ಆದರೆ ಅವುಗಳ ಸುತ್ತಲಿನ ಬಟನ್‌ಗಳನ್ನು ಹೆಚ್ಚು ಬಳಸಲಾಗುತ್ತದೆ. ಆದ್ದರಿಂದ, ಈ ಗುಂಡಿಯನ್ನ ಗುರುತಿಸುವ ಮೂಲಕ, ಟೈಪರ್ ಇತರ ಗುಂಡಿಗಳನ್ನ ತಲುಪಲು ಸುಲಭವಾಗುತ್ತದೆ.

# ಸರ್ಕಾರಿ ನೌಕರರ ವಿಶೇಷ ಮನವಿ: ಸಿಎಂಗೆ ಪತ್ರ ಬರೆದ ಡಿಸಿಎಂ ಪತ್ರದಲ್ಲಿ ಏನಿದೆ?

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರವು ಸರ್ಕಾರಿ ನೌಕರರಿಗೆ ಗುಡ್‌ನ್ಯೂಸ್‌ವೊಂದನ್ನು ನೀಡಿದೆ. ರಾಜ್ಯ ಸರ್ಕಾರಿ ನೌಕರರಿಗೆ ಸಂಬಂಧಿಸಿದ ಕೆಲವು ನಿರ್ದಿಷ್ಟ ವಿಷಯಗಳಿಗೆ ಅನುಮೋದನೆ ನೀಡವಂತೆ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದು ಮನವಿ ಮಾಡಿದ್ದಾರೆ. ರಾಜ್ಯ ಸರ್ಕಾರಿ ನೌಕರರು ಹಾಗೂ ಕೇಂದ್ರ ಸರ್ಕಾರಿ ನೌಕರರಿಗೆ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರಗಳೆರಡೂ ಸಹ ವಿವಿಧ ಸೌಲಭ್ಯಗಳನ್ನು ನೀಡುತ್ತಿವೆ. ಅಲ್ಲದೇ ಇತ್ತೀಚಿನ ದಿನಗಳಲ್ಲಿ ಡಿ.ಎ ವಿಷಯದಲ್ಲೂ ಕೆಲವು ಮಹತ್ವದ ಬದಲಾವಣೆಗಳು ಆಗಿವೆ. ಕೇಂದ್ರ ಸರ್ಕಾರಿ ನೌಕರರ ತುಟ್ಟಿಭತ್ಯೆಯನ್ನು (ಡಿಎ) ಶೇ.3ರಷ್ಟು ಹೆಚ್ಚಳ ಮಾಡಲಾಗಿದೆ. ಈ ನಡುವೆ ರಾಜ್ಯ ಸರ್ಕಾರವು ಸಹ ಸರ್ಕಾರಿ ನೌಕರರೊಂದಿಗೆ ನಿವೃತ್ತ ನೌಕರರಿಗೂ ಕೆಲವೊಂದು ವಿನಾಯಿತಿಗಳನ್ನು ನೀಡಿದೆ.

ಕರ್ನಾಟಕ ರಾಜ್ಯ ನಿವೃತ್ತ ನೌಕರರಿಗೆ ವಿಶೇಷ ವಿನಾಯಿತಿಯನ್ನು ನೀಡಲಾಗಿದೆ. 01.07.2022 ರಿಂದ 31.07.2024ರ ಅವಧಿಯಲ್ಲಿ ನಿವೃತ್ತರಾದ ನೌಕರರಿಗೆ ಕೆಲವು ವಿನಾಯಿತಿಗಳನ್ನು ನೀಡುವಂತೆ ಮನವಿ ಮಾಡಲಾಗಿತ್ತು. ಇದಕ್ಕೆ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ದನಿಗೂಡಿಸಿದ್ದಾರೆ. ಈ ಬಗ್ಗೆ ಕ್ರಮ ವಹಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಪತ್ರ ಬರೆದಿದ್ದಾರೆ. ಡಿ.ಸಿ.ಆರ್.ಜಿ ಕಮ್ಯು ಟೇಶನ್, ಗಳಿಕೆ ರಜೆ, ನಗದೀಕರಣದ ಮೊತ್ತವನ್ನು (ಲೀವ್ ಎನ್‌ಕ್ಯಾಶ್‌ಮೆಂಟ್) 7ನೇ ವೇತನ ಆಯೋಗದ ಲೆಕ್ಕಾಚಾರದಲ್ಲಿ ನೀಡಲು ಹಾಗೂ ಸರ್ಕಾರಿ ಆದೇಶ ಸಂಖ್ಯೆ: ಆಇ21ಎಸ್‌ಆರ್‌ಪಿ2024ರ ಬಗ್ಗೆ ಪ್ರಸ್ತಾಪಿಸಿದ್ದಾರೆ. ಇದರಲ್ಲಿ ಆರ್ಥಿಕ ಸೌಲಭ್ಯವನ್ನು 01.08.2024ರ ಬದಲಾಗಿ 01.07.2022ರಿಂದ 31.07.2024ರ ಅವಧಿಯಲ್ಲಿ ನಿವೃತ್ತರಾದ ನೌಕರರಿಗೆ ಪ್ರಸ್ತಾವನೆ (ಪ್ರಾಪ್ತವಾಗತಕ್ಕದ್ದು) ಎಂದು ತಿದ್ದುಪಡಿ ಮಾಡಬೇಕು ಎಂದು ಸಚಿವ ಸಂಪುಟ ಸಭೆಯಲ್ಲಿ ಮಂಡಿಸಲು. ಅಲ್ಲದೇ ಈ ವಿಷಯವನ್ನು ಅಂಗೀಕರಿಸಿ ಪರಿಷ್ಕೃತ ಆದೇಶ ಹೊರಡಿಸುವಂತೆ ಮನವಿ ಮಾಡಲಾಗಿದೆ. ಈ ಪತ್ರವನ್ನು ಆದೇಶ ಪತ್ರದೊಂದಿಗೆ ಸೇರಿಸುತ್ತಿರುವುದಾಗಿಯೂ ಡಿ.ಕೆ ಶಿವಕುಮಾರ್ ಅವರು ಹೇಳಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬರೆದ ಪತ್ರದಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿರುವ ಡಿ.ಕೆ ಶಿವಕುಮಾರ್ ಅವರು, ಈ ಮನವಿಯನ್ನು ಸಹಾನುಭೂತಿ ದೃಷ್ಟಿಯಿಂದ ಪರಿಗಣಿಸುವಂತೆ ಹಾಗೂ ನಿಯಮಾನುಸಾರ ಸೂಕ್ತ ಆದೇಶ ಹೊರಡಿಸುವಂತೆ ಮನವಿ ಮಾಡಿದ್ದಾರೆ. ಇನ್ನು ಮತ್ತೊಂದು ಕಡೆ ಕೇಂದ್ರ ಸರ್ಕಾರವು ಸಹ ಸರ್ಕಾರಿ ನೌಕರರಿಗೆ ಗುಡ್‌ನ್ಯೂಸ್ ಕೊಟ್ಟಿದೆ. 2024ನೇ ಸಾಲಿನ ಜುಲೈ 1ರಿಂದಲೇ ಜಾರಿಗೆ ಬರುವಂತೆ ಕೇಂದ್ರ ಸರ್ಕಾರಿ ನೌಕರರ ತುಟ್ಟಿಭತ್ಯೆಯನ್ನು (ಡಿಎ) ಶೇ.3ರಷ್ಟು ಹೆಚ್ಚಳ ಮಾಡಲಾಗಿದೆ.

# ಕಲಿಯಲು ಇದು ಒಂದು ಉತ್ತೇಜಕ ಅವಕಾಶ

• ಉದಯವಾಹಿನಿ, ಬೆಂಗಳೂರು

ಉದಯವಾಹಿನಿ ಚಿತ್ರ

Ek Bharat Shreshtha Bharat Yuva sangam Exposure Visit of Youth to Various States of India

ಶಿಕ್ಷಣ ಸಚಿವಾಲಯವು ಏಕ್ ಭಾರತ್ ಶ್ರೇಷ್ಠ ಭಾರತ್ (ಇಬಿಎಸ್‌ಬಿ) ಅಡಿಯಲ್ಲಿ ಪ್ರಾರಂಭಿಸಲಾದ ಭಾರತ್‌ನ ಅತ್ಯಂತ ಪ್ರಸಿದ್ಧ ಸಾಂಸ್ಕೃತಿಕ ವಿನಿಮಯ ಕಾರ್ಯಕ್ರಮ - ಯುವ ಸಂಗಮ್ - ಭಾಗವಹಿಸುವವರಿಗೆ ನೋಂದಾಯಿಸಲು ಕೇವಲ 4 ದಿನಗಳು ಉಳಿದಿವೆ. 21 ಅಕ್ಟೋಬರ್ 2024 ರವರೆಗೆ ನೋಂದಣಿಗಳನ್ನು ಸ್ವೀಕರಿಸಲಾಗುತ್ತದೆ. ಯುವ ಸಂಗಮ ಹಂತಗಿಗಾಗಿ ಆನ್‌ಲೈನ್‌ನ ಲ್ಲಿ ನೋಂದಾಯಿಸಿ - ನಿಮ್ಮ ರಾಜ್ಯಕ್ಕೆ ರಾಯಭಾರಿಯಾಗಿರಿ 18-30 ವರ್ಷ ವಯಸ್ಸಿನ ಯುವ ವೃತ್ತಿಪರರು ಮತ್ತು ವಿದ್ಯಾರ್ಥಿಗಳನ್ನು (ಆನ್‌ಲೈನ್, ದೂರದ ಕಲಿಕೆಯ ಕೋರ್ಸ್‌ಗಳಿಗೆ, ಕೌಶಲ್ಯ ಸಂಸ್ಥೆಗಳಲ್ಲಿ ಇತ್ಯಾದಿಗಳಿಗೆ ದಾಖಲಾದಂತಹ ಕ್ಯಾಂಪಸ್‌ನ ಹೊರಗೆ ಕಲಿಯುವವರು ಸೇರಿದಂತೆ) ನೋಂದಾಯಿಸಲು ಆಹ್ವಾನಿಸಲಾಗಿದೆ.

**ವಿವರವಾದ ಮಾಹಿತಿ ಇಲ್ಲಿ ಲಭ್ಯವಿದೆ:** https://ebsb.aicte-india.org ಬೆಂಗಳೂರು 18 ಅಕ್ಟೋಬರ್ 2024: ಏಕ್ ಭಾರತ್ ಶ್ರೇಷ್ಠ ಭಾರತ್ (ಇಬಿಎಸ್‌ಬಿ) ಕಾರ್ಯಕ್ರಮದ ಅಡಿಯಲ್ಲಿ ಶಿಕ್ಷಣ ಸಚಿವಾಲಯವು ಪ್ರಾರಂಭಿಸಿದ ವಿಶಿಷ್ಟ ಉಪಕ್ರಮವಾದ ಯುವ ಸಂಗಮದಲ್ಲಿ ಭಾಗವಹಿಸುವ ಮೂಲಕ ಭಾರತದಾದ್ಯಂತ ಸಾವಿರಾರು ಯುವಕರು ತಮ್ಮ ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳನ್ನು ಪ್ರತಿನಿಧಿಸುವ ಅವಕಾಶವನ್ನು ಹೊಂದಿದ್ದಾರೆ. ಇದು 5ನೇ ಯುವ ಸಂಗಮ್‌ನ ಹಂತ ಮತ್ತು ಆನ್‌ಲೈನ್ ನೋಂದಣಿಗಳು 21ನೇ ಅಕ್ಟೋಬರ್, 2024 ರವರೆಗೆ ತೆರೆದಿರುತ್ತವೆ. 18-30 ವರ್ಷ ವಯಸ್ಸಿನ ಆಸಕ್ತ ಅಭ್ಯರ್ಥಿಗಳು, ಮುಖ್ಯವಾಗಿ ವಿದ್ಯಾರ್ಥಿಗಳು, NSS/NYKS ಸ್ವಯಂಸೇವಕರು, ಉದ್ಯೋಗಿ/ಸ್ವಯಂ ಉದ್ಯೋಗಿಗಳು, ಇತ್ಯಾದಿ ಯುವ ಸಂಗಮ್ ಮೂಲಕ ನೋಂದಾಯಿಸಿಕೊಳ್ಳಬಹುದು. ಗ ಡುವಿನ ಮೊದಲು ಪೋರ್ಟಲ್. ಆನ್‌ಲೈನ್ ಕೋರ್ಸ್‌ಗಳಿಗೆ ದಾಖಲಾದವರು, ಕೌಶಲ್ಯ ಸಂಸ್ಥೆಗಳಲ್ಲಿ ಇತ್ಯಾದಿ ಸೇರಿದಂತೆ ಕ್ಯಾಂಪಸ್‌ನ ಹೊರಗಿರುವ ಯುವಕರು ನೋಂದಾಯಿಸಲು ಒತ್ತಾಯಿಸಲಾಗಿದೆ. ಶಿಕ್ಷಣದ. ಮಾನ್ಯತೆ ಮತ್ತು ತಿಳುವಳಿಕೆಯ ಮೂಲಕ ಭಾರತದ ವಿಶಾಲ ಪ್ರದೇಶಗಳ ನಡುವಿನ ಸಂಬಂಧವನ್ನು ಗಾಢವಾಗಿಸುವುದು ಉದ್ದೇಶವಾಗಿದೆ ಮತ್ತು ಈ ಉಪಕ್ರಮವು ಅರಿವು ಮತ್ತು ಸಹಾನುಭೂತಿ ಹೊಂದಿರುವ ಮುಂದಿನ ಪೀಳಿಗೆಯ ನಾಗರಿಕರನ್ನು ಪೋಷಿಸುವ ಮೂಲಕ ರಾಷ್ಟ್ರ ನಿರ್ಮಾಣದಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ.

**5-7 ದಿನಗಳ ಈ ಪರಿವರ್ತಕ ಪ್ರಯಾಣದ ಮೂಲಕ ವಿದ್ಯಾರ್ಥಿಗಳು, ಯುವ ವೃತ್ತಿಪರರಿಗೆ ದೇಶ, ಅದರ ಜನರು, ತಮ್ಮ ಬಗ್ಗೆ ಕಲಿಯಲು ಇದು ಒಂದು ಉತ್ತೇಜಕ ಅವಕಾಶವಾಗಿದೆ. ಯುವ ಸಂಗಮವು ಭಾಗವಹಿಸುವವರಿಗೆ ಭಾರತದ ವೈವಿಧ್ಯತೆಯನ್ನು ನೇರವಾಗಿ ಅನುಭವಿಸಲು, ಸಾಂಸ್ಕೃತಿಕ-ಸಾಮಾಜಿಕ ಸಾಮ್ಯತೆ ಮತ್ತು ಸವಾಲುಗಳನ್ನು ಗುರುತಿಸಲು ಮತ್ತು ಸಮಸ್ಯೆಗಳನ್ನು ಪರಿಹರಿಸಲು ಅಥವಾ ತಮ್ಮ ವೃತ್ತಿಪರ/ಶೈಕ್ಷಣಿಕ ಪರಿಣತಿಯ ಕ್ಷೇತ್ರಗಳ ಮೂಲಕ ಅವಕಾಶಗಳನ್ನು ಪಡೆಯಲು ಅಂತರ್ಗತ ಪರಿಹಾರಗಳನ್ನು ಅಭಿವೃದ್ಧಿಪಡಿಸಲು ಅನುವು ಮಾಡಿಕೊಡುತ್ತದೆ, ''ಎಂದು ಸಚಿವಾಲಯದ ಹಿರಿಯ ಅಧಿಕಾರಿಯೊಬ್ಬರು ಹೇಳಿದರು.**




• ಹಿಂದಿನ ಸಂಚಿಕೆಯಿಂದ **12ನೆಯ ಅಧ್ಯಾಯ**

ನಾಲ್ವರು ಮಕ್ಕಳಲ್ಲಿ ಧರ್ಮಬುದ್ಧಿಯುಳ್ಳ ರಾಮಚಂದ್ರನಲ್ಲಿ ನನಗೆ ಅತ್ಯಂತ ಪ್ರೀತಿಯುಂಟಾಗಿದೆ, ಆದ್ದರಿಂದ ಆತನನ್ನು ಕರೆಯಬೇಡಿರಿ, ಆ ರಾಕ್ಷಸರು ಯಾರು ಎಂಥ ಪರಾಕ್ರಮವುಳ್ಳವರು ಅವರನ್ನು ವಹಿಸಿ ರಕ್ಷಣೆಮಾಡಿಕೊಂಡಿರುವವರಾರು ಆ ರಾಕ್ಷಸರ ಯುದ್ಧದಲ್ಲಿ ಈ ಬಾಲಕ ನಿಂದಲೂ ನನ್ನಿಂದಲೂ ಆಗುವ ಕಾರ್ಯವೇನು ರಾಕ್ಷಸರು ಮಹಾಪರಾಕ್ರಮದಿಂದ ಕೊಬ್ಬಿದವರು ಅವರ ಮುಂ ದೆ ನಿಲ್ಲುವ ಬಗೆ ಯಾವುದು ಈ ವೃತ್ತಾಂತಗಳನ್ನು ನನಗೆ- ತಿಳುಹಿಸಬೇಕು ಎಂದು ನುಡಿದನು.

ವಿಶ್ವಾಮಿತ್ರನು ಆತನನ್ನು ನೋಡಿ ದಶರಥರಾಜನೆ, ರಾಕ್ಷಸರ ಸ್ವರೂಪವನ್ನೂ ಅವರ ವೃತ್ತಾಂತವನ್ನೂ ಹೇಳುತ್ತೇನೆ ಕೇಳು. ಪುಲಸ್ತ್ಯಬ್ರಹ್ಮನೆಂಬ ಒಬ್ಬ ಮುನೀಶ್ವರನುಂಟು ಆತನ ವಂಶದಲ್ಲಿ ರಾವಣನು ಜನಿಸಿದನು. ಆತನು ಪೂರ್ವದಲ್ಲಿ ಬ್ರಹ್ಮದೇವನು ಕೊಟ್ಟ ವರಬಲದಿಂದ ಮೂರು ಲೋಕಗಳನ್ನೂ ಬಾಧಿಸುತ್ತಿದ್ದಾನೆ ಮಹಾಬಲಪರಾಕ್ರಮವುಳ್ಳವನು ಅನೇಕ ಮಂದಿ ಬಲವಂತರಾದ ರಾಕ್ಷಸರೊಡನೆ ಕೂಡಿಕೊಂಡಿದ್ದಾನೆ ಕುಬೇರನಿಗೆ ಒಡಹುಟ್ಟಿದನು. ವಿಶ್ರವಸ್ಸು ಎಂಬ ಮುನೀಶ್ವರನ ಮಗನು. ಸಮಸ್ತ ಯಜ್ಞಕರ್ಮಗಳಿಗೂ ತಾನೇ ಪ್ರಧಾನನಾಗಿ ವಿಘ್ನವನ್ನು ಮಾಡುವನು. ಅಂಥ ರಾವಣನಿಂದ ನಿಯಮಿಸಲ್ಪಟ್ಟ ಮಾರೀಚ ಸುಬಾಹುಗಳೆಂಬ ರಾಕ್ಷಸರು ಮಹಾಬಲವಂತರು. ಘೋರವಾದ ಆಕಾರವುಳ್ಳವರು ಅವರು ನನ್ನ ಯಜ್ಞಕ್ಕೆ ವಿಘ್ನವನ್ನು ಮಾಡುತ್ತಾರೆ '' ಎಂದು ನುಡಿದನು.

ಆಗ ದಶರಥನು ಆ ಮುನೀಶ್ವರನನ್ನು ನೋಡಿ ಮಹರ್ಷಿಗಳ, ಅಂಥ ದುರಾತ್ಮರಾದ ರಾಕ್ಷಸರೊಡನೆ ಯುದ್ಧದಲ್ಲಿ ನಿಲ್ಲುವುದಕ್ಕೆ ಬಾಲನಾದ ನನ್ನ ಕುಮಾರನು ಶಕ್ತನಲ್ಲ ಆದಕಾರಣ ನನ್ನಲ್ಲಿ ಕೃಪೆಮಾಡಿ ಮಗನನ್ನು ರಕ್ಷಿಸಬೇಕು ಅಲ್ಪಭಾಗ್ಯನಾದವನಿಗೆ ಭಾಗ್ಯವು ಬಂದ ರೀತಿಯಲ್ಲಿ ನೀವು ಗುರುವಾಗಿ ಇಷ್ಟದೇವತಾಸ್ವರೂಪವಾಗಿ ಬಂದಿರಿ ಯಕ್ಷರಾಕ್ಷಸಗಂಧರ್ವರೂ ಇಂದ್ರಾದಿದೇವತೆಗಳೂ ರಾವಣನ ಕೂಡ ಯುದ್ಧವನ್ನು ಮಾಡುವುದಕ್ಕೆ ಸಮರ್ಥರಲ್ಲ ಸಾಕ್ಷಾತ್ ಸೂರ್ಯನ ಕುಮಾರನಾಗಿ ದಕ್ಷಿಣ ದಿಕ್ಕಿಗೆ ಒಡೆಯನಾದ ಯಮನನ್ನೂ ಗೆದ್ದ ರಾವಣನ ಭಟರ ಮುಂದೆ ಬಾಲಕನಾದ ರಾಮನನ್ನು ಹೇಗೆ ಕರೆಯುತ್ತೀರಿ ? ಯುದ್ಧದಲ್ಲಿ ಅತಿಪರಾಕ್ರಮಿಗಳಾದ ರಾಕ್ಷಸಬಲಗಳೊಡನೆ ನಾನು ನನ್ನ ಮಕ್ಕಳನ್ನು ಕೂಡಿಕೊಂಡಾದರೂ ಯುದ್ಧ ಮಾಡುವುದಕ್ಕೆ ಶಕ್ತನಲ್ಲ, ಹೀಗಿರುವಲ್ಲಿ ಯುದ್ಧಕ್ರಮವನ್ನರಿಯದ ಬಾಲಕನಾದ ರಘುನಾಥನನ್ನು ಹೇಗೆ ಕರೆಯುತ್ತಿದ್ದೀರಿ ಮಾರೀಚ ಸುಬಾಹು ಎಂಬ ರಾಕ್ಷಸರು ಸುಂದೋಪಸುಂದರೆಂಬ ರಾಕ್ಷಸರ ಮಕ್ಕಳು.ಸಾಕ್ಷಾತ್ ಕಾಲಯಮನಿಗೆ ಸಮಾನರಾದವರು. ಯಜ್ಞವಿಘ್ನವನ್ನು ಮಾಡುವಂಥವರು ಆ ರಾಕ್ಷಸರ ಕೂಡ ಯುದ್ಧಕ್ಕೆ ನನ್ನ ಮಗನಾದ ರಘುನಾಥನನ್ನು ಕಳುಹಿಸಲಾರೆನು ಸುಹೃದ್ದಲಸಹಿತನಾಗಿಯೂ ನಾನು ಅವರಿಬ್ಬರೊಳಗೆ ಒಬ್ಬರೊಡನೆ ಕೂಡ ಯುದ್ಧ ಮಾಡುವುದಕ್ಕೆ ಶಕ್ತನಲ್ಲ ಎಂದು ನುಡಿದನು.

ಮುಂದುವರಿಯುವುದು...

# ಸಣ್ಣ ಮೊತ್ತ ಹೂಡಿಕೆ ಮಾಡಲು ಬಯಸುವವರಿಗೆ ಈ ಯೋಜನೆ ಉತ್ತಮ

## 'ಪೋಸ್ಟ್ ಆಫೀಸ್' ಈ ಯೋಜನೆಯಡಿ 300 ರೂ. ಹೂಡಿಕೆ ಮಾಡಿ, 17 ಲಕ್ಷ ರೂ. ಆದಾಯ ಗಳಿಸಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ನಿಮಗೆಲ್ಲರಿಗೂ ತಿಳಿದಿರುವಂತೆ ಅಂಚೆ ಕಚೇರಿ ವಿಶ್ವಾಸಾರ್ಯ ಯೋಜನೆ ನೀಡುವ ಮೂಲಕ ಗ್ರಾ ಹಕರ ನಂಬಿಕೆಯಿಂದ ಉಳಿಸಿಕೊಂಡಿದೆ. ಇದು ಸುರಕ್ಷಿತ ಮಾತ್ರವಲ್ಲದೆ ವಿಶ್ವಾಸಾರ್ಹವಾಗಿದೆ. ಈ ಯೋಜನೆಯಡಿ, ಹೂಡಿಕೆ ನಿಮ್ಮ ಹಣವನ್ನು ಸುರಕ್ಷಿತವಾಗಿರಿಸುವುದಲ್ಲದೆ ಅತ್ಯುತ್ತಮ ಆದಾಯವನ್ನು ನೀಡುತ್ತದೆ.

ಅಷ್ಟೇ ಅಲ್ಲ, ಈ ಅದ್ಭುತ ಪೋಸ್ಟ್ ಆಫೀಸ್ ಯೋಜನೆಗಳಲ್ಲಿ ನೀವು ತಿಂಗಳಿಗೆ ಕೇವಲ 300 ರೂ.ಗಳನ್ನು ಹೂಡಿಕೆ ಮಾ ಡಿದರೆ, ನೀವು 17 ಲಕ್ಷ ರೂ.ಗಳ ಖಾತರಿಯ ಆದಾ ಯವನ್ನು ನಿರೀಕ್ಷಿಸಬಹುದು. ನಿಮ್ಮ ಮಾಹಿತಿಗಾಗಿ, ಪ್ರಸ್ತುತ ಅಂಚೆ ಕಚೇರಿ ವಿವಿಧ ಪ್ರಯೋಜನಕಾರಿ ಯೋಜನೆಗಳನ್ನು ಜಾರಿಗೆ ತರುತ್ತಿದೆ, ಅವುಗಳಲ್ಲಿ ಕೆಲ ವು ಇಂತಿವೆ ಸಾರ್ವಜನಿಕ ಭವಿಷ್ಯ ನಿಧಿ (ಪಿಪಿಎಫ್), ಸುಕನ್ಯಾ ಸಮೃದ್ಧಿ ಯೋಜನೆ (ಎಸ್‌ಎಸ್ವೈ),ೄ ರಾಷ್ಟ್ರೀಯ ಉಳಿತಾಯ ಪ್ರಮಾಣಪತ್ರ (ಎನ್‌ಎಸ್ಸಿ). ಈ ಯೋಜನೆಗಳ ಅಡಿಯಲ್ಲಿ, ನೀವು ಸುರಕ್ಷಿತ ಹೂಡಿಕೆಗಳನ್ನು ಮಾಡಬಹುದು. ಆದಾಗ್ಯೂ, ಶುಕ್ರವಾರ ನಾವು ಪೋ ಸ್ಟ್ ಆಫೀಸ್‌ನ ಅತ್ಯುತ್ತಮ ಯೋಜನೆಯಾದ ರಿಕ ರಿಂಗ್ ಡಿಪಾಸಿಟ್ (ಆರ್ಡಿ) ಯೋಜನೆಯ ಬಗ್ಗೆ ಚರ್ಚಿಸುತ್ತಿದ್ದೇವೆ.

**ಗಮನಾರ್ಹ ಮೊತ್ತವನ್ನು ಸಂಗ್ರಹಿಸಲು ಸಹಾಯ**

ಪೋಸ್ಟ್ ಆಫೀಸ್ ರಿಕರಿಂಗ್ ಡಿಪಾಸಿಟ್ ಯೋಜನೆ ಒಂದು ಅದ್ಭುತ ಯೋಜನೆಯಾಗಿದ್ದು, ಇದರ ಅಡಿಯಲ್ಲಿ ನೀವು ಪ್ರತಿ ತಿಂಗಳು ನಿಗದಿತ ಮೊತ್ತವನ್ನು ಹೂಡಿಕೆ ಮಾಡುತ್ತೀರಿ ಮತ್ತು ಮುಕ್ತಾಯದ ನಂತರ, ನೀವು ಗಣನೀಯ ಮೊತ್ತವನ್ನು ಪಡೆಯುತ್ತೀರಿ. ನಿಯಮಿತವಾಗಿ ಸಣ್ಣ ಮೊತ್ತವನ್ನು ಹೂಡಿಕೆ ಮಾಡಲು ಬಯಸುವವರಿಗೆ ಈ ಯೋಜನೆ ಉತ್ತಮ ಆಯ್ಕೆಯಾಗಿದೆ. ಆಫೀಸ್ ರಿಕರಿಂಗ್ ಡಿಪಾಸಿಟ್ (ಆರ್ಡಿ) ಯೋಜನೆಯ ಅವಧಿ 5 ವರ್ಷಗಳು. ಪ್ರಸ್ತುತ, ಈ ಯೋಜನೆಯು 5.8% ವರೆಗೆ ವಾರ್ಷಿಕ ಬಡ್ಡಿದರವನ್ನು ನೀಡುತ್ತದೆ, ಮತ್ತು ನೀವು ತಿಂಗಳಿಗೆ ಕೇವಲ 100 ರೂ.ಗ ಳೊಂದಿಗೆ ಹೂಡಿಕೆ ಮಾಡಲು ಪ್ರಾರಂಭಿಸಬಹುದು. ಮುಕ್ತಾಯದ ನಂತರ, ನೀವು ಉತ್ತಮ ಆದಾಯವನ್ನು ನಿರೀಕ್ಷಿಸಬಹುದು. ಹೆಚ್ಚುವರಿಯಾಗಿ, ಈ ಯೋಜನೆಯು ಸರ್ಕಾರದಿಂದ ನಿರ್ವಹಿಸಲ್ಪಡುತ್ತದೆ, ಆದ್ದರಿಂದ ಇದರಲ್ಲಿ ಯಾವುದೇ ಅಪಾಯವಿಲ್ಲ. ಪ್ರತಿ ತಿಂಗಳು 300 ಹೂಡಿಕೆ ಮಾಡುವ ಮೂಲಕ, ನೀವು 17 ಲಕ್ಷ ಆದಾಯವನ್ನು ಸಾಧಿಸಬಹುದು. ದೀರ್ಘಾವಧಿಯ ಹೂಡಿಕೆಯು ನಿಮಗೆ ಗಮನಾರ್ಹ ಮೊತ್ತವನ್ನು ಸಂಗ್ರಹಿಸಲು ಸಹಾಯ ಮಾಡುತ್ತದೆ, ಮತ್ತು ನೀವು ಚಕ್ರ ಬಡ್ಡಿದರಗಳಿಂದ ಪ್ರಯೋಜನ ಪಡೆಯುತ್ತೀರಿ.

**ನೀವು ಪೋಸ್ಟ್ ಆಫೀಸ್ ಯೋಜನೆಯಡಿ ಹೂಡಿಕೆ ಮಾಡಲು ಬಯಸಿದರೆ, ಮೊದಲು ನೀವು ನಿಮ್ಮ ಹತ್ತಿರದ ಅಂಚೆ ಕಚೇರಿಗೆ ಹೋಗಿ ಖಾತೆಯನ್ನು ತೆರೆಯಬೇಕು. ಇದಕ್ಕಾಗಿ, ಆಧಾರ್ ಕಾರ್ಡ್, ಪ್ಯಾನ್ ಕಾರ್ಡ್ ಮತ್ತು ವಾಸಸ್ಥಳದ ಪುರಾವೆಗಳಂತಹ ಅಗತ್ಯ ದಾಖಲೆಗಳನ್ನು ಸಲ್ಲಿಸಿ. ಈಗ ನೀವು ಮಾಸಿಕ 300 ಮೊತ್ತದೊಂದಿಗೆ ಹೂಡಿಕೆ ಮಾಡಲು ಪ್ರಾರಂಭಿಸಬಹುದು.**

ಇದು ಅಂಚೆ ಇಲಾಖೆಯ ಮೂಲಕ ಭಾರತ ಸರ್ಕಾರ ನಿರ್ವಹಿಸುವ ಸುರಕ್ಷಿತ ಹೂಡಿಕೆ ಯೋಜನೆಯಾಗಿದೆ. ಹೂಡಿಕೆ ಪ್ರಕ್ರಿಯೆಯು ತುಂಬಾ ಸುಲಭ ಮತ್ತು ನೇರವಾಗಿದೆ, ಮತ್ತು ಕೆಲವು ಅಂಚೆ ಯೋಜನೆಗಳು ಗಮನಾರ್ಹ ತೆರಿಗೆ ಪ್ರಯೋಜನಗಳನ್ನು ಸಹ ನೀಡುತ್ತವೆ.

**ವಾರ್ಷಿಕ ಹೂಡಿಕೆ:** 300 × 12 = 3600

**ಒಟ್ಟು ಹೂಡಿಕೆ:** 3600 × 35 = 1,26,000

**ಅಂದಾಜು ಬಡ್ಡಿದರ:** ವರ್ಷಕ್ಕೆ 12% (ವಾರ್ಷಿಕವಾಗಿ ಸಂಯೋಜಿಸಲಾಗುತ್ತ ದೆ) ಆದ್ದರಿಂದ, ನೀವು ಮಾಸಿಕ ಮೊತ್ತ 300 ನೊಂದಿಗೆ 35 ವರ್ಷಗಳವರೆಗೆ ನಿಮ್ಮ ಹೂಡಿಕೆಯನ್ನು ಮುಂದುವರಿಸಿದರೆ, ನೀವು ಸರಿಸುಮಾರು 1.7 ಮಿಲಿಯನ್ ಆದಾಯವನ್ನು ಪಡೆಯುತ್ತೀರಿ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ಮಕ್ಕಳು ನಿಮಗೆ ಸಂತಸದ ಸುದ್ದಿ ತರಬಹುದು ನಿಮ್ಮ ಪ್ರೇಮಿಯಿಂದ ದೂರವುಳಿಯಲು ತುಂಬಾ ಕಷ್ಟವಾಗುತ್ತದೆ. ಇವತ್ತು ನಿಮಗೆ ಹೇಗೆ ನಿಸುತ್ತಿದೆಯೆಂದು ಇತರರಿಗೆ ತಿಳಿಸುವ ಉತ್ಸಾಹವನ್ನು ನಿಯಂತ್ರಿಸಿ.

**ವೃಷಭ** ಸೃಜನಶೀಲ ಆಸಕ್ತಿಗಳು ನಿಮ್ಮನ್ನು ಶಾಂತವಾಗಿರಿಸುತ್ತವೆ. ಭೂಮಿಯನ್ನು ಖರೀದಿಸಿದ ಮತ್ತು ಈಗ ಅದನ್ನು ಮಾರಾಟ ಮಾಡಲು ಬಯಸುವ ಜನರು ಇಂದು ಉತ್ತಮ ಖರೀದಿದಾರರನ್ನು ಕಾಣಬಹುದು.

**ಮಿಥುನ** ಹಾಸಿಗೆಯಿಂದ ಎದ್ದನಂತರ ನಿಮ್ಮ ಅಮೂಲ್ಯ ಸಮಯವನ್ನು ನೀವು ವ್ಯರ್ಥ ಮಾಡಿದ್ದೀರಿ ಎಂದು ನಿಮಗೆ ತಿಳಿಯುತ್ತದೆ. ನೀವು ನಿಮ್ಮ ಸಂಗಾತಿಯ ಜೊತೆಗೆ ನಿಮ್ಮ ಜೀವನದ ಅತ್ಯುತ್ತಮ ಸಂಜೆಯನ್ನು ಕಳೆಯುತ್ತೀರಿ.

**ಕರ್ಕಾಟಕ** ಇಂದು ನೀವು ಪ್ರಮುಖ ನಿರ್ಧಾರ ಕೈಗೊಳ್ಳಬೇಕು. ಇದು ನಿಮ್ಮನ್ನು ಒತ್ತಡ ಹಾಗೂ ಉದ್ವೇಗಕ್ಕೆ ಒಳಪಡಿಸುತ್ತದೆ. ಇಂದು ನೀವು ಯಾವುದೋ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು.

**ಸಿಂಹ** ನೀವು ಸ್ನೇಹಿತರ ಮೂಲಕ ಪ್ರಮುಖ ಸಂಪರ್ಕಗಳನ್ನು ಹೊಂದುತ್ತೀರಿ. ನಿಮ್ಮ ಪ್ರೀತಿಯ ಸಂಗಾತಿ ಇಂದು ಏನಾದರೂ ಸುಂದರವಾದದ್ದನ್ನು ಮಾಡಿ ನಿಮಗೆ ಆಶ್ಚರ್ಯವನ್ನುಂಟು ಮಾಡುತ್ತಾರೆ.

**ಕನ್ಯಾ** ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ.

**ತುಲಾ** ಗರ್ಭಿಣಿಯರಿಗೆ ವಿಶೇಷ ಕಾಳಜಿಯ ದಿನ. ನೀವು ಜೀವನದಲ್ಲಿ ಹಣದ ಪ್ರಾಮುಖ್ಯತೆಯನ್ನು ಅರ್ಥಮಾಡಿಕೊಳ್ಳುವುದಿಲ್ಲ ಆದರೆ ಇಂದು ನೀವು ಹಣದ ಮೌಲ್ಯವನ್ನು ಅರ್ಥಮಾಡಿಕೊಳ್ಳಬಹುದು.

**ವೃಶ್ಚಿಕ** ಇಂದು, ನಿಮ್ಮ ಜೀವನ ಸಂಗಾತಿ ಸಕ್ಕರೆಗಿಂತ ಸಿಹಿಯಾಗಿದ್ದಾರೆಂದು ನಿಮಗೆ ಅರಿವಾಗುತ್ತದೆ. ಸಂಬಂಧಗಳನ್ನು ಮೀರಿ ನಿಮ್ಮದೇ ಒಂದು ಪ್ರಪಂಚವಿದೆ ಮತ್ತು ಆ ಜಗತ್ತಿನಲ್ಲಿ ಇಂದು ನೀವು ನಾಕ್ ಮಾಡಬಹುದು.

**ಧನಸ್ಸು** ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು. ನೀವು ಪ್ರೀತಿಸುವವರಿಂದ ಉಡುಗೊರೆಗಳನ್ನು ಪಡೆಯಲು ಹಾಗೂ ನೀಡಲು ಪವಿತ್ರವಾದ ದಿನ. ನೀವು ಪ್ರೀತಿಯ ನೋವನ್ನು ಅನುಭವಿಸಬಹುದು.

**ಮಕರ** ರಿಯಲ್ ಎಸ್ಟೇಟ್ ಮತ್ತು ಆರ್ಥಿಕ ವ್ಯವಹಾರಗಳಿಗೆ ಒಳ್ಳೆಯ ದಿನ. ಸ್ನೇಹಿತರು ಒಂದು ಅದ್ಭುತ ಸಂಜೆಗಾಗಿ ಬರುತ್ತಾರೆ. ನ್ಯಾಯಯುತವಾದ ಮತ್ತು ಉದಾರ ಪ್ರೀತಿಯಿಂದ ಪುರಸ್ಕೃತಗೊಳ್ಳುವ ಸಾಧ್ಯತೆಯಿದೆ.

**ಕುಂಭ** ನಿಮ್ಮ ವಿಚ್ಛಿದ್ರಕಾರಕ ಭಾವಗಳು ಮತ್ತು ಉದ್ವೇಗಗಳನ್ನು ಹತೋಟಿಯಲ್ಲಿರಿಸಿಕೊಳ್ಳಿ. ನಿಮ್ಮ ಸಾಂಪ್ರದಾಯಿಕ ಚಿಂತನೆ / ಹಳೆಯ ವಿಚಾರಗಳು ನಿಮ್ಮ ಪ್ರಗತಿಯನ್ನು ಕುಂಠಿತಗೊಳಿಸಬಹುದು.

**ಮೀನ** ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ.

# ಮರವಂತೆ ಮಾರಸ್ವಾಮಿ ಸ್ಟಾಪ್‌ನಲ್ಲಿ ನಿಲ್ಲದ ಸರಕಾರಿ ಬಸ್

## ● ಈ ಮಾರ್ಗದ ಬಸ್‌ಗಳಲ್ಲಿ ಪ್ರಯಾಣಿಕರು ಹಾಗೂ ನಿರ್ವಾಹಕರ ನಡುವೆ ಈಗ ವಾಗ್ವಾದ ಖಾಯಂ

• ಉದಯವಾಹಿನಿ, ಕುಂದಾಪುರ

ವಿಶ್ವಪ್ರಸಿದ್ಧ ಮರವಂತೆ ಬೀಚ್, ಶ್ರೀ ವರಾಹ ಮಹಾರಾಜ ಸ್ವಾಮಿ ದೇವಸ್ಥಾನ ಹಾಗೂ ಸೌಪರ್ಣಿಕ ನದಿ ಎಲ್ಲವೂ ಒಂದೇ ಕಡೆ ಇರುವಂತಹ ಸುಂದರ ತಾಣವಾದ ಮರವಂತೆಯ ಮಾರಸ್ವಾಮಿ ನಿಲ್ದಾಣದಲ್ಲಿ ಕೆಲವು ಕೆಎಸ್‌ಆರ್‌ಟಿಸಿ ಬಸ್‌ಗಳು ನಿಲ್ಲದೇ ಇರುವುದರಿಂದ ನೂರಾರು ಪ್ರಯಾಣಿಕರಿಗೆ ತೊಂದರೆಯಾಗುತ್ತಿದೆ.

ಅದರಲ್ಲೂ ಪ್ರಮುಖವಾಗಿ ಕುಂದಾಪುರ ಭಟ್ಕಳ ನಡುವೆ ಸಂಚರಿಸುವ ಬಹುತೇಕ ಕೆಎಸ್‌ಆರ್‌ಟಿಸಿ ಬಸ್‌ಗಳು ಇಲ್ಲಿ ನಿಲ್ಲುತ್ತಿಲ್ಲ.

ಇಲ್ಲಿ ಕುಂದಾಪುರ ಭಟ್ಕಳ ನಡುವೆ ಸಂಚರಿಸುವ ಬಸ್‌ಗಳನ್ನು ನಿಲ್ಲಿಸಬೇಕು ಎನ್ನುವ ಕೆಎಸ್‌ಆರ್‌ಟಿಸಿ ಆದೇಶವಿದ್ದರೂ, ಕೆಲವು ನಿರ್ವಾಹಕರು, ಚಾಲಕರು ಬಸ್‌ಗಳನ್ನು ನಿಲ್ಲಿಸದೇ ಉದ್ಧಟತನದ ವರ್ತನೆ ತೋರುತ್ತಿರುವುದಾಗಿ ಈ ಭಾಗದ ಪ್ರಯಾಣಿಕರು ಆರೋಪಿಸಿದ್ದಾರೆ. ಈ ಮಾರ್ಗದಲ್ಲಿ ಬಸ್‌ಗಳಲ್ಲಿ ಇಲ್ಲಿನ ಪ್ರಯಾಣಿಕರು ಹಾಗೂ ನಿರ್ವಾಹಕರ ನಡುವೆ ಈಗ ವಾಗ್ವಾದ ಖಾಯಂ ಎನ್ನುವಂತಾಗಿದೆ. ಮಾರಸ್ವಾಮಿ ದೇವಾಲಯಕ್ಕೆ ಬರುವವರು, ಅಲ್ಲಿಂದ ಒಳಭಾಗಕ್ಕೆ ಹೋಗುವವರಿಗೆ ಇದರಿಂದ ತೊಂದರೆಯಾಗುತ್ತಿದೆ.

**ನೂರಾರು ಪ್ರಯಾಣಿಕರಿಗೆ ತೊಂದರೆ**

ಕುಂದಾಪುರ ಅಥವಾ ಬೈಂದೂರು ಭಾಗದಿಂದ ಈ ಬಸ್‌ಗಳಲ್ಲಿ ಸಂಚರಿಸುವ ಮರವಂತೆಯ ಮಾರಸ್ವಾಮಿ ಭಾಗದ ಪ್ರಯಾಣಿಕರು ನಿತ್ಯ ನಿರ್ವಾಹಕರ ಬಳಿ ನಿಲುಗಡೆಗೆ ದುಂಬಾಲು ಬೀಳುವಂತಹ ಪರಿಸ್ಥಿತಿಯಿದ್ದು, ಅದಾಗಿಯೂ ಬಹುತೇಕರು ನಿಲ್ಲಿಸದೇ, ಬೇರೆ ಕಡೆಗಳಲ್ಲಿ ಇಳಿದು ಕಿಲೋ ಮೀಟರ್‌ಗಟ್ಟಲೆ ದೂರದಿಂದ ವಾಪಾಸು ನಡೆದುಕೊಂಡು ಬರಬೇಕಾದ ಸ್ಥಿತಿಯಿದೆ. ಇದರಿಂದ ಮುಖ್ಯವಾಗಿ ಮರವಂತೆಯ ಮಾರಸ್ವಾಮಿ ದೇವಸ್ಥಾನಕ್ಕೆ ಹೋಗುವವರಿಗೆ, ಇನ್ನು ನಾಡ, ಪಡುಕೋಣೆ, ಹಡವು, ಆಲೂರು ಭಾಗದ ಜನರಿಗೆ ಕುಂದಾಪುರ ಅಥವಾ ಬೈಂದೂರಿಗೆ ಹೋಗಲು, ವಾಪಾಸು ಬರಲು ತುಂಬಾ ತೊಂದರೆಯಾಗುತ್ತಿದೆ. ಇದರಿಂದ ಶಕ್ತಿ ಯೋಜನೆಯಡಿ ರಾಜ್ಯ ಸರಕಾರದಿಂದ ಮಹಿಳೆಯರಿಗೆ ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಉಚಿತ ಪ್ರಯಾಣದ ಅವಕಾಶವಿದ್ದರೂ, ಈ ಭಾಗದ ನೂರಾರು ಜನ ಮಹಿಳೆಯರಿಗೆ ಮಾತ್ರ ಇದರ ಪ್ರಯೋಜನ ಸಿಗದಂತಾಗಿದೆ.


ಉದಯವಾಹಿನಿ ಚಿತ್ರ

ಹಲವು ಸಮಯದ ಹೋರಾಟದ ಫಲವಾಗಿ ಹಿಂದೆ ಇಲ್ಲಿ ಕುಂದಾಪುರ-ಭಟ್ಕಳ ಕೆಎಸ್‌ಆರ್‌ಟಿಸಿ ಬಸ್‌ಗಳನ್ನು ನಿಲ್ಲಿಸಲು ಆದೇಶ ಹೊರಡಿಸಲಾಗಿತ್ತು. ಈಗ ಮತ್ತೆ ಕೆಲವು ಕೆಎಸ್‌ಆರ್‌ಟಿಸಿ ಬಸ್‌ಗಳನ್ನು ನಿಲ್ಲಿಸಲು ನಿರ್ವಾಹಕರು ಒಪ್ಪುತ್ತಿಲ್ಲ. ಕೇಳಿದರೆ ನಮ್ಮೊಂದಿಗೆ ರಗಳೆ ಮಾಡುತ್ತಾರೆ. ಕೆಎಸ್‌ಆರ್‌ಟಿಸಿ ಅಧಿಕಾರಿಗಳ ಗಮನಕ್ಕೂ ತರಲಾಗಿದೆ. ಹೀಗೆ ಮುಂದುವರಿದರೆ ಮತ್ತೆ ಹೋರಾಟ ಮಾಡಲಾಗುವುದು
-ಶೀಲಾವತಿ ಪಡುಕೋಣೆ, ಜಿಲ್ಲಾ ಪ್ರ. ಕಾರ್ಯದರ್ಶಿ,

**ನಿಲುಗಡೆ ಕೇಳಿದರೆ ದುರ್ವರ್ತನೆ**

ಕುಂದಾಪುರದಲ್ಲಿ ನಾನು ಕುಂದಾಪುರ- ಭಟ್ಕಳ ಬಸ್ ಹತ್ತಿ, ಇಲ್ಲಿ ನಿಲುಗಡೆ ಕೇಳಿದರೆ ಕೊಡಲು ಆಗುವುದಿಲ್ಲ ಅಂತ ದುರ್ವರ್ತನೆ ತೋರುತ್ತಾರೆ. ಅವರಿಗೆ ಇಲ್ಲಿ ನಿಲುಗಡೆಗೆ ಆದೇಶವಿದೆ ಅಂದರೂ ನೀವು ಯಾರ ಬಳಿ ಬೇಕಾದರೂ ಹೇಳಿಕೊಳ್ಳಿ, ನಾವು ಇಲ್ಲಿ ಬಸ್‌ಗಳನ್ನು ನಿಲ್ಲಿಸುವುದಿಲ್ಲ ಎನ್ನುವುದಾಗಿ ಉದ್ಧಟತನದ ಮಾತುಗಳನ್ನು ಪ್ರಯಾಣಿಕರ ಬಳಿ ಮಾತನಾಡುತ್ತಾರೆ. ಕೆಎಸ್‌ಆರ್‌ಟಿಸಿ ಬಸ್‌ಗಳು ಇರುವುದು ಜನ ಪ್ರಯೋಜನಕ್ಕಾಗಿಯೋ? ಅಥವಾ ನಿರ್ವಾಹಕರ ಅನುಕೂಲಕ್ಕಾಗಿಯೋ? ಅನ್ನುವುದಾಗಿ ಪಡುಕೋಣೆಯ ನಿವಾಸಿ ಸುಬ್ರಹ್ಮಣ್ಯ ಆಚಾರ್ ಪ್ರಶ್ನಿಸಿದ್ದಾರೆ.

ಮಾರಸ್ವಾಮಿ ಬಳಿ ನಿಲುಗಡೆ ಕೊಡದಿರುವ ಬಗ್ಗೆ ನನ್ನ ಗಮನಕ್ಕೆ ಬಂದಿದ್ದು, ಈ ವಿಷಯ ತಿಳಿದ ಕೂಡಲೇ ನಾನು ಎಲ್ಲರಿಗೂ ಕಡ್ಡಾಯವಾಗಿ ಅಲ್ಲಿ ಬಸ್ ನಿಲ್ಲಿಸಲು ಸೂಚನೆ ನೀಡಿದ್ದೇನೆ. ಇನ್ನೂ ಈ ಬಗ್ಗೆ ಒಂದಿನ ಅಲ್ಲಿಗೆ ನಮ್ಮ ಸಿಬಂದಿ ನಿಯೋಜಿಸಿ, ನಿಗಾ ವಹಿಸಲಾಗುವುದು. ಅಲ್ಲಿ ಹೆಚ್ಚಿನ ಜಾಗ ಇಲ್ಲದಿರುವುದರಿಂದ ಬಸ್ ನಿಲ್ಲಿಸಿದರೆ, ಹಿಂದಿನಿಂದ ಬೇರೆ ವಾಹನ ಬಂದು ಢಿಕ್ಕಿಯಾದ ನಿದರ್ಶನವೂ ಇದೆ. ಅಲ್ಲಿ ಸ್ವಲ್ಪ ಜಾಗ ವಿಸ್ತರಣೆ ಮಾಡಿದರೆ ಅನುಕೂಲವಾಗಲಿದೆ
-ಉದಯ ಕುಮಾರ್ ಶೆಟ್ಟಿ, ಕುಂದಾಪುರ ಕೆಎಸ್‌ಆರ್‌ಟಿಸಿ, ಡಿಪೋ ಮ್ಯಾನೇಜರ್

## ಜಿಲ್ಲೆಯಾದ್ಯಂತ 80 ಮನೆಗಳು ಭಾಗಶಃ ಹಾನಿ: 11.3 ಮಿ.ಮೀ ಮಳೆ

• ಉದಯವಾಹಿನಿ, ಚಿತ್ರದುರ್ಗ

ರಾತ್ರಿ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಸರಾಸರಿ 11.3 ಮಿ.ಮೀ ಮಳೆಯಾಗಿದೆ.

ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 15 ಮಿ.ಮೀ, ಚಿತ್ರದುರ್ಗ ತಾಲ್ಲೂಕಿನಲ್ಲಿ 6.8 ಹಿರಿಯೂರು ತಾಲ್ಲೂಕು 14.2 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 13 ಮಿ.ಮೀ, ಹೊಸದುರ್ಗ ತಾಲ್ಲೂಕಿನಲ್ಲಿ 6.8 ಮಿ.ಮೀ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 9.6 ಮಿ.ಮೀ ಮಳೆಯಾಗಿದೆ.

**ಹೋಬಳಿವಾರು ಮಳೆ ವಿವರ:** ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 10.9 ಮಿ.ಮೀ, ನಾಯಕನಹಟ್ಟಿ 24.1 ಮಿ.ಮೀ, ಪರಶುರಾಂಪುರ 15.4 ಮಿ.ಮೀ, ತಳಕು 11.4 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 5.2 ಮಿ.ಮೀ, ಭರಮಸಾಗರ 10.1 ಮಿ.ಮೀ, ಹಿರೇಗುಂಟನೂರು 10.8 ಮಿ.ಮೀ, ತುರುವನೂರು 3.2 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರು 23 ಮಿ.ಮೀ, ಐಮಂಗಲ 20.7 ಮಿ.ಮೀ, ಧರ್ಮಪುರ 9.3 ಮಿ.ಮೀ, ಜವನಗೊಂಡನಹಳ್ಳಿ 5.5 ಮಿ.ಮೀ ಮಳೆಯಾಗಿದೆ.

ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 22.2 ಮಿ.ಮೀ, ಬಿ.ದುರ್ಗ 9 ಮಿ.ಮೀ, ರಾಮಗಿರಿ 22 ಮಿ.ಮೀ, ತಾಳ್ಯ 2.5 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 20.3 ಮಿ.ಮೀ, ಮಾಡದಕೆರೆ 2 ಮಿ.ಮೀ, ಮತ್ತೋಡು 0.3 ಮಿ.ಮೀ, ಶ್ರೀರಾಂಪುರ 1 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ಮೊಳಕಾಲ್ಮೂರಿನಲ್ಲಿ 8.5 ಮಿ.ಮೀ ಹಾಗೂ ದೇವಸಮುದ್ರದಲ್ಲಿ 10.9 ಮಿ.ಮೀ ಮಳೆಯಾಗಿದೆ.

**80 ಮನೆಗಳು ಭಾಗಶಃ ಹಾನಿ:** ರಾತ್ರಿ ಸುರಿದ ಮಳೆಗೆ ಜಿಲ್ಲೆಯಾದ್ಯಂತ 80 ಮನೆಗಳು ಭಾಗಶಃ ಹಾನಿಯಾಗಿದ್ದು, 3 ಮನೆಗಳಿಗೆ ನೀರು ನುಗ್ಗಿರುವ ಪ್ರಕರಣ ವರದಿಯಾಗಿದೆ.

ಚಿತ್ರದುರ್ಗ ತಾಲ್ಲೂಕಿನಲ್ಲಿ 24 ಮನೆಗಳು ಭಾಗಶಃ ಹಾನಿ, ಚಳ್ಳಕೆರೆ 15 ಮನೆಗಳು, ಹೊಳಲ್ಕೆರೆ 14 ಮನೆಗಳು, ಹೊಸದುರ್ಗ 5 ಮನೆಗಳು ಭಾಗಶಃ ಹಾನಿ ಹಾಗೂ 3 ಮನೆಗಳಿಗೆ ನೀರು ನುಗ್ಗಿವೆ. ಹಿರಿಯೂರು ತಾಲ್ಲೂಕಿನಲ್ಲಿ 17 ಮನೆಗಳು ಭಾಗಶಃ ಹಾನಿ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 5 ಮನೆಗಳು ಭಾಗಶಃ ಹಾನಿಯಾಗಿವೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

## ಮಠದ ಆವರಣದಲ್ಲಿ ಕರಡಿ ಪ್ರತ್ಯಕ್ಷ: ಸ್ಥಳೀಯರಲ್ಲಿ ಆತಂಕ

• ಉದಯವಾಹಿನಿ, ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯ ಹೊಸದುರ್ಗದ ಕುಂಚಿಟಿಗ ಮಠದ ಆವರಣದ ಬಳಿ ಕರಡಿ ಪ್ರತ್ಯೇಕ್ಷಗೊಂಡಿದ್ದು, ಸ್ಥಳೀಯರು ಆತಂಕಗೊಂಡಿದ್ದಾರೆ. ಗುರುವಾರ ರಾತ್ರಿ 8 ಗಂಟೆ ವೇಳೆಗೆ ಕರಡಿ ಪ್ರತ್ಯಕ್ಷವಾಗಿದೆ. ಕಳೆದ ಹಲವು ದಿನಗಳಿಂದ ಈ ಪ್ರದೇಶದಲ್ಲಿ ಕರಡಿ ಓಡಾಡುತ್ತಿದೆ ಎನ್ನಲಾಗಿದ್ದು, ಅರಣ್ಯ ಇಲಾಖೆಯವರು ಬೋನ್ ಇಟ್ಟಿದ್ದಾರೆ.



ಆದರೆ ಬೋನ್‌ಗಳಿಗೆ ಬೀಳದೆ ಕರಡಿ ತಪ್ಪಿಸಿಕೊಳ್ಳುತ್ತಿದೆ. ಇದರಿಂದ ಮಠಕ್ಕೆ ಬರುವವರು ಹಾಗೂ ಸ್ಥಳೀಯರು ನಿದ್ದೆಗೆಡುವಂತಾಗಿದೆ.

ಇದೀಗ ಮಠದ ಆವರಣದ ಬಳಿ ಕರಡಿ ಓಡಾಟ ನಡೆಸಿರುವ ದೃಶ್ಯಗಳನ್ನು ಸ್ಥಳೀಯರು ತಮ್ಮ ಮೊಬೈಲಿನಲ್ಲಿ ಸೆರೆಹಿಡಿದಿದ್ದಾರೆ. ಮಠಕ್ಕೆ ಹೋಗುವ ರಸ್ತೆಯಲ್ಲಿ ಕರಡಿ ನಡೆದು ಬಂದಿದ್ದು, ಆ ಪ್ರದೇಶದಲ್ಲಿ ಓಡಾಡುತ್ತಿದ್ದ ಜನರು ಗಾಬರಿಗೊಂಡು ಓಡಿ ಹೋಗಿದ್ದಾರೆ.

ಇದೀಗ ಕರಡಿ ಪ್ರತ್ಯಕ್ಷವಾಗಿರುವುದಕ್ಕೆ ಸಂಬಂಧಪಟ್ಟಂತೆ ಮಾತನಾಡಿರುವ ಮಠದ ಸ್ವಾಮೀಜಿ ಶಾಂತವೀರ ಶ್ರೀಗಳು, ಮಠದಲ್ಲಿ ಪದೇ ಪದೇ ಕರಿಡಿಗಳು ಪ್ರತ್ಯಕ್ಷ ಆಗುತ್ತಿವೆ. ಸಂಬಂಧಪಟ್ಟ ಅರಣ್ಯ ಇಲಾಖೆ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಪ್ರಯೋಜನವಾಗಿಲ್ಲ. ಅಧಿಕಾರಿಗಳು ಕರಡಿ ಹಿಡಿಯುವಲ್ಲಿ ನಿರ್ಲಕ್ಷ್ಯ ತೋರುತ್ತಿದ್ದಾರೆ. ಕರಡಿಗಳು ಸಾರ್ವಜನಿಕರ ಮೇಲೆ ದಾಳಿ ನಡೆಸಿದರೆ ಹೊಣೆ ಯಾರು ಎಂದು ಪ್ರಶ್ನೆ ಮಾಡಿದ್ದಾರೆ.

## ಹೆದ್ದಾರಿಯಲ್ಲಿ ವಿರುದ್ಧ ದಿಕ್ಕಿನಿಂದ ಸಂಚಾರ

• ಉದಯವಾಹಿನಿ, ಮಹಾನಗರ

ಹೆದ್ದಾರಿಗಳಲ್ಲಿ ವಿರುದ್ಧ ದಿಕ್ಕಿನಲ್ಲಿ ವಾಹನಗಳನ್ನು ಚಲಾಯಿಸುವ ಪರಿಪಾಠ ಹೆಚ್ಚಿನ ಕಡೆಗಳಲ್ಲಿ ಕಂಡು ಬರುತ್ತಿದ್ದು, ಅಡ್ಯಾರ್, ಕಣ್ಣೂರು ಭಾಗದಲ್ಲಿಯೂ ಇದು ಸಾಮಾನ್ಯವಾಗಿದೆ. ಹಗಲು ಮಾತ್ರವಲ್ಲದೆ ರಾತ್ರಿ ವೇಳೆಯಲ್ಲೂ ರಾಂಗ್ ಸೈಡ್‌ನಲ್ಲಿ ವಾಹನ ಚಲಾಯಿಸಿ ಅಪಘಾತಗಳಿಗೆ ಕಾರಣವಾಗುತ್ತಿವೆ.

ಒಳ ರಸ್ತೆಗಳಿಂದ ಬರುವ ವಾಹನಗಳು ನಿಗದಿತ ಸ್ಥಳಗಳಿಗೆ ತಲುಪಲು ವಿರುದ್ಧ ದಿಕ್ಕಿನಲ್ಲಿಯೇ ಸಂಚರಿಸುತ್ತವೆ. ಕಣ್ಣೂರು ಹಳೆ ಚೆಕ್‌ಪೋಸ್ಟ್ ಬಿಟ್ಟರೆ ಅಡ್ಯಾರ್‌ಕಟ್ಟೆ, ಅಲ್ಲಿಂದ ಮುಂದಕ್ಕೆ ಸಹ್ಯಾದ್ರಿ ಕಾಲೇಜು ಹೀಗೆ ಹೆದ್ದಾರಿಯಲ್ಲಿ ಡಿವೈಡರ್‌ಗಳು ಸಾಕಷ್ಟು ಅಂತರದಲ್ಲಿ ಇವೆ. ಆದ್ದರಿಂದ ವಾಹನ ಸವಾರರು ಡಿವೈಡರ್‌ಗಳನ್ನು ಬಳಸಿ ಸಾಗುವ ಬದಲು ವಿರುದ್ಧ ದಿಕ್ಕಿನಲ್ಲಿಯೇ ಸಂಚರಿಸುತ್ತಾರೆ. ದ್ವಿಚಕ್ರ ವಾಹನಗಳು, ಆಟೋಗಳು, ಕಾರು ಹೀಗೆ ಬಹುತೇಕ ಲಘು ವಾಹನಗಳನ್ನು ವಿರುದ್ಧ ದಿಕ್ಕಿನಲ್ಲಿ ಸಾಗುತ್ತವೆ. ದ್ವಿಚಕ್ರ ವಾಹನಗಳಂತೂ ವಿರುದ್ಧ ದಿಕ್ಕಿನಲ್ಲಿ ಸಂಚರಿಸುವುದು ಸಾಮಾನ್ಯ ಎನ್ನುವಂತಾಗಿದೆ.


**ಅಪಘಾತಕ್ಕೆ ಆಹ್ವಾನ**
ಉದಯವಾಹಿನಿ ಚಿತ್ರ

ಕೆಲವರು ಹೆಲ್ಮೆಟ್ ಧರಿಸದೆ, ರಾತ್ರಿ ವೇಳೆಯಲ್ಲಿ ಪ್ರಖರ ಹೆಡ್‌ಲೈಟ್ ಹಾಕಿಕೊಂಡು ವಾಹನ ಚಲಾಯಿಸುತ್ತಾರೆ. ಇದರಿಂದ ಸರಿಯಾದ ಪಥದಲ್ಲಿ ಬರುವ ವಾಹನಗಳಿಗೆ ಸಮಸ್ಯೆಯಾಗುತ್ತಿದೆ.

ರಾಷ್ಟ್ರೀಯ ಹೆದ್ದಾರಿಯ ಕಣ್ಣೂರು, ಅಡ್ಯಾರ್, ಪಡೀಲ್ ಪ್ರದೇಶಗಳು ಈಗಾಗಲೇ ಅಪಘಾತ ವಲಯಗಳಾಗಿ ಮಾರ್ಪಾಡಾಗಿದೆ. ರಸ್ತೆಯಲ್ಲಿ ವಿರುದ್ಧ ದಿಕ್ಕಿನಲ್ಲಿ ಸಂಚರಿಸುವುದು ಕೂಡ ಅಪಘಾತಗಳಿಗೆ ಕಾರಣವಾಗುವ ಸಾಧ್ಯತೆಯಿದೆ. ಈ ರೀತಿ ಸಂಚಾರ ನಿಯಮ ಉಲ್ಲಂಘಿಸುವವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ವಾಹನ ಸವಾರರು, ಸ್ಥಳೀಯರು ಆಗ್ರಹಿಸಿದ್ದಾರೆ.

## ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗೆ ಅರ್ಜಿ

• ಉದಯವಾಹಿನಿ, ಚಿತ್ರದುರ್ಗ

ಚಿತ್ರದುರ್ಗ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಿಕೋದ್ಯಮ ಪದವೀಧರರಿಗೆ ಮಾಧ್ಯಮ ಕ್ಷೇತ್ರದಲ್ಲಿ ಮತ್ತು ಮಾಧ್ಯಮ ಚಟುವಟಿಕೆಗಳ ಕಾರ್ಯನಿರ್ವಹಣೆ ಕುರಿತು 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ನೀಡುವ 12 ತಿಂಗಳ ಅಪ್ರೆಂಟಿಸ್ ತರಬೇತಿಗಾಗಿ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್ ಜ್ಞಾನವಿರುವ, ಕನ್ನಡ ಭಾಷೆ ಬಳಸಲು ಪ್ರಬುದ್ಧತೆ ಇರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ 35 ವರ್ಷ ಮೀರಿರ ಬಾರದು. ಅರ್ಜಿ ಲಕೋಟೆಯ ಮೇಲೆ ಕಡ್ಡಾಯವಾಗಿ ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ನೀಡುವ ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ ಎಂದು ನಮೂದಿಸಬೇಕು. ಆಯ್ಕೆಯಾದ ಅಭ್ಯರ್ಥಿಗಳು ಸಂದರ್ಶನದ ವೇಳೆ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಸಲ್ಲಿಸುವುದು. ಆಯ್ಕೆಯಾಗಿ ತರಬೇತಿಗೆ ಹಾಜರಾಗುವ ಸಂದರ್ಭದಲ್ಲಿ ಮೂಲ ದಾಖಲಾತಿಗಳನ್ನು ಜಿಲ್ಲಾ ವಾರ್ತಾಧಿಕಾರಿಗಳಿಗೆ ಸಲ್ಲಿಸಬೇಕು.

ಅರ್ಜಿ ಸಲ್ಲಿಸಿದ ಸಂದರ್ಭದಲ್ಲಿ ಅಭ್ಯರ್ಥಿಗಳು ಪದವಿಯ ಎಲ್ಲಾ ವರ್ಷಗಳ ಅಂಕಪಟ್ಟಿಗಳು, ಸ್ನಾತಕೋತ್ತರ ಪದವಿಯ ಎಲ್ಲ ಅಂಕಪಟ್ಟಿಯೊಂದಿಗೆ ಅರ್ಜಿ ಸಲ್ಲಿಸಬೇಕು. ತರಬೇತಿಯ ಅವಧಿ ವೇಳೆ ಮಾಹೆಯಾನ 15,000/- ರೂ. ಗಳ ಸ್ಟೈಫೆಂಡ್ ನೀಡಲಾಗುವುದು.

ತರಬೇತಿಯು 2025ರ ಜನವರಿಯಿಂದ ಡಿಸೆಂಬರ್ ವರೆಗೆ 12 ತಿಂಗಳ ಅವಧಿಯದಾಗಿದ್ದು, ತಾತ್ಕಾಲಿಕವಾಗಿರುತ್ತದೆ. ತರ ಬೇತಿ ಮುಗಿದ ನಂತರ ಮುಂದುವರೆಸಲು ಅಥವಾ ಖಾಯಂಗೊಳಿಸಲು ಯಾವುದೇ ಅವಕಾಶ ಇರುವುದಿಲ್ಲ. ತರಬೇತಿಯ ಅವಧಿಯಲ್ಲಿ ತರಬೇತಾರ್ಥಿಗಳು ಬೇರೆ ಉದ್ಯೋಗ ಮಾಡುವಂತಿಲ್ಲ. ತರಬೇತಿ ಅವಧಿಯ ಮಧ್ಯದಲ್ಲಿ ಬಿಟ್ಟು ಹೋದರೆ, ಮೂಲ ದಾಖಲಾತಿಗಳನ್ನು ಅವಧಿಗೆ ಮುನ್ನ ಹಿಂದುರುಗಿಸುವುದಿಲ್ಲ. ಒಮ್ಮೆ ಫಲಾನುಭವಿಯಾದವರನ್ನು ಈ ಯೋಜನೆಯಡಿ ಮತ್ತೊಂದು ಅವಧಿಗೆ ಆಯ್ಕೆ ಮಾಡಲು ಅವಕಾಶ ವಿರುವುದಿಲ್ಲ ಹಾಗೂ ಸುಳ್ಳು ಮಾಹಿತಿ ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.

ಅರ್ಜಿ ಸಲ್ಲಿಸಲು ನವೆಂಬರ್ 08 ಕೊನೆಯ ದಿನವಾಗಿದ್ದು, ಆಸಕ್ತರು ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ ಆವರಣ, ಚಿತ್ರದುರ್ಗ ಇವರನ್ನು ಸಂಪರ್ಕಿಸಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ತುಕಾರಾಂರಾವ್ ಬಿ.ವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಥಮ ಶಸಾಪ ಅಧ್ಯಕ್ಷರಾಗಿ ಎಂ.ಜೆ.ಪಾಟೀಲ

• ಉದಯವಾಹಿನಿ, ಇಂಡಿ

ಇಂಡಿ ತಾಲ್ಲೂಕಾ ಪ್ರಥಮ ಶರಣ ಸಾಹಿತ್ಯ ಪರಿಷತ್ತಿನ ಸಮ್ಮೇಳನ ಅಧ್ಯಕ್ಷರಾಗಿ ಇಂಡಿಯ ನಿವೃತ್ತ ಪ್ರಾಧ್ಯಾಪಕ ಎಂ.ಜೆ.ಪಾಟೀಲ ಆಯ್ಕೆಯಾಗಿದ್ದಾರೆ.


ಉದಯವಾಹಿನಿ ಚಿತ್ರ

ಎಂ.ಜೆ.ಪಾಟೀಲರನ್ನು ಶಸಾಪ ಪದಾಧಿಕಾರಿಗಳು ಅವರ ಮನೆಯಲ್ಲಿ ಸನ್ಮಾನಿಸಿದರು. ಪ್ರಥಮ ಶರಣ ಸಾಹಿತ್ಯ ಸಮ್ಮೇಳನ ನವೆಂಬರ್ 10 ರಂದು ಇಂಡಿಯ ಬಸವರಾಜೇಂದ್ರ ದೇವಸ್ಥಾನದಲ್ಲಿ ನಡೆಯಲಿದೆ. ಶಸಾಪ ತಾಲ್ಲೂಕಾ ಅಧ್ಯಕ್ಷ ಬಿ.ಎಸ್.ಪಾಟೀಲ, ಯುವ ಘಟಕದ ಅಧ್ಯಕ್ಷ ಎಸ್.ಐ.ಸುಗುರ, ಎಸ್.ಎಸ್. ಈರನಕೇರಿ, ಎಸ್.ಎಂ.ಮೇತ್ರಿ, ಸಿದ್ದಪ್ಪ ಬಗಲಿ, ಕೆ.ಜಿ.ನಾಟಿಲಾರ ಮತ್ತಿತರಿದ್ದರು.

## ವಿದ್ಯಾರ್ಥಿಯ ಮೇಲೆ ಹರಿದ ಪ್ರವಾಸಿಗರ ಬಸ್: ವಿದ್ಯಾರ್ಥಿ ಸಾವು

• ಉದಯವಾಹಿನಿ, ಶಿವಮೊಗ್ಗ

ಕಾಲೇಜಿಗೆ ಹೋಗಲು ಬಸ್ ನಿಲ್ದಾಣದಲ್ಲಿ ಕಾಯುತ್ತಿದ್ದ ವಿದ್ಯಾರ್ಥಿ ಮೇಲೆ ಬಸ್ ಹರಿದ ಪರಿಣಾಮ ವಿದ್ಯಾರ್ಥಿ ಸಾವನ್ನಪ್ಪಿದ ಘಟನೆ ತೀರ್ಥಹಳ್ಳಿ ತಾಲ್ಲೂಕಿನ ಬೆಜ್ಜವಳ್ಳಿ ಬಸ್ ನಿಲ್ದಾಣದಲ್ಲಿ ಶುಕ್ರವಾರ ನಡೆದಿದೆ. ಪ್ರಥಮ್ ಸಾವನ್ನಪ್ಪಿದ ವಿದ್ಯಾರ್ಥಿ. ಆಸ್ಪತ್ರೆ ದಾಖಲಿಸುವ ವೇಳೆ ಮಾರ್ಗ ಮಧ್ಯದಲ್ಲಿ ಪ್ರಥಮ್ ಕೊನೆಯುಸಿರೆಳೆದಿದ್ದಾನೆ. ಗೋವಾ- ಮಂಗಳೂರು ಪ್ರವಾಸ ಮುಗಿಸಿಕೊಂಡು ಸಕ್ರೆಬೈಲಿಗೆ ಬರುತ್ತಿದ್ದ ಪ್ರವಾಸಿಗರಿದ್ದ ಬಸ್ ಚಾಲಕ ಓವರ್ ಟೇಕ್ ಮಾಡುವಾಗ ನಿಂತಿದ್ದ ವಿದ್ಯಾರ್ಥಿ ಪ್ರಥಮ್ ಮೇಲೆ ಹರಿದಿದೆ. ತನಿಕಲ್ ಗ್ರಾಮದ ಪಾಂಡ್ಯ ಗ್ರಾಮದ ವಿದ್ಯಾರ್ಥಿ ಪ್ರಥಮ್ ತೀರ್ಥಹಳ್ಳಿಯಲ್ಲಿ ಪ್ರಥಮ ವರ್ಷ ಡಿಪ್ಲೊಮಾ ಓದುತ್ತಿದ್ದ. ಮಾಳೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಚಿಕನ್, ಮಟನ್ ಸೆಂಟರ್‌ಗೆ ಸಚಿವೆ ಶೋಭಾ ಕರಂದ್ಲಾಜೆ ಹೆಸರಿಟ್ಟ ಅಭಿಮಾನಿ

• ಉದಯವಾಹಿನಿ, ಕುಕನೂರು

ಪಟ್ಟಣದ ನಿವಾಸಿ, ಚಿಕನ್, ಮಟನ್ ಮಾಂಸದಂಗಡಿ ಮಾಲಕರೊಬ್ಬರು ತಮ್ಮ ಅಂಗಡಿಗೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಹೆಸರನ್ನಿಟ್ಟು ಗಮನ ಸೆಳೆದಿದ್ದಾರೆ.



ಉದಯವಾಹಿನಿ ಚಿತ್ರ

ಅಲ್ಲದೇ ಅವರ ಭಾವಚಿತ್ರವನ್ನು ತಮ್ಮ ಕೈಮೇಲೆ ಟ್ಯಾಟೋ ಹಾಕಿಸಿಕೊಂಡು ಅಭಿಮಾನ ಮೆರೆದಿದ್ದಾರೆ. ಪಟ್ಟಣದ ಬಸ್ ನಿಲ್ದಾಣದ ಬಳಿ ಅಂಗಡಿಯ ಮಾಲಕ ಖಾದಿರ್ ಬಾಬಣ್ಣ ಕಲಾಲ್ 20 ವರ್ಷಗಳಿಂದ ಸಚಿವೆ ಶೋಭಾ ಅವರ ಅಭಿಮಾನಿಯಾಗಿದ್ದಾರೆ. ಅಂಗಡಿಗೂ ಸಹ ಶೋಭಾ ಕರಂದ್ಲಾಜೆ ಮಟನ್ ಚಿಕನ್ ಸೆಂಟರ್ ಎನ್ನುವ ಬೋರ್ಡ್ ಹಾಕಿಸಿದ್ದಾರೆ.

## ವಾರದ ಸಂತೆಗೆ ಮಳೆರಾಯನ ಕಾಟ

• ಉದಯವಾಹಿನಿ, ಮುಧೋಳ

ಬೆಳ್ಳಂಬೆಳಗ್ಗೆಯಿಂದಲೇ ಮಳೆರಾಯ ಅಬ್ಬರಿಸಲು ಶುರುವಿಟ್ಟುಕೊಂಡಿರುವ ಪರಿಣಾಮ ಸಾರ್ವಜನಿಕ ಜೀವನ ಅಸ್ತವ್ಯಸ್ತಗೊಂಡಿದೆ.

ಶುಕ್ರವಾರ ಮುಧೋಳ ಸಂತೆ ದಿನವಾದ್ದರಿಂದ ಗ್ರಾಮೀಣ ಪ್ರದೇಶದ ಜನರು ಅಪಾರ ಸಂಖ್ಯೆಯಲ್ಲಿ ನಗರಕ್ಕೆ ಆಗಮಿಸುತ್ತಾರೆ. ಆದರೆ ಬೆಳಗ್ಗೆಯಿಂದಲೇ ಆರಂಭಗೊಂಡಿರುವ ಮಳೆಯಿಂದಾಗಿ ಸಂತೆಗೆ ಹಿನ್ನಡೆಯಾಗಿದೆ.

ಇನ್ನು ನೌಕರಸ್ಥರು ಕಾರ್ಮಿಕರು ತಮ್ಮ ದಿನನಿತ್ಯದ ಕೆಲಸಕ್ಕೆ ತೆರಳಲು ಮಳೆ ಅಡ್ಡಿಯಾಗಿರುವುದರಿಂದ ಜನಜೀವನ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ.

ಕಳೆದ ಮೂರ್ನಾಲ್ಕು ದಿನಗಳಿಂದ ಸುರಿಯುತ್ತಿರುವ ಮಳೆಯಿಂದಾಗಿ ತಾಲ್ಲೂಕಿನಲ್ಲಿ ಕೃಷಿ ಕೆಲಸ ಸೇರಿದಂತೆ ಎಲ್ಲಾ ಕೆಲಸಗಳಿಗೂ ತೊಂದರೆಯುಂಟಾಗುತ್ತಿದೆ.

## ಕಂದಾಯ ಇಲಾಖೆಯಿಂದ ಅವಿರೋಧ ಆಯ್ಕೆಗೆ ಒತ್ತು

• ಉದಯವಾಹಿನಿ, ಮುದ್ದೇಬಿಹಾಳ

ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ 2024-29 ನೇ ಸಾಲಿನ ಚುನಾವಣೆಗೆ ಮುದ್ದೇಬಿಹಾಳ ತಾಲ್ಲೂಕು ಕಂದಾಯ ಇಲಾಖೆಯಿಂದ ಕಾರ್ಯಾಲಯ ವಿಭಾಗಕ್ಕೆ ನಾಲತವಾಡ ಉಪ ತಹಶಿಲ್ದಾರ ಎನ್ ಬಿ ಮಾವಿನಮಟ್ಟಿ (ದೂರೆ) ಕ್ಷೇತ್ರಾಧಿಕಾರಿ ವಿಭಾಗಕ್ಕೆ ನಾಲತವಾಡ ಕಂದಾಯ ನಿರೀಕ್ಷಕ ವೆಂಕಟೇಶ ಅಂಬಿಗೇರ ನಾಮಪತ್ರವನ್ನು ಚುನಾವಣಾ ಅಧಿಕಾರಿ ಎಸ್ ಆರ್ ಕಟ್ಟಿಮನಿ ಅವರಿಗೆ ಶುಕ್ರವಾರ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷ ಗಂಗಾಧರ ಜೋಲಗುಡ್ಡ ಮಾತನಾಡಿ ನಮ್ಮ ಕಂದಾಯ ಇಲಾಖೆಯಿಂದ ಇರುವ ಕಾರ್ಯಾಲಯ ಹಾಗೂ ಕ್ಷೇತ್ರಾಧಿಕಾರಿ ಸ್ಥಾನಕ್ಕೆ ಚುನಾವಣೆ ನಡೆಯಬಾರದು ಈ ಎರಡು ಸ್ಥಾನ ಅವಿರೋಧವಾಗಿ ಆಯ್ಕೆ ಮಾಡಬೇಕೆಂದು ನಮ್ಮ ಕಂದಾಯ ವಿಭಾಗದ ಉಪ ತಹಶಿಲ್ದಾರರು, ಕಂದಾಯ ನಿರೀಕ್ಷಕರು ಎಸ್ಡಿಎ ಎಲ್ಲಾ ಗ್ರಾಮಾಡಳಿತ ಅಧಿಕಾರಿಗಳು ಒಮ್ಮತದಿಂದ ಎನ್ ಬಿ ಮಾವಿನಮಟ್ಟಿ, ಹಾಗೂ ವೆಂಕಟೇಶ ಅಂಬಿಗೇರ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲು ತೀರ್ಮಾನಿಸಿದ್ದೇವೆ ಎಂದರು. ನಾಲತವಾಡ ಉಪ ತಹಶಿಲ್ದಾರ ಎನ್ ಬಿ ಮಾವಿನಮಟ್ಟಿ, ನಾಲತವಾಡ ಕಂದಾಯ ನೀರೀಕ್ಷಕ ವೆಂಕಟೇಶ ಅಂಬಿಗೇರ ಕಚೇರಿ ಹಾಗೂ ಕ್ಷೇತ್ರ ವಿಭಾಗದಲ್ಲಿ ನಮ್ಮನ್ನು ಅವಿರೋಧವಾಗಿ ಆಯ್ಕೆ ಮಾಡಲು ಶ್ರಮಿಸಿದ ಗ್ರಾಮಾಡಳಿತ ಅಧಿಕಾರಿಗಳ ಜಿಲ್ಲಾ ಅಧ್ಯಕ್ಷರು ನಮ್ಮ ಕಂದಾಯ ವಿಭಾಗದ ಎಲ್ಲಾ ಪದಾಧಿಕಾರಿಗಳು ನಮ್ಮನ್ನು ವಿಶ್ವಾಸದಿಂದ ಅವಿರೋಧವಾಗಿ ಆಯ್ಕೆ ಮಾಡಿದ್ದಕ್ಕೆ ಪ್ರತಿಯಾಗಿ ಪ್ರಾಮಾಣಿಕ ಪಾರದರ್ಶಕ ಜವಾಬ್ದಾರಿ ನಿರ್ವಹಿಸುವುದಾಗಿ ತಿಳಿಸಿದರು.


ಉದಯವಾಹಿನಿ ಚಿತ್ರ

**ವೆಂಕಟೇಶ ಅಂಬಿಗೇರ ನಾಮಪತ್ರ ಸಲ್ಲಿಕೆ**

ಈ ವೇಳೆ ಕಂದಾಯ ನೌಕರ ಸಂಘದ ಅಧ್ಯಕ್ಷ ಶ್ರೀನಿವಾಸ ಹುನಗುಂದ, ಗ್ರಾಮಾಡಳಿತ ಅಧಿಕಾರಿಗಳ ತಾಲ್ಲೂಕ ಅಧ್ಯಕ್ಷ ಮನೋಜ ರಾಠೋಡ, ಸುನೀಲ್ ಚವ್ಹಾಣ, ಎ ಎಸ್ ಬಾಬಾನಗರ, ಕೆ ಹೆಚ್ ನ್ಯಥಾಪ, ರಿಯಾಜ್ ನ್ಯಾಯ್ಕೋಡಿ, ರಫಿಕ್ ಮುಲ್ಲಾ, ಮೋಹಿಜ್ ಇನಾಮದಾರ, ಬಿ ಕೆ ನಂದಗೋಡ, ದೇವರಾಜ ಗುರಿಕಾರ, ರಾಮಪ್ಪ ಹೊಸೂರ, ಬಾಗೇವಾಡಿ ಶಿರಸ್ತೆದಾರ, ಜಿ ಎನ್ ಕಟ್ಟಿ, ಹರೀಶ ಸಿಂಹಾಸನ, ಅಪ್ಪು ಅವಟಿ, ಶಿವಶಂಕರ ಕುಂಬಾರ, ಆರತಿ ಬಳವಾಟ, ಗಂಗಮ್ಮ ಕುಂಬಾರ ಉಪಸ್ಥಿತರಿದ್ದರು.

## ಸಂಭ್ರಮದ ರಾವುತರಾಯ-ಮಲ್ಲಯ್ಯ ಜಾತ್ರೆ

• ಉದಯವಾಹಿನಿ, ದೇವರ ಹಿಪ್ಪರಗಿ

ಐತಿಹಾಸಿಕ ಹಿನ್ನೆಲೆಯ ಪಟ್ಟಣದ ರಾವುತರಾಯ- ಮಲ್ಲಯ್ಯ ಜಾತ್ರೆ ಮೂರು ದಿನಗಳ ಮೋಡ ಕವಿದ ವಾತಾವರಣ ಹಾಗೂ ತುಂತುರು ಮಳೆಯ ನಡುವೆಯೇ ಶುಕ್ರವಾರ ಅದ್ದೂರಿಯ ಬಂಡಿ ಉತ್ಸವದೊಂದಿಗೆ ಸಂಪನ್ನಗೊಳ್ಳಲಿದೆ. ವಿಜಯದಶಮಿಯ ಬಳಿಕ ದ್ವಾದಶಿಯಂದು ಆರಂಭಗೊಳ್ಳುವ ಸಾಂಪ್ರದಾಯಿಕ ಜಾತ್ರಾ, ಮಹೋತ್ಸವ ಹುಣ್ಣಿಮೆಯ ಮರುದಿನ ರಾವುತರಾಯನ ಬಂಡಿ ಉತ್ಸವದೊಂದಿಗೆ ಕೊನೆಗೊಳ್ಳುವುದು.

ಜನಸಮೂಹದ ಜಾತ್ರಾ, ಮಹೋತ್ಸವ ಶತಮಾನದ ಹಿಂದಿನಿಂದಲೂ ನಿರಂತರವಾಗಿ ಪ್ರತಿ ವರ್ಷ ನಡೆದು ಬಂದಿದೆ. ಐತಿಹಾಸಿಕ ಹಿನ್ನೆಲೆ ಜೊತೆಗೆ ಪುರಾಣ, ಜನಪದವು ರಾವುತರಾಯನ ಜಾತ್ರೆಯೊಂದಿಗೆ ತಳಕು ಹಾಕಿಕೊಂಡಿದೆ. ಸಂಪ್ರದಾಯಕ್ಕೆ ಚ್ಯುತಿ ಬಾರದಂತೆ ಹಿರಿಯರು ಆಚರಿಸಿಕೊಂಡು ಬರುತ್ತಿರುವ ಜಾತ್ರೆಯು ಆಧುನಿಕತೆಯ ಭರದಲ್ಲೂ ಸಡಗರದ ಜೊತೆ ಭಯ, ಭಕ್ತಿ ಶ್ರದ್ಧೆಯಿಂದ ಮುಂದುವರಿಯುತ್ತಿದೆ. ಕರ್ನಾಟಕ ಸೇರಿದಂತೆ ಮಹಾರಾಷ್ಟ್ರ, ಆಂಧ್ರಪ್ರದೇಶದ ನೆರೆಹೊರೆಯ ಜಿಲ್ಲೆಗಳಲ್ಲಿ ನೆಲೆಸಿರುವ ಭಕ್ತ ಸಮೂಹ ಜಾತ್ರೆಯ ಸಮಯದಲ್ಲಿ ದೇವರಹಿಪ್ಪರಗಿಗೆ ಆಗಮಿಸಿ ತಮ್ಮ ಆರಾಧ್ಯದೈವವಾದ ರಾವುತರಾಯ- ಮಲ್ಲಯ್ಯನ ದರ್ಶನ ಪಡೆದು ಧನ್ಯರಾಗುತ್ತಾರೆ.

## ಡಾ.ಬಸವರಾಜ ಕವಲಗಿ ಅಮಾನತುಗೊಳಿಸಲು ಆಗ್ರಹ

### ಪೂರ್ವಸಿದ್ಧತೆ ಮಾಡಿಕೊಳ್ಳದೆ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಯಲ್ಲಿ ನಿರ್ಲಕ್ಷ್ಯತನ

• ಉದಯವಾಹಿನಿ, ಜೇವರ್ಗಿ

ಜೇವರ್ಗಿ ತಾಲ್ಲೂಕಿನ ನೆಲೋಗಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಯಲ್ಲಿ ನಿರ್ಲಕ್ಷ್ಯತನ ತೋರಿ, ಡಾ. ಶ್ರೀ ಸರ್ವಪಲಿ ರಾಧಾಕೃಷ್ಣ, ಶ್ರೀ ಬಾಬು ಜಗಜೀವನ ರಾಮ, ಶ್ರೀ ಮಹರ್ಷಿ ವಾಲ್ಮೀಕಿ ಈ ಮಹಾನ ವ್ಯಕ್ತಿಗಳಿಗೆ ಅವಮಾನಿಸಿದ ಡಾ. ಬಸವರಾಜ ಕವಲಗಿ ಆಡಳಿತ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಅಮಾನತುಗೊಳಿಸುವಂತೆ ಕರ್ನಾಟಕ ರಾಜ್ಯ ತಳವಾರ ಎಸ್ ಟಿ ಹೋರಾಟ ಸಮಿತಿ ರಾಜ್ಯಾಧ್ಯಕ್ಷರಾದ ಡಾ. ಸರ್ದಾರ ರಾಯಪ್ಪ ಆಗ್ರಹಿಸಿದರು.

ತಹಶೀಲ್ದಾರ ಮುಖಾಂತರ ಜಿಲ್ಲಾಧಿಕಾರಿ ಕಲಬುರ್ಗಿ ಅವರಿಗೆ ಮನವಿ ಪತ್ರ ಸಲ್ಲಿಸಿ ಮಾತನಾಡಿದ ಅವರು ಸರಕಾರದ ಆದೇಶದಂತೆ ರಾಜ್ಯ ಸರ್ಕಾರದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ದಿನಾಂಕ:17-10-2024 ರಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಣೆ ಮಾಡಲು ಸರ್ಕಾರದ ಆದೇಶವಿದೆ. ಅದರಂತೆ ಸಮುದಾಯ ಆರೋಗ್ಯ ಕೇಂದ್ರ ನೆಲೋಗಿಯಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಣೆಯನ್ನು ಮಾಡುವಾಗ ಡಾ. ಸರ್ವಪಲಿ ರಾಧಾಕೃಷ್ಣ ರವರ ಫೋಟೋ ಮೇಲೆ ಶ್ರೀ ಬಾಬು ಜಗಜೀವನ ರಾಮ ಅವರ ಜೆರಾಕ್ಸ್ ಬ್ಲಾಕ್ ವೈಟ್ ಫೋಟೋವನ್ನು ಅಂಟಿಸಿ ಮತ್ತೆ ಅದೇ ಶ್ರೀ ಬಾಬು ಜಗಜೀವನ ರಾಮ ಅವರ ಫೋಟೋದ ಮೇಲೆ ಶ್ರೀಮಹರ್ಷಿ ವಾಲ್ಮೀಕಿ ಜೆರಾಕ್ಸ್ ಬ್ಲಾಕ್ ವೈಟ್ ಫೋಟೋವನ್ನು ಅಂಟಿಸಿ ಜಯಂತಿಯನ್ನು ಆಚರಿಸುವಾಗ ಮಾಳಪ್ಪಾ ಗ್ರೂಪ ಡಿ ಸ.ಆ.ಕೇಂದ್ರ ನೆಲೋಗಿ ಇವರು ಈ ರೀತಿಯಾಗಿ ಫೋಟೋಗಳ ಮೇಲೆ ಜೆರಾಕ್ಸ ಫೋಟೋವನ್ನು ಅಂಟಿಸಿರುವದನ್ನು ತೆಗೆಯುವಾಗ ಖುದ್ದಾಗಿ ಸಿಕ್ಕಿ ಬಿದ್ದಿದ್ದಾರೆ. ಕಾರಣ ಸದರಿ ಸ.ಆ.ಕೇಂದ್ರದ ಆಡಳಿತ ವೈದ್ಯಾಧಿಕಾರಿಗಳಾದ ಡಾ.ಬಸವರಾಜ ಕವಲಗಿ ಅವರು ಪ್ರತಿ ಸಲ ಮಹನೀಯರ ಯಾವುದೇ ಜಯಂತಿಯನ್ನು ಆಚರಿಸುವಾಗ ಮುಂಜಾಗ್ರತೆ ವಹಿಸಿ ಮತ್ತು ಆಯಾ ಜಯಂತಿಯ ಅನುಸಾರವಾಗಿ ಫೋಟೋ ಇಟ್ಟು ಗೌರವಯುತವಾಗಿ ಪೂಜೆಯನ್ನು ಮಾಡಬೇಕಾಗಿದ್ದು ಅವರ ಜವಾಬ್ದಾರಿ ಆಗಿರುತ್ತದೆ. ಆದರೆ ತಮ್ಮ ಆಸ್ಪತ್ರೆಯ ಗ್ರೂಪ್ 'ಡಿ ಸಿಬ್ಬಂದಿಗೆ ವಹಿಸಿದ್ದಾರೆ. ಆದರೆ ಗ್ರೂಪ್ 'ಡಿ ಸಿಬ್ಬಂದಿಯೂ ಫೋಟೋ ಮೇಲೆ ಫೋಟೋ ಅಂಟಿಸಿ ಡಾ. ಶ್ರೀ ಸರ್ವಪಲಿ ರಾಧಾಕೃಷ್ಣ, ಶ್ರೀ ಬಾಬು ಜಗಜೀವನ ರಾಮ, ಶ್ರೀ ಮಹರ್ಷಿ ವಾಲ್ಮೀಕಿ ಈ ಮಹಾನ ವ್ಯಕ್ತಿಗಳಿಗೆ ಅವಮಾನಿಸಿದ್ದಾರೆ. ಯಾವುದೇ ಮುಂಜಾಗ್ರತೆ ಮತ್ತು ಪೂರ್ವಸಿದ್ಧತೆ ಮಾಡಿಕೊಳ್ಳದೆ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಣೆಯಲ್ಲಿ ನಿರ್ಲಕ್ಷ್ಯತನ ಹಾಗೂ ಬೇಜವಾಬ್ದಾರಿತನ ತೋರಿರುವುದರಿಂದ ಇವರನ್ನು ಕೂಡಲೇ ಅಮಾನತುಗೊಳಿಸಬೇಕು ಒಂದು ವೇಳೆ ಕ್ರಮ ಕೈಗೊಳ್ಳದೆ ಹೋದರೆ ಮುಂದೆ ಉಗ್ರವಾದ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.


ಉದಯವಾಹಿನಿ ಚಿತ್ರ

**ಮಹಾನ್ ವ್ಯಕ್ತಿಗಳಿಗೆ ಅವಮಾನ**

ಈ ಸಂದರ್ಭದಲ್ಲಿ ಸಿದ್ದನಗೌಡ ಮಾವನೂರ, ಬಾಪೂಗೌಡ ಮಾಲಿಪಾಟೀಲ್ ಹಣಮಂತ ದುಡ್ಡನಗಿ, ಅಶೋಕ್ ಕಂಕಿ, ಭೀಮರಾಯ ತಳವಾರ, ಗುರು ಜೈನಪುರ್, ಪ್ರಕಾಶ ಮಂದೇವಾಲ, ಶಿವು ಪಟೇದ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ನಿಗಮ, ಮಂಡಳಿಗಳಲ್ಲಿ ನೇಮಕಾತಿ ವಿಳಂಬ: ಕಾರ್ಯಕರ್ತರ ಬೇಸರ

• ಉದಯವಾಹಿನಿ, ಬೆಳಗಾವಿ

ರಾಜ್ಯದ ಬಹುತೇಕ ನಿಗಮ, ಮಂಡಳಿಗಳ ನಿರ್ದೇಶಕ ಮತ್ತು ಸದಸ್ಯತ್ವ ಸ್ಥಾನಗಳ ನೇಮಕಾತಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇನ್ನೂ ಒಪ್ಪಿಗೆ ನೀಡದಿರುವುದು ಮುಖಂಡರು, ಕಾರ್ಯಕರ್ತರಲ್ಲಿ ಬೇಸರ ಮೂಡಿಸಿದೆ. ಸರ್ಕಾರ ರಚನೆಯಾಗಿ ಒಂದೂವರೆ ವರ್ಷವಾದರೂ ದುಡಿದವರಿಗೆ 'ಪ್ರತಿಫಲ' ಸಿಕ್ಕಿಲ್ಲ ಎಂಬ ನೋವು ಕಾರ್ಯಕರ್ತರದ್ದು. ಗ್ರೇಡ್-1 ನಿರ್ದೇಶಕರೂ ಸೇರಿ ಅಂದಾಜು 700ಕ್ಕೂ ಹೆಚ್ಚು ನಿರ್ದೇಶಕ ಸ್ಥಾನಗಳು ಖಾಲಿ ಇವೆ. ಆಗಸ್ಟ್ 3ರಂದು ಗೃಹಸಚಿವ ಜಿ.ಪರಮೇಶ್ವರ ನೇತೃತ್ವದಲ್ಲಿ ಎಲ್ಲಾ ನಿಗಮ, ಮಂಡಳಿಗಳ ನೇಮಕಾತಿ ಕುರಿತ ಸಭೆ ನಡೆದಿದೆ. ಸಚಿವರಾದ ರಾಮಲಿಂಗಾರೆಡ್ಡಿ, ಕೆ.ಜೆ. ಜಾರ್ಜ್, ಸತೀಶ ಜಾರಕಿಹೊಳಿ, ಸಂತೋಷ ಲಾಡ್, ಡಾ. ಶರಣಪ್ರಕಾಶ ಪಾಟೀಲ, ರಾಜ್ಯಸಭೆ ಸದಸ್ಯ ಜೆ.ಸಿ. ಚಂದ್ರಶೇಖರ ಸೇರಿ 11 ಜನರ ಸಮಿತಿ ರಚಿಸಲಾಗಿದೆ. ಈ ಸಮಿತಿಯು ಗ್ರೇಡ್-1 ನಿರ್ದೇಶಕರು, ನಿರ್ದೇಶಕರು ಹಾಗೂ ಸದಸ್ಯರ ಪಟ್ಟಿಯನ್ನು ಮುಖ್ಯಮಂತ್ರಿಗೆ ಸಲ್ಲಿಸಿದೆ.

ಆದರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಇನ್ನೂ ಅಂಕಿತ ಹಾಕಿಲ್ಲ. ಅಕ್ಟೋಬರ್ 16ರಂದು ಅಂತಿಮ ನೇಮಕಾತಿ ಪಟ್ಟಿ ಹೊರಬೀಳಲಿದೆ ಎಂದು ಪಕ್ಷದ ನಾಯಕರು ಭರವಸೆ ನೀಡಿದ್ದರು. ಅದೂ ಹುಸಿಯಾಗಿದೆ. ಲಾಬಿ ಮಾಡಿದ ಕೆಲವರನ್ನು ಮಾತ್ರ ಕೆಲವು ಮಂಡಳಿಗಳಿಗೆ ನೇಮಿಸಿದ್ದಾರೆ ಎಂಬುದು ತಕರಾರು.

# ಇಸ್ರೇಲ್ ರಕ್ಷಣಾ ಪಡೆಯ ದಾಳಿಗೆ ಹಮಾಸ್ ಮುಖ್ಯಸ್ಥ ಸಾವು

● ಇಸ್ರೇಲ್ ಮೇಲಿನ ದಾಳಿಗೆ ಕಾರಣವಾದ ಮತ್ತೊಬ್ಬ ವ್ಯಕ್ತಿಯ ಜೀವವನ್ನು ಇಸ್ರೇಲ್ ತೆಗೆದು ಸೇಡು ತೀರಿಸಿಕೊಂಡಿದೆ

**ಟೆಲ್ ಅವಿವ್:** ದಕ್ಷಿಣ ಗಾಜಾದಲ್ಲಿ ಇಸ್ರೇಲ್ ರಕ್ಷಣಾ ಪಡೆ (ಐಡಿಎಫ್) ಕಾರ್ಯಾಚರಣೆ ವೇಳೆ ಹಮಾಸ್ ಮುಖ್ಯಸ್ಥ ಯಾಹ್ಯಾ ಸಿನ್ವರ್ ಮೃತಪಟ್ಟಿದ್ದಾರೆ. ಈ ಬಗ್ಗೆ ಐಡಿಎಫ್ ಖಚಿತಪಡಿಸಿದೆ.

ಗಾಜಾಪಟ್ಟಿಯಲ್ಲಿ ನಡೆದ ಕಾರ್ಯಾಚರಣೆಯಲ್ಲಿ 3 ಉಗ್ರರು ಮೃತಪಟ್ಟಿದ್ದಾರೆ. ಇದರಲ್ಲಿ ಹಮಾಸ್ ಮುಖ್ಯಸ್ಥರನ್ನು ಹೋಲುವ ಶವವು ಪತ್ತೆಯಾಗಿತ್ತು. ಈ ಹಿನ್ನೆಲೆ ಆ ಶವದ ಡಿಎನ್ಎ ಪರೀಕ್ಷೆಯನ್ನು ನಡೆಸಲಾಗಿದೆ. ಆರಂಭದಲ್ಲಿ ಅಲ್ಲಿನ ಸ್ಥಳೀಯ ಸುದ್ದಿ ವಾಹಿನಿಗಳು ಹಮಾಸ್ ಮುಖ್ಯಸ್ಥನ ಹತ್ಯೆಯಾಗಿದೆ ಎಂದು ವರದಿ ಮಾಡಿದ್ದವು. ಆ ಬಳಿಕ ಐಡಿಎಫ್ ಯಾಹ್ಯಾ ಸಿನ್ವರ್ ಇನ್ನಿಲ್ಲ ಎಂದು ತಿಳಿಸಿದೆ.

ಈ ಬಗ್ಗೆ ಟ್ವೀಟ್ ಮಾಡಿರುವ ಇಸ್ರೇಲ್ ರಕ್ಷಣಾ ಪಡೆ, "Eliminated: Yahya Sinwar " ಎಂದು ಪೋಸ್ಟ್ ಹಾಕಿದೆ. ಈ ಮೂಲಕ ಕಳೆದ ವರ್ಷ ಇಸ್ರೇಲ್ ಮೇಲಿನ ದಾಳಿಗೆ ಕಾರಣವಾದ ಮತ್ತೊಬ್ಬ ವ್ಯಕ್ತಿಯ ಜೀವವನ್ನು ಇಸ್ರೇಲ್ ತೆಗೆದು ಸೇಡು ತೀರಿಸಿಕೊಂಡಿದೆ.

ಇನ್ನು ಹಮಾಸ್ ಪಡೆಯ ಮೇಲೆ ಇಸ್ರೇಲ್ ದಾಳಿಯನ್ನು ಮುಂದುವರೆಸಿದೆ. ಮೂವರು ಹಮಾಸ್ ಕಾರ್ಯಕರ್ತರ ಹತ್ಯೆಯಾದ ಕಟ್ಟಡದಲ್ಲಿ ಇಸ್ರೇಲ್ ಒತ್ತೆಯಾಳುಗಳು ಇರುವ ಸಾಧ್ಯತೆಗಳಿಲ್ಲ ಎಂದು ಇಸ್ರೇಲ್ ರಕ್ಷಣಾ ಪಡೆ ಹೇಳಿದೆ. ತಿಂಗಳ ಹಿಂದೆ ಲೆಬನಾನ್ ಮೇಲೆ ವೈಮಾನಿಕ ದಾಳಿ ನಡೆಸಿದ್ದ ಇಸ್ರೇಲ್, ಹಿಜ್ಬುಲ್ಲಾ ಮುಖ್ಯಸ್ಥ ಹಸನ್ ನಸ್ರಲ್ಲಾನನ್ನು ಹತ್ಯೆ ಮಾಡಿತ್ತು. ಈ ಬೆನ್ನಲ್ಲೇ ಸಿನ್ವರ್‌ನನ್ನು ಹತ್ಯೆ ಮಾಡಿ ಮೇಲುಗೈ ಸಾಧಿಸಿದೆ.

● ಇಸ್ರೇಲ್ ರಕ್ಷಣಾ ಪಡೆಗಳ (ಐಡಿಎಫ್) ಕಾರ್ಯಾಚರಣೆ ವೇಳೆ ಹಮಾಸ್ ಮುಖ್ಯಸ್ಥ ಯಾಹ್ಯಾ ಸಿನ್ವರ್ ಮೃತ.
● ಟ್ವೀಟ್ ಮಾಡಿರುವ ಇಸ್ರೇಲ್ ರಕ್ಷಣಾ ಪಡೆ ಎಲಿಮಿನೇಟೆಡ್ ಯಾಹ್ಯಾ ಸಿನ್ವರ್ ಎಂದಿದೆ.
● ಹಮಾಸ್ ಹಾಗೂ ಇಸ್ಲಾಮಿಕ್ ಜಿಹಾದ್ ಸಂಘಟನೆಗಳ ಉಗ್ರರ ಮೇಲೆ ಐಡಿಎಫ್ ಕಾರ್ಯಾಚರಣೆ ಮುಂದುವರೆದಿದೆ.

ಸುರಕ್ಷಿತ ತಾಣಗಳಿಗೆ ತೆರಳುವಂತೆ ಸೂಚನೆ



**ಯುದ್ಧ ನಿಲ್ಲಿಸುವ ಮಾತೇ ಇಲ್ಲ ಎಂದಿದ್ದ ಸಿನ್ವರ್:** ಕಳೆದ ತಿಂಗಳು ಯುದ್ಧದ ಬಗ್ಗೆ ಮಾತನಾಡಿದ್ದ ಹಮಾಸ್ ಉಗ್ರ ಸಂಘಟನೆ ಮುಖ್ಯಸ್ಥ ಯಾಹ್ಯಾ ಸಿನ್ವರ್ ಪ್ಯಾಲೆಸ್ತೀನ್‌ನ ಹಮಾಸ್ ಉಗ್ರರು ಇಸ್ರೇಲ್ ವಿರುದ್ಧ ಸುದೀರ್ಘ ಸಮರ ನಡೆಸುತ್ತದೆ ಎಂದು ಹೇಳಿದ್ದರು. ಯಮನ್ ದೇಶದಲ್ಲಿ ಇರುವ ಇರಾನ್ ಬೆಂಬಲಿತ ಹೌತಿ ಉಗ್ರರ ಮೂಲಕ ಯಾಹ್ಯಾ ಸಿನ್ವರ್ ಈ ಸಂದೇಶ ರವಾನೆ ಮಾಡಿದ್ದರು.

ದಾಳಿ ನಡೆದ ಸಂದರ್ಭದಲ್ಲಿ ಶಾಲೆಯ ಆವರಣದಲ್ಲಿ ಸಾಕಷ್ಟು ಉಗ್ರರ ಚಲನವಲನ ಇತ್ತು ಎಂದು ಇಸ್ರೇಲ್ ರಕ್ಷಣಾ ಪಡೆ ತಿಳಿಸಿದೆ. ಜತೆಗೆ ಉತ್ತರ ಗಾಜಾದ ಬೀಟ್ ಹನೌನ್, ಜಬಾಲಿಯಾ ಮತ್ತು ಬೀಟ್ ಲಾಹಿಯಾದಲ್ಲಿ ನೆಲೆಸಿರುವ ಪ್ಯಾಲೆಸ್ಟೈನಿಯನ್ನರಿಗೆ ಗಾಜಾಪಟ್ಟಿಯ ದಕ್ಷಿಣದಲ್ಲಿರುವ ಸುರಕ್ಷಿತ ಆಶ್ರಯ ತಾಣಗಳಿಗೆ ತೆರಳುವಂತೆ ಜನರಿಗೆ ಇಸ್ರೇಲ್ ರಕ್ಷಣಾ ಪಡೆಯು (ಐಡಿಎಫ್) ಸೂಚನೆ ನೀಡಿದೆ.

### ಇಸ್ರೇಲ್ ಮೇಲೆ ಹಮಾಸ್ ದಾಳಿಗೆ 1 ವರ್ಷ

ಕಳೆದ ವರ್ಷ ಅಕ್ಟೋಬರ್ 7 ರಂದು ಇಸ್ರೇಲ್ ಮೇಲೆ ಹಮಾಸ್ ಉಗ್ರರು ದಾಳಿ ನಡೆಸಿದ್ದರು. ಇಸ್ರೇಲ್ ಮೇಲೆ ಹಮಾಸ್ ಉಗ್ರರು ದಾಳಿ ನಡೆಸಿದ ಬೆನ್ನಲ್ಲೇ ಇಸ್ರೇಲ್ ಕೂಡಾ ಪ್ರತಿ ದಾಳಿ ನಡೆಸಿ ಗಾಜಾ ಪಟ್ಟಿಯಲ್ಲಿ ಹಮಾಸ್ ಉಗ್ರರ ನೆಲೆಗಳನ್ನು ಧ್ವಂಸ ಮಾಡುತ್ತಾ ಬಂದಿದ್ದರು. ಈ ಸಮರದಲ್ಲಿ ಸಾವಿರಾರು ಪ್ಯಾಲಿಸ್ತೀನ್ ಪ್ರಜೆಗಳು ಸಾವನ್ನಪ್ಪಿದ್ದಾರೆ. ಒಟ್ಟಾರೆ ಇಸ್ರೇಲ್ - ಹಮಾಸ್ ಯುದ್ಧ ಒಂದು ವರ್ಷ ನಡೆದಿದ್ದು, ಈಗ ಹಮಾಸ್ ಮುಖ್ಯಸ್ಥನ ಹತ್ಯೆಯಾಗಿದೆ. ಒಂದು ವರ್ಷದ ಅವಧಿಯಲ್ಲಿ ಗಾಜಾ ಪಟ್ಟಿಯಲ್ಲಿ ಸುಮಾರು 50 ಸಾವಿರ ಮಂದಿ ಸಾವನ್ನಪ್ಪಿದಂತಾಗಿದೆ.

### 28 ಮಂದಿ ಪ್ಯಾಲೆಸ್ಟೀನಿಯರು ಮೃತ

ಉತ್ತರ ಗಾಜಾದ ಶಾಲೆಯೊಂದರಲ್ಲಿ ನಡೆಸಲಾಗುತ್ತಿರುವ ಆಶ್ರಯದ ಮೇಲೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಮಕ್ಕಳು ಸೇರಿದಂತೆ ಕನಿಷ್ಠ 28 ಮಂದಿ ಪ್ಯಾಲೆಸ್ಟೀನಿಯರು ಮೃತಪಟ್ಟಿದ್ದಾರೆ ಎಂದು ಗಾಜಾ ಆರೋಗ್ಯ ಇಲಾಖೆ ತಿಳಿಸಿದೆ. 'ಜಬಲಿಯಾದಲ್ಲಿರುವ ಅಬು ಹುಸ್ಸೇನ್ ಶಾಲೆಯು ನಿರಾಶ್ರಿತರ ನೆಲೆಯಾಗಿತ್ತು. ಅಲ್ಲಿ ಹಮಾಸ್ ಹಾಗೂ ಇಸ್ಲಾಮಿಕ್ ಜಿಹಾದ್ ಸಂಘಟನೆಗಳ ಉಗ್ರರು ಇದ್ದರು.

## ಪ್ರಧಾನಿ ಮೋದಿ ಪಾಕಿಸ್ತಾನಕ್ಕೆ ಬರಬೇಕಿತ್ತು: ನವಾಜ್



**ಇಸ್ಲಾಮಾಬಾದ್:** ಭಾರತ-ಪಾಕಿಸ್ತಾನ ಈಗಾಗಲೇ 75 ವರ್ಷಗಳನ್ನು ವ್ಯರ್ಥ ಮಾಡಿವೆ, ಮುಂದಿನ 75 ವರ್ಷಗಳು ಹೀಗಾಗದಿರಲಿ ಉಭಯ ರಾಷ್ಟ್ರಗಳು ಸಂಬಂಧ ವೃದ್ಧಿಸಿಕೊಳ್ಳಲಿ ಎಂದು ಪಾಕಿಸ್ತಾನದ ಮಾಜಿ ಪ್ರಧಾನಿ ನವಾಜ್ ಷರೀಫ್ ಹೇಳಿದ್ದಾರೆ.

ಎಸ್ ಸಿಒ ಶೃಂಗಸಭೆಯಲ್ಲಿ ಭಾಗವಹಿಸಲು ಪಾಕಿಸ್ತಾನಕ್ಕೆ ತೆರಳಿದ್ದ ವಿದೇಶಾಂಗ ಸಚಿವ ಎಸ್. ಜೈಶಂಕರ್ ಭೇಟಿಯ ನಂತರ, ಮಾಜಿ ಪ್ರಧಾನಿ ನವಾಜ್ ಷರೀಫ್ ಅವರು ಎರಡೂ ಕಡೆಯಿಂದ ಕೊರತೆಗಳಿವೆ ಆದರೆ ಮತ್ತೆ ಸ್ನೇಹಕ್ಕಿಂತ ಉತ್ತಮವಾದದ್ದು ಯಾವುದೂ ಇಲ್ಲ ಎಂದು ಹೇಳಿದರು.

ಇದು ಆರಂಭವಷ್ಟೇ. ಭಾರತ ಮತ್ತು ಪಾಕಿಸ್ತಾನ ಹಿಂದಿನದನ್ನು ಬಿಟ್ಟು ಭವಿಷ್ಯದ ಬಗ್ಗೆ ಯೋಚಿಸುತ್ತವೆ ಎನ್ನುವ ನಂಬಿಕೆ ಇದೆ. ಪ್ರಧಾನಿ ಮೋದಿ ಇಲ್ಲಿಗೆ ಬರಬೇಕೆಂದು ಬಯಸ್ವೆ, ವಿದೇಶಾಂಗ ಸಚಿವ ಜೈಶಂಕರ್ ಇಲ್ಲಿಗೆ ಬಂದಿದ್ದು ಹೊಸ ಆರಂಭಕ್ಕೆ ನಾಂದಿ ಹಾಡಿರುವುದು ಸಂತಸ ತಂದಿದೆ ಎಂದು ನವಾಜ್ ಷರೀಫ್ ಹೇಳಿದ್ದಾರೆ.

ಸದ್ಯಕ್ಕೆ ಯಾವುದೇ ರೀತಿಯ ವಿವಾದವನ್ನು ಬದಿಗಿಟ್ಟು ಸಕಾರಾತಕ ಅಂಶಗಳನ್ನು ಮಾತ್ರ ಪ್ರಸ್ತಾಪಿಸಿ, ನಾವು ಈಗ ಸಕಾರಾತಕ ಹೆಜ್ಜೆಗಳನ್ನು ಇಡಬೇಕಾಗಿದೆ, ಹೊಸದೊಂದು ಪ್ರಾರಂಭವಾಗಿದೆ ಎಂದು ಅವರು ಹೇಳಿದರು. ಭಾರತ ಮತ್ತು ಪಾಕಿಸ್ತಾನ ಎರಡೂ ಈಗ ವ್ಯಾಪಾರ, ಹವಾಮಾನ ಬದಲಾವಣೆ, ವ್ಯಾಪಾರ, ಉದ್ಯಮ, ಕ್ರೀಡೆ ಇತ್ಯಾದಿಗಳಲ್ಲಿ ಮುಂದುವರಿಯಬಹುದು ಎಂದು ನವಾಜ್ ಷರೀಫ್ ಹೇಳಿದರು. ವಾಜಪೇಯಿ ಅವರೊಂದಿಗಿನ ಅವರ ಭೇಟಿ ಮತ್ತು ಅವರಿಬ್ಬರೂ ಉತ್ತಮ ಬಾಂಧವ್ಯಕ್ಕೆ ಹೇಗೆ ಅಡಿಪಾಯ ಹಾಕಿದರು ಎಂಬುದನ್ನು ನಾನು ನೆನಪಿಸಿಕೊಳ್ಳುತ್ತೇನೆ ಎಂದು ಅವರು ಹೇಳಿದರು.

## ಜಾಗತಿಕ ಆರ್ಥಿಕತೆಯಲ್ಲಿ ಭಾರತದ ಬೆಳವಣಿಗೆ ವೇಗ ಪಡೆದುಕೊಂಡಿದೆ

**ವಾಷಿಂಗ್ಟನ್:** ಜಾಗತಿಕ ಆರ್ಥಿಕತೆಯಲ್ಲಿ ಭಾರತದ ಬೆಳವಣಿಗೆಯ ದರವು ವೇಗ ಪಡೆದುಕೊಂಡಿದೆ ಎಂದು ವಿಶ್ವಬ್ಯಾಂಕ್ ಅಧ್ಯಕ್ಷ ಅಜಯ್ ಬಂಗಾ ಹೇಳಿದ್ದಾರೆ, ಇದರಲ್ಲಿ ಬಹಳಷ್ಟು ದೇಶೀಯ ಮಾರುಕಟ್ಟೆಯಿಂದ ನಡೆಸಲ್ಪಡುತ್ತದೆ ಎಂದು ಅವರು ತಿಳಿಸಿದ್ದಾರೆ.

ಭಾರತದ ಬೆಳವಣಿಗೆಯ ದರವು ವಿಶ್ವ ಆರ್ಥಿಕತೆಯ ಅತ್ಯಂತ ಹೊಳೆಯುವ ಭಾಗಗಳಲ್ಲಿ ಒಂದಾಗಿದೆ ಎಂಬುದರಲ್ಲಿ ಯಾವುದೇ ಸಂದೇಹವಿಲ್ಲ. ಈ ರೀತಿಯ ವಾತಾವರಣದಲ್ಲಿ ಆರು, ಏಳು ಶೇಕಡಾ ಮತ್ತು ಅದಕ್ಕಿಂತ ಹೆಚ್ಚಿನ ಬೆಳವಣಿಗೆಯನ್ನು ಸಾಧಿಸಲು ಸಾಧ್ಯವಾಗುವುದು ಅವರು ಹಲವಾರು ಕೆಲಸಗಳನ್ನು ಮಾಡಿದ್ದಾರೆ ಎಂಬುದನ್ನು ತೋರಿಸುತ್ತದೆ ಎಂದಿದ್ದಾರೆ.

ನಾವು ಅವರೊಂದಿಗೆ ಹಲವಾರು ವಿಷಯಗಳ ಕುರಿತು ಸಕ್ರಿಯವಾಗಿ ತೊಡಗಿಸಿಕೊಂಡಿದ್ದೇವೆ ಮತ್ತು ಮುಂಬರುವ ತಿಂಗಳುಗಳಲ್ಲಿ ಯೋಜನೆಗಳ ವಿಷಯದಲ್ಲಿ ಹೆಚ್ಚಿನ ಫಲಿತಾಂಶಗಳನ್ನು ನಾವು ನೋಡುತ್ತೇವೆ ಎಂದು ನಾನು ಭಾವಿಸುತ್ತೇನೆ ಎಂದು ಬಂಗಾ ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.

ಭಾರತದಲ್ಲಿ ಬಹಳಷ್ಟು ಬೆಳವಣಿಗೆಯಾಗಿದೆ, ಇದು ದೇಶೀಯ ಮಾರುಕಟ್ಟೆಯಿಂದ ಕೂಡಿದೆ, ಇದು ಕೆಲವು ರೀತಿಯಲ್ಲಿ ಆರೋಗ್ಯಕರ ಸಂಕೇತವಾಗಿದೆ. ಪ್ರಧಾನ ಮಂತ್ರಿಯಾಗಿ ಭಾರತವು ಕೆಲಸ ಮಾಡಬೇಕಾಗಿರುವುದು ಜೀವನದ ಗುಣಮಟ್ಟದ ವಿಷಯಗಳು. ಗಾಳಿ ಮತ್ತು ನೀರಿನ ಗುಣಮಟ್ಟ ಮತ್ತು ಹಾಗೆ ಎಂದು ಅವರು ಹೇಳಿದರು.
-ವಿಶ್ವಬ್ಯಾಂಕ್ ಮುಖ್ಯಸ್ಥ

ಭಾರತದಲ್ಲಿ ಬಹಳಷ್ಟು ಬೆಳವಣಿಗೆ



ವರ್ಲ್ಡ್ ಬ್ಯಾಂಕ್ ಕಾರ್ಯಾಚರಣೆಗಳ ವ್ಯವಸ್ಥಾಪಕ ನಿರ್ದೇಶಕ ಅನ್ನಾ ಬ್ಜೆರ್ಡೆ ಅವರು ಬೆಳವಣಿಗೆಯನ್ನು ಉದ್ಯೋಗಗಳಾಗಿ ಪರಿವರ್ತಿಸಲು ಮತ್ತು ಸುಸ್ಥಿರ ಅಭಿವೃದ್ಧಿಗೆ ಬ್ಯಾಂಕ್ ಸರ್ಕಾರವನ್ನು ಬೆಂಬಲಿಸುತ್ತಿದೆ ಎಂದು ತಿಳಿಸಿದರು. ಮಹಿಳೆಯರ ಭಾಗವಹಿಸುವಿಕೆಯ ಮಟ್ಟವನ್ನು ಹೆಚ್ಚಿಸಲು ಭಾರತವು ದೊಡ್ಡ ಸಾಮರ್ಥ್ಯವನ್ನು ಹೊಂದಿರುವುದರಿಂದ ಮಹಿಳಾ ಉದ್ಯೋಗಿಗಳ ಭಾಗವಹಿಸುವಿಕೆಯನ್ನು ಹೆಚ್ಚಿಸುವ ಅಗತ್ಯವನ್ನು ಅವರು ಒತ್ತಿ ಹೇಳಿದರು.

## ಉಗ್ರ ಗುರುಪತ್‌ವಂತ್ ಪನ್ನುನ್ ಹತ್ಯೆ ಸಂಚಿನಲ್ಲಿ ಭಾರತದ ನಿವೃತ್ತ ಅಧಿಕಾರಿ ಪಾತ್ರವಿತ್ತು: ಅಮೆರಿಕ

**ವಾಷಿಂಗ್ಟನ್:** ಪ್ರಧಾನಿ ನರೇಂದ್ರ ಮೋದಿ ಅವರ ಅಮೆರಿಕ ಪ್ರವಾಸದ ಸಮಯದಲ್ಲಿ ಅಮೆರಿಕದ ನೆಲದಲ್ಲಿ ಸಿಖ್ ಪ್ರತ್ಯೇಕತಾವಾದಿ ಗುರುಪತ್‌ವಂತ್ ಸಿಂಗ್ ಪನ್ನುನ್ ಹತ್ಯೆಯ ವಿಫಲ ಸಂಚಿನಲ್ಲಿ ಪಾತ್ರ ವಹಿಸಿದ್ದಕ್ಕಾಗಿ ಭಾರತದ ಮಾಜಿ ಸರ್ಕಾರಿ ಅಧಿಕಾರಿಯೊಬ್ಬರನ್ನು ಯುಎಸ್ ಅಧಿಕಾರಿಗಳು ಆರೋಪಿಸಿದ್ದಾರೆ.

39 ವರ್ಷದ ವಿಕಾಸ್ ಯಾದವ್ ಅವರು ಭಾರತದ ವಿದೇಶಿ ಗುಪ್ತಚರ ಸೇವೆಯನ್ನು ಹೊಂದಿರುವ ಕ್ಯಾಬಿನೆಟ್ ಸೆಕ್ರೆಟರಿಯೇಟ್‌ನಲ್ಲಿ ಉದ್ಯೋಗಿಯಾಗಿದ್ದರು, ರಿಸರ್ಚ್ ಅಂಡ್ ಅನಾಲಿಸಿಸ್ ವಿಂಗ್ (ರಾ), ಫೆಡರಲ್ ಪ್ರಾಸಿಕ್ಯೂಟರ್‌ಗಳು ನ್ಯೂಯಾರ್ಕ್‌ನ ಯುಎಸ್ ನ್ಯಾಯಾಲಯದಲ್ಲಿ ಸಲ್ಲಿಸಿದ ದೋಷಾರೋಪಣೆಯಲ್ಲಿ ಪ್ರತಿಪಾದಿಸಿದ್ದಾರೆ.

ಪನ್ನುನ್‌ನನ್ನು ಕೊಲ್ಲಲು ವಿಫಲವಾದ ಸಂಚನ್ನು ನಿರ್ದೇಶಿಸುವಲ್ಲಿನ ಪಾತ್ರಕ್ಕೆ ಸಂಬಂಧಿಸಿದಂತೆ ಯಾದವ್ ಬಾಡಿಗೆಗೆ ಕೊಲೆ ಮತ್ತು ಹಣ ವರ್ಗಾವಣೆ ಆರೋಪಗಳನ್ನು ಎದುರಿಸುತ್ತಾನೆ. ಅವರು ವಿಶಾಲವಾಗಿ ಉಳಿದಿದ್ದಾರೆ ಎಂದು ನ್ಯಾಯಾಂಗ ಇಲಾಖೆ ಹೇಳಿದೆ. ಮೊದಲ ದೋಷಾರೋಪ ಪಟ್ಟಿಯಲ್ಲಿ ಯಾದವ್ ಅವರನ್ನು ಸಹ-ಸಂಚುಕೋರ ಎಂದು ಮಾತ್ರ ಗುರುತಿಸಲಾಗಿತ್ತು.



ಗುರುವಾರ ಹೊಸದಿಲ್ಲಿಯಲ್ಲಿ, ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಅವರು ಪ್ರಕರಣಕ್ಕೆ ಸಂಬಂಧಿಸಿದಂತೆ ಯುಎಸ್ ಡಿಪಾರ್ಟ್‌ಮೆಂಟ್ ಆಫ್ ಜಸ್ಟಿಸ್ (ಡಿಒಜೆ) ದೋಷಾರೋಪಣೆಯಲ್ಲಿ ಗುರುತಿಸಲಾದ ವ್ಯಕ್ತಿಯ ಕುರಿತಾದ ಪ್ರಶ್ನೆಗೆ ಪ್ರತಿಕ್ರಿಯಿಸುತ್ತಾ, ಆ ವ್ಯಕ್ತಿಯು ಇನ್ನು ಮುಂದೆ ಉದ್ಯೋಗಿ ಅಲ್ಲ ಎಂದು ದಢಪಡಿಸಿದ್ದರು.

ಅವರ ಸಹ-ಸಂಚುಕೋರ ನಿಖಿಲ್ ಗುಪ್ತಾ ಕಳೆದ ವರ್ಷ ಜೆಕ್ ರಿಪಬ್ಲಿಕ್‌ನಲ್ಲಿ ಬಂಧಿಸಲ್ಪಟ್ಟರು ಮತ್ತು ಹಸ್ತಾಂತರದ ನಂತರ ಯುಎಸ್ ಜೈಲಿನಲ್ಲಿ ಕೊಳೆಯುತ್ತಿದ್ದಾರೆ.

ಪ್ರತಿವಾದಿ, ಭಾರತೀಯ ಸರ್ಕಾರಿ ಉದ್ಯೋಗಿ, ಕ್ರಿಮಿನಲ್ ಸಹವರ್ತಿಯೊಂದಿಗೆ ಸಂಚು ಹೂಡಿದ್ದಾರೆ ಮತ್ತು ಅವರ ಮೊದಲ ತಿದ್ದುಪಡಿ ಹಕ್ಕುಗಳನ್ನು ಚಲಾಯಿಸಲು ಅಮೆರಿಕಾದ ನೆಲದಲ್ಲಿ ಯುಎಸ್ ಪ್ರಜೆಯನ್ನು ಹತ್ಯೆ ಮಾಡಲು ಪ್ರಯತ್ನಿಸಿದ್ದಾರೆ ಎಂದು ಎಫ್‌ಬಿಐ ನಿರ್ದೇಶಕ ಕ್ರಿಸ್ಟೋಫರ್ ವ್ರೇ ಹೇಳಿದ್ದಾರೆ.

ಇಂದಿನ ಆರೋಪಗಳು ನ್ಯಾಯಾಂಗ ಇಲಾಖೆಯು ಅಮೆರಿಕನ್ನರನ್ನು ಗುರಿಯಾಗಿಸುವ ಮತ್ತು ಅಪಾಯಕ್ಕೆ ಸಿಲುಕಿಸುವ ಪ್ರಯತ್ನಗಳನ್ನು ಸಹಿಸುವುದಿಲ್ಲ ಮತ್ತು ಪ್ರತಿ ನಾಗರಿಕರಿಗೆ ಅರ್ಹವಾಗಿರುವ ಹಕ್ಕುಗಳನ್ನು ದುರ್ಬಲಗೊಳಿಸುವ ಪ್ರಯತ್ನಗಳನ್ನು ಸಹಿಸುವುದಿಲ್ಲ ಎಂದು ಯುಎಸ್ ಅಟಾರ್ನಿ ಜನರಲ್ ಮೆರಿಕ್ ಬಿ ಗಾರ್ಲ್ಯಾಂಡ್ ಹೇಳಿದರು.

## ಜಮ್ಮು ಕಾಶ್ಮೀರ ರಾಜ್ಯ ಸ್ಥಾನಮಾನಕ್ಕೆ ಸಂಪುಟ ನಿರ್ಣಯ

**ಶ್ರೀನಗರ:** ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ನೇತೃತ್ವದ ಜಮ್ಮು ಮತ್ತು ಕಾಶ್ಮೀರ ಸಚಿವ ಸಂಪುಟ ರಾಜ್ಯ ಸ್ಥಾನಮಾನ ಮರುಸ್ಥಾಪನೆಗೆ ನಿರ್ಣಯವನ್ನು ಅಂಗೀಕರಿಸಿದೆ. ನಿನ್ನೆ ನಡೆದ ತನ್ನ ಮೊದಲ ಸಭೆಯಲ್ಲಿ ಕ್ಯಾಬಿನೆಟ್ ರಾಜ್ಯತ್ವವನ್ನು ಪುನಃಸ್ಥಾಪಿಸಲು ಕೇಂದ್ರ ಸರ್ಕಾರವನ್ನು ಒತ್ತಾಯಿಸುವ ನಿರ್ಣಯವನ್ನು ಅಂಗೀಕರಿಸಿತು ಎಂದು ಅಧಿಕತ ಮೂಲಗಳು ತಿಳಿಸಿವೆ.

ನಿರ್ಣಯದ ಕರಡನ್ನು ಸಿದ್ಧಪಡಿಸಲಾಗಿದ್ದು, ಜಮ್ಮು ಕಾಶ್ಮೀರ ರಾಜ್ಯ ಸ್ಥಾನಮಾನವನ್ನು ಮರುಸ್ಥಾಪಿಸುವಂತೆ ಒತ್ತಾಯಿಸಿ ನಿರ್ಣಯದ ಕರಡನ್ನು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಹಸ್ತಾಂತರಿಸಲು ಮುಖ್ಯಮಂತ್ರಿಗಳು ಒಂದೆರಡು ದಿನಗಳಲ್ಲಿ ನವದೆಹಲಿಗೆ ತೆರಳಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಉಪಮುಖ್ಯ ಮಂತ್ರಿ ಸುರೀಂದರ್ ಚೌಧರಿ , ಸಚಿವರಾದ ಸಕೀನಾ ಮಸೂದ್ ಇಟೂ, ಜಾವೇದ್ ಅಹದ್ ರಾಣಾ, ಜಾವ್ಯೆದ್ ಅಹದ್ ದಾರ್ ಮತ್ತು ಸತೀಶ್ ಶರ್ಮಾ ಉಪಸ್ಥಿತರಿದ್ದರು. ಕಾಂಗ್ರೆಸ್ ಜೆಕೆಪಿಸಿಸಿ ಅಧ್ಯಕ್ಷ ತಾರಿಕ್ ಹಮೀದ್ ಕರಾರ್ ಅವರು ರಾಜ್ಯ ಸ್ಥಾನಮಾನವನ್ನು ಪುನಃಸ್ಥಾಪಿಸದ ಹೊರತು ಪಕ್ಷವು ಜೆಕೆ ಕ್ಯಾಬಿನೆಟ್‌ಗೆ ಸೇರುವುದಿಲ್ಲ ಎಂದು ಸುದ್ದಿಗಾರರಿಗೆ ತಿಳಿಸಿದ್ದರು.

ಎನ್‌ಸಿ ಅಧ್ಯಕ್ಷ ಫಾರೂಕ್ ಅಬ್ದುಲ್ಲಾ ಅವರು ಕೇಂದ್ರವು ಶೀಘ್ರದಲ್ಲೇ ರಾಜ್ಯತ್ವವನ್ನು ಮರುಸ್ಥಾಪಿಸುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ನಾವು ಮೊದಲು ರಾಜ್ಯತ್ವದ ಬಗ್ಗೆ ಮಾತನಾಡಿದ್ದೇವೆ ಮತ್ತು ಇಂದಿಗೂ ಸಹ, ಎರಡು ತಿಂಗಳೊಳಗೆ ರಾಜ್ಯತ್ವವನ್ನು ಮರುಸ್ಥಾಪಿಸಲು ಕೋರಿ ಸಲ್ಲಿಸಲಾದ ಅರ್ಜಿಯ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ಒಪ್ಪಿಕೊಂಡಿದೆ.

ಭಾರತ ಸರ್ಕಾರವು ಅದನ್ನು ಶೀಘ್ರದಲ್ಲೇ ಮರುಸ್ಥಾಪಿಸುತ್ತದೆ ಎಂದು ನನಗೆ ಖಾತ್ರಿಯಿದೆ ಎಂದು ಅಬ್ದುಲ್ಲಾ ಹೇಳಿದರು.



## ಬಾಬಾ ಸಿದ್ದಿಕಿ ರೀತಿ ಹತ್ಯೆ ಮಾಡುವುದಾಗಿ ಬೆದರಿಕೆ

**ಜೈಪುರ:** ರಾಜಸ್ಥಾನದ ಮಾಜಿ ಬಿಜೆಪಿ ಶಾಸಕಿ ಅಮೃತಾ ಮೇಘವಾಲ್ ಅವರು ತಮ ವಾಟ್ಸಾಪ್‌ನಲ್ಲಿ ಜೀವ ಬೆದರಿಕೆಯ ಜೊತೆಗೆ ಅಶ್ಲೀಲ ಸಂದೇಶಗಳನ್ನು ಸ್ವೀಕರಿಸಿದ ಹಿನ್ನೆಲೆಯಲ್ಲಿ ಜೈಪುರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಕಳೆದ ಕೆಲವು ದಿನಗಳಿಂದ ನನಗೆ ಅಶ್ಲೀಲ ಸಂದೇಶಗಳು ಬರುತ್ತಿದ್ದು, ಕೊಲೆ ಬೆದರಿಕೆ ಕೂಡ ಹಾಕಲಾಗಿದೆ, ನಾನು ಜೈಪುರ ಪೊಲೀಸ್ ಆಯುಕ್ತರಿಗೆ ವರದಿ ನೀಡಿದ್ದೇನೆ ಎಂದು ಮಾಜಿ ಶಾಸಕರು ತಿಳಿಸಿದ್ದಾರೆ. ನಾನು ಮತ್ತೆ ನಂಬರ್‌ಗೆ ಕರೆ ಮಾಡಿದಾಗ, ಅವನು ನಿಂದಿಸಲು ಪ್ರಾರಂಭಿಸಿದನು.



ನಾನು ಅವನಿಗೆ ಪೊಲೀಸ್ ದೂರು ನೀಡುವುದಾಗಿ ಬೆದರಿಕೆ ಹಾಕಿದಾಗ, ಅವನು ನನಗೆ ಭಯಂಕರ ಪರಿಣಾಮ ಬೀರುವ ಬೆದರಿಕೆ ಹಾಕಿದನು.

ಅವನು ಬಾಬಾ ಸಿದ್ದಿಕ್‌ನಂತೆ ನಿನ್ನನ್ನು ಮುಗಿಸುತ್ತೇನೆ ಎಂದು ಬೆದರಿಕೆ ಹಾಕಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.ಈ ಹಿಂದೆಯೂ ತನಗೆ ಇಂತಹ ಬೆದರಿಕೆ ಕರೆಗಳು ಬರುತ್ತಿದ್ದು, ಈ ಕುರಿತು ಸೋದಲ ಪೊಲೀಸ್ ಠಾಣೆಗೆ ದೂರು ನೀಡಿರುವುದಾಗಿ ತಿಳಿಸಿದ್ದಾರೆ. ಅಮತಾ ಮೇಘವಾಲ್ ಅವರ ಮೇಲೆ 2021 ಮತ್ತು 2022 ರಲ್ಲಿ ಎರಡು ಬಾರಿ ದಾಳಿ ನಡೆದಿದ್ದು, ಈ ಪ್ರಕರಣಕ್ಕೆ ಸಂಬ ಂಧಿಸಿದಂತೆ ಜೈಪುರದ ಟ್ರಾನ್ಸ್‌ಪೋರ್ಟ್ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದರು.

ಸಚಿವ ಜವಾಹರ್ ಸಿಂಗ್ ಬೇಧಮ್ ಕೂಡ ಪೊಲೀಸ್ ಆಯುಕ್ತರಿಗೆ ಪತ್ರ ಬರೆದು ಈ ಬಗ್ಗೆ ತಕ್ಷಣ ಕ್ರಮಕ್ಕೆಗೊಳ್ಳುವಂತೆ ಆಗ್ರಹಿಸಿದ್ದಾರೆ. ಅಮತಾ ಮೇಘವಾಲ್ (39) ಬಿಜೆಪಿ ಟಿಕೆಟ್‌ನಲ್ಲಿ 2013 ರಿಂದ 2018 ರವರೆಗೆ ಜಲೋರ್ ವಿಧಾನಸಭಾ ಕ್ಷೇತ್ರದಿಂದ ಶಾಸಕರಾಗಿದ್ದರು. ಅವರು 46,800 ಮತಗಳ ಅಂತರದಿಂದ ಕಾಂಗ್ರೆಸ್‌ನ ರಾಮ್‌ಲಾಲ್ ಅವರನ್ನು ಸೋಲಿಸಿದರು.

2018 ರಲ್ಲಿ, ಅವರ ಪತಿ ಬಾಬುಲಾಲ್ ಆರ್ಥಿಕ ಅಕ್ರಮಗಳ ಆರೋಪದ ನಂತರ, ಪಕ್ಷವು ಅಮತಾ ಮೇಘವಾಲ್ ಅವರ ಟಿಕೆಟ್ ಅನ್ನು ತಡೆಹಿಡಿದು ಜೋಗೇಶ್ವರ್ ಗಾರ್ಗ್ ಅವರಿಗೆ ನೀಡಿತು.

## ಛತ್ರಪತಿ ಶಿವಾಜಿ ಪ್ರತಿಮೆ ಕುಸಿತಕ್ಕೆ ಕಾರಣರಾಗಿದ್ದ ವ್ಯಕ್ತಿ ಬಂಧನ



**ಮುಂಬೈ:** ಮಹಾರಾಷ್ಟ್ರದ ಸಿಂಧುದುರ್ಗ ಜಿಲ್ಲೆಯ ಕೋಟೆಯೊಂದರಲ್ಲಿ ಇತ್ತೀಚೆಗೆ ಕುಸಿದು ಬಿದ್ದ ಛತ್ರಪತಿ ಶಿವಾಜಿ ಮಹಾರಾಜರ ಪ್ರತಿಮೆಯನ್ನು ನಿರ್ಮಿಸಿದ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ. ಉತ್ತರ ಪ್ರದೇಶದಿಂದ ಬಂಧಿತರಾಗಿರುವ ಫ್ಯಾಬ್ರಿಕೇಟರ್ ಪರಮೇಶ್ವರ ರಾಮನರೇಶ್ ಯಾದವ್ ಅವರು ಮರಾಠಾ ಯೋಧ ರಾಜನ 35 ಅಡಿ ಎತ್ತರದ ಪ್ರತಿಮೆಯನ್ನು ರೂಪಿಸುವಾಗ ಗುಣಮಟ್ಟವಿಲ್ಲದ ವಸ್ತುಗಳನ್ನು ಬಳಸಿದ್ದಾರೆ ಎಂದು ಆರೋಪಿಸಲಾಗಿದೆ.

ಯುಪಿಯ ಮಿರ್ಜಾಪುರದ ನಿವಾಸಿಯಾಗಿರುವ ಯಾದವ್ ಪ್ರತಿಮೆ ಕುಸಿತದಲ್ಲಿ ಅವರ ಪಾತ್ರ ಬೆಳಕಿಗೆ ಬಂದ ನಂತರ ಅವರನ್ನು ಬಂಧಿಸಲಾಗಿದೆ. ಪ್ರತ್ಯೇಕ ಭಾಗಗಳನ್ನು ಬೆಸುಗೆ ಹಾಕಿ ಶಿವಾಜಿ ಪ್ರತಿಮೆಯನ್ನು ರಚಿಸುವ ಜವಾಬ್ದಾರಿಯನ್ನು ಯಾದವ್ ಅವರಿಗೆ ವಹಿಸಲಾಗಿತ್ತು ಎಂದು ಅವರು ಹೇಳಿದರು.

ರಚನೆಯನ್ನು ರೂಪಿಸಲು ಕೆಳಮಟ್ಟದ ವಸ್ತುಗಳ ಬಳಕೆ

ರಚನೆಯನ್ನು ರೂಪಿಸಲು ತಯಾರಕರು ಕೆಳಮಟ್ಟದ ವಸ್ತುಗಳನ್ನು ಬಳಸಿದ್ದಾರೆ ಮತ್ತು ವೆಲ್ಡಿಂಗ್ ಮೂಲಕ ಭಾಗಗಳನ್ನು ಸರಿಯಾಗಿ ಜೋಡಿಸಲಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

ತಾಂತ್ರಿಕ ವಿಶ್ಲೇಷಣೆಯ ವೇಳೆ ಕುಸಿದ ಉಕ್ಕಿನ ಪ್ರತಿಮೆ ಕೆಲವೆಡೆ ತುಕ್ಕು ಹಿಡಿದಿರುವುದು ಕಂಡುಬಂದಿದ್ದು, ಕಡಿಮೆ ಗುಣಮಟ್ಟದ ವಸ್ತುಗಳ ಬಳಕೆಯಾಗಿದೆ ಎಂದು ಅವರು ಹೇಳಿದರು.

ಪ್ರಕರಣದಲ್ಲಿ ಆತನ ಪಾತ್ರ ದಢಪಟ್ಟ ನಂತರ, ಯಾದವ್ ಅವರನ್ನು ಕೂಡ ಆರೋಪಿಯನ್ನಾಗಿ ಮಾಡಲಾಯಿತು ಮತ್ತು ನಂತರ ಬಂಧಿಸಲಾಯಿತು. ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು, ಮೂರು ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ನೀಡಲಾಗಿದೆ.

ಕಳೆದ ವರ್ಷ ಡಿಸೆಂಬರ್ 4 ರಂದು (ನೌಕಾಪಡೆಯ ದಿನ) ಸಿಂಧುದುರ್ಗ ಜಿಲ್ಲೆಯ ಮಾಲ್ವಾನ್ ತೆಹಸಿಲ್‌ನಲ್ಲಿರುವ ರಾಜ್‌ಕೋಟ್ ಕೋಟೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಅನಾವರಣಗೊಳಿಸಿದ್ದ 17 ನೇ ಶತಮಾನದ ಮರಾಠ ಸಾಮ್ರಾಜ್ಯದ ಸಂಸ್ಥಾಪಕರ ಪ್ರತಿಮೆಯು ಬಲವಾದ ಗಾಳಿಯ ನಡುವೆ ಆಗಸ್ಟ್ 26 ರಂದು ಕುಸಿದು ಬಿದ್ದಿತು. ಪ್ರತಿಮೆಯ ಶಿಲ್ಪಿ-ಗುತ್ತಿಗೆದಾರ ಜಯದೀಪ್ ಆಪ್ಟೆ ಮತ್ತು ಸಲಹೆಗಾರ ಚೇತನ್ ಪಾಟೀಲ್ ಅವರನ್ನು ನಂತರ ಬಂಧಿಸಲಾಗಿತ್ತು.

# ಇಬ್ಬರು ಭಾರತೀಯ ಉದ್ಯಮಿಗಳಿಗೆ ಅಮೆರಿಕ ಆರ್ಥಿಕ ನಿರ್ಬಂಧ

● ಇಬ್ಬರು ಭಾರತೀಯರು ಶಾರ್ಜಾ ಮೂಲದ ಇಂಡೋ ಗಲ್ಫ್ ಹಡಗು ನಿರ್ವಹಣೆ ಸಂಸ್ಥೆಯ ಉನ್ನತಾಧಿಕಾರಿಗಳು

**ನ್ಯೂಯಾರ್ಕ್:** ಯಮನ್ ದೇಶದ ಹೌತಿ ಉಗ್ರ ಸಂಘಟನೆ ಜೊತೆ ನಂಟು ಹೊಂದಿರುವ ಆರೋಪದ ಮೇಲೆ ಇಬ್ಬರು ಭಾರತೀಯರಿಗೆ ಅಮೆರಿಕ ನಿರ್ಬಂಧ ವಿಧಿಸಿದೆ. ಇರಾನ್‌ನಿಂದ ಪೆಟ್ರೋಲಿಯಂ ಕಚ್ಚಾ ತೈಲ ಖರೀದಿ ಮಾಡಿ ಆ ಹಣವನ್ನು ಹೌತಿ ಉಗ್ರ ಸಂಘಟನೆಗೆ ನೀಡಲಾಗುತ್ತಿದೆ. ಇದೇ ಬಲದಿಂದ ಹೌತಿ ಉಗ್ರ ಸಂಘಟನೆ ಕೆಂಪು ಸಮುದ್ರ ಪ್ರಾಂತ್ಯದಲ್ಲಿ ಸರಕು ಸಾಗಣೆ ಹಡಗುಗಳ ಸಾಗಾಟಕ್ಕೆ ಅಡ್ಡಿ ಪಡಿಸುವ ಜೊತೆಯಲ್ಲೇ ಇಸ್ರೇಲ್ ಮೇಲೆ ದಾಳಿ ನಡೆಸುತ್ತಿದೆ ಎಂದು ಅಮೆರಿಕ ಆಪಾದಿಸಿದೆ.

ಅಮೆರಿಕದ ಖಜಾನೆ ಇಲಾಖೆ ನೀಡಿರುವ ಮಾಹಿತಿ ಪ್ರಕಾರ, ಅಮೆರಿಕದಿಂದ ಆರ್ಥಿಕ ನಿರ್ಬಂಧದ ಶಿಕ್ಷೆಗೆ ಗುರಿಯಾಗಿರುವ ಇಬ್ಬರು ಭಾರತೀಯರು ಶಾರ್ಜಾ ಮೂಲದ ಇಂಡೋ ಗಲ್ಫ್ ಹಡಗು ನಿರ್ವಹಣೆ ಸಂಸ್ಥೆಯ ಉನ್ನತಾಧಿಕಾರಿಗಳು. ಐಸಿಎಸ್‌ಎಂ ಎಂಬ ಈ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ, ರಾಹುಲ್ ರತನ್ ಲಾಲ್ ವಾರಿಕೂ ರತನ್‌ಲಾಲ್ ಹಾಗೂ ಇದೇ ಸಂಸ್ಥೆಯ ತಾಂತ್ರಿಕ ಮ್ಯಾನೇಜರ್ ದೀಪಂಕರ್ ಮೋಹನ್ ಕಿಯೋಟ್ ಅವರಿಗೆ ಅಮೆರಿಕ ನಿರ್ಬಂಧ ಹೇರಿದೆ.



ಅಮೆರಿಕ ಹೇರಿರುವ ನಿರ್ಬಂಧದ ಅನ್ವಯ ಇಬ್ಬರೂ ಉದ್ಯಮಿಗಳು ಅಮೆರಿಕದಲ್ಲಿ ಹೊಂದಿದ್ದ ಎಲ್ಲಾ ಆಸ್ತಿಗಳನ್ನೂ ಸರ್ಕಾರ ತನ್ನ ವಶಕ್ಕೆ ತೆಗೆದುಕೊಂಡಿದೆ. ಜೊತೆಯಲ್ಲೇ ಇಬ್ಬರೂ ಉದ್ಯಮಿಗಳು ಶೇ. 50ಕ್ಕಿಂತಲೂ ಹೆಚ್ಚು ಪಾಲುದಾರಿಕೆ ಹೊಂದಿರುವ ಆಸ್ತಿಗಳನ್ನೂ ಅಮೆರಿಕ ಸರ್ಕಾರ ತನ್ನ ವಶಕ್ಕೆ ಪಡೆದಿದೆ.

ಹೌತಿ ಸಂಘಟನೆಯ ಸೈದ್ ಅಲ್ - ಜಮಾಲ್ ಸಾಕಷ್ಟು ತೈಲ ಸಾಗಣೆ ಹಡಗುಗಳನ್ನ ತನ್ನ ಸಂಪರ್ಕ ಜಾಲದಲ್ಲಿ ಹೊಂದಿದ್ದಾನೆ. ಈ ಹಡಗುಗಳು ಇರಾನ್‌ನ ಪೆಟ್ರೋಲಿಯಂ ಕಚ್ಚಾ ತೈಲವನ್ನು ಸಾಗಾಟ ಮಾಡುತ್ತವೆ. ಈ ತೈಲ ಸಾಗಾಟದ ನಿರ್ವಹಣೆಯನ್ನು ಭಾರತೀಯರ ಮಾಲೀಕತ್ವದ ಸಂಸ್ಥೆ ಹೊಂದಿತ್ತು ಎಂದು ಅಮೆರಿಕದ ಖಜಾನೆ ಇಲಾಖೆ ಆಪಾದಿಸಿದೆ.

■ ಇಬ್ಬರು ಭಾರತೀಯರು ಶಾರ್ಜಾ ಮೂಲದ ಇಂಡೋ ಗಲ್ಫ್ ಹಡಗು ನಿರ್ವಹಣೆ ಸಂಸ್ಥೆಯ ಉನ್ನತಾಧಿಕಾರಿಗಳು
■ ಐಸಿಎಸ್‌ಎಂ ಎಂಬ ಈ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ರಾಹುಲ್ ರತನ್ ಲಾಲ್ ವಾರಿಕೂ ರತನ್‌ಲಾಲ್
■ ಇದೇ ಸಂಸ್ಥೆಯ ತಾಂತ್ರಿಕ ಮ್ಯಾನೇಜರ್ ದೀಪಂಕರ್ ಮೋಹನ್ ಕಿಯೋಟ್ ಅವರಿಗೆ ಅಮೆರಿಕ ನಿರ್ಬಂಧ

### ಸೇನೆಯ ಜೊತೆ ನೇರ ನಂಟು

ಹೌತಿ ಭಯೋತ್ಪಾದಕ ಸಂಘಟನೆಯ ಆರ್ಥಿಕ ಕಾರ್ಯ ನಿರ್ವಾಹಕ ಸೈದ್ ಅಲ್ - ಜಮಾಲ್ ಎಂಬಾತನ ಜೊತೆಗೆ ಇಬ್ಬರೂ ಭಾರತೀಯರು ನಂಟು ಹೊಂದಿರೋದು ಸಾಬೀತಾಗಿದೆ ಎಂದು ಅಮೆರಿಕ ಗೃಹ ಇಲಾಖೆ ವಕ್ತಾರ ಮ್ಯಾಥ್ಯೂ ಮಿಲ್ಲರ್ ಅವರು ಮಾಹಿತಿ ನೀಡಿದ್ದಾರೆ. ಹೌತಿ ಸಂಘಟನೆಯ ಸೈದ್ ಅಲ್ - ಜಮಾಲ್, ಇರಾನ್‌ನ ಇಸ್ಲಾಮಿಕ್ ರೆವೆಲ್ಯೂಷನರಿ ಗಾರ್ಡ್ ಸೇನೆಯ ಜೊತೆ ನೇರ ನಂಟು ಹೊಂದಿದ್ದಾನೆ.

ಹೌತಿ ಉಗ್ರ ಸಂಘಟನೆ ಜೊತೆ ನಂಟು

ಈ ತೈಲ ಸಾಗಾಟದಿಂದ ಹಾಗೂ ಮಾರಾಟದಿಂದ ಕೋಟ್ಯಂತರ ರೂ. ಹಣವನ್ನು ಸಂಸ್ಥೆ ಗಳಿಸುತ್ತಿದ್ದು, ಇದರಲ್ಲಿ ಬಹುಪಾಲು ಹಣ ಹೌತಿ ಉಗ್ರ ಸಂಘಟನೆ ಕೈ ಸೇರುತ್ತಿದೆ ಎಂದು ಅಮೆರಿಕ ತಿಳಿಸಿದೆ.

ಗಲ್ಫ್ ರಾಷ್ಟ್ರಗಳಲ್ಲಿ ತನ್ನ ನೆಲೆ ಹೊಂದಿರುವ ಭಾರತೀಯ ಮೂಲದ ರತನ್ ಲಾಲ್ ತಮ್ಮ ಐಸಿಎಸ್‌ಎಂ ಸಂಸ್ಥೆಯನ್ನು ಮುನ್ನಡೆಸುತ್ತಿದ್ದಾರೆ. ಈತ ಭಾರತ ಹಾಗೂ ಯುಎಇ ದೇಶಗಳ ನಡುವೆ ಓಡಾಟ ನಡೆಸುತ್ತಿದ್ದಾನೆ. ಜೊತೆಯಲ್ಲೇ ಅಮೆರಿಕ ಮೂಲದ ಸೇಫ್ ಸೀಸ್ ಶಿಪ್ಟ್ ಮ್ಯಾನೇಜ್‌ಮೆಂಟ್ ಸೇರಿದಂತೆ ಹಲವು ಕಂಪನಿಗಳ ಜೊತೆಗೂ ಒಡನಾಟ ಇಟ್ಟುಕೊಂಡಿದ್ದಾನೆ ಎಂದು ಅಮೆರಿಕ ಆಪಾದಿಸಿದೆ. ಈತ ಇರಾನ್, ಹೌತಿ ಸಂಪರ್ಕ ಜಾಲಕ್ಕೆ ತೈಲ ಮಾರಾಟದ ಮೂಲಕ ಹಣ ಸಂಗ್ರಹಿಸಿಕೊಡುವ ಕೆಲಸ ಮಾಡುತ್ತಿದ್ದಾನೆ ಅನ್ನೋದು ಅಮೆರಿಕ ಆರೋಪದ ಸಾರಾಂಶ.

## ಮಿನಿ ನ್ಯೂಸ್

### 1 ಕೋಟಿ ಮೌಲ್ಯದ ಹೆರಾಯಿನ್ ವಶ

**ಚಂಡೀಗಢ:** ಪಾಕಿಸ್ತಾನ ಮೂಲದ ಕಾರ್ಯಕರ್ತರೊಂದಿಗೆ ಸಂಪರ್ಕ ಹೊಂದಿದ್ದ ಮಾದಕವಸ್ತು ಕಳ್ಳಸಾಗಣೆದಾರನೊಬ್ಬರನ್ನು ಪಂಜಾಬ್ ಪೊಲೀಸರು ಬಂಧಿಸಿ ಒಂದು ಕಿಲೋಗ್ರಾಂಗೂ ಹೆಚ್ಚು ಮೌಲ್ಯದ ಹೆರಾಯಿನ್ ವಶಪಡಿಸಿ ಕೊಂಡಿದ್ದಾರೆ.

ಗಡಿಯಾಚೆಗಿನ ಕಳ್ಳಸಾಗಣೆ ಜಾಲಗಳ ವಿರುದ್ಧ ಪ್ರಮುಖ ಪ್ರಗತಿಯಲ್ಲಿ, ಪಠಾಣ್‌ಕೋಟ್ ಕೌಂಟರ್ ಇಂಟೆಲಿಜೆನ್ಸ್, ಗುರುದಾಸ್‌ಪುರ ಪೊಲೀಸರ ಜಂಟಿ ಕರ್ಯಾಚರಣೆಯಲ್ಲಿ ಒಬ್ಬ ವ್ಯಕ್ತಿಯನ್ನು ಬಂಧಿಸಿ ಕಳ್ಳಸಾಗಣೆದಾರನ ವಶದಿಂದ 1.350 ಕೆಜಿ ಹೆರಾಯಿನ್ ವಶಪಡಿಸಿಕೊಂಡಿದ್ದಾರೆ ಎಂದು ಪೊಲೀಸ್ ಮಹಾನರ ದೇಶಕ ಗೌರವ್ ಯಾದವ್ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

ಬಂಧಿತ ವ್ಯಕ್ತಿ, ಪಾಕಿಸ್ತಾನ ಮೂಲದ ಕಾರ್ಯಕರ್ತರನ್ನ ಹೊಂದಿದ್ದು, ಭಾರತಕ್ಕೆ ಮಾದಕವಸ್ತು ಕಳ್ಳಸಾಗಣೆ ಮಾಡಲು ಡ್ರೋನ್‌ಗಳನ್ನು ಬಳಸಿದ್ದು, ಈ ಪ್ರಕರಣದಲ್ಲಿ ಹೆಚ್ಚಿನ ಬಂಧನವಾಗುವ ಸಾಧ್ಯತೆಯಿದೆ ಎಂದು ಅವರು ಹೇಳಿದರು. ಎಫ್‌ಐಆರ್ ದಾಖ ಲಾಗಿದ್ದು, ತನಿಖೆ ನಡೆಯುತ್ತಿದೆ ಎಂದು ಡಿಜಿಪಿ ತಿಳಿಸಿದ್ದಾರೆ

### ಮನೆಗೆ ಬೆಂಕಿ ಬಿದ್ದು ಇಬ್ಬರು ಸಾವು

**ನವದೆಹಲಿ:** ಮನೆಗೆ ಬೆಂಕಿ ಹೊತ್ತಿಕೊಂಡು ಇಬ್ಬರು ಸಾವನ್ನಪ್ಪಿರುವ ಘಟನೆ ಮುಂಜಾನೆ ಶಹದಾರಾ ಪ್ರದೇಶದಲ್ಲಿ ನಡೆದಿದೆ. ಬೆಳಿಗ್ಗೆ 5.25 ಕ್ಕೆ ಮನೆಗೆ ಬಿಂಕಿ ಬಿದ್ದಿರುವ ಬಗ್ಗೆ ಮಾಹಿತಿ ಪಡೆದು ಸ್ಥಳಕ್ಕೆ ಆರು ಅಗ್ನಿಶಾಮಕ ವಾಹನ ತೆರಳಿ ಬೆಂಕಿ ನಂದಿಸಲಾಗಿದೆ ಎಂದು ದೆಹಲಿ ಅಗ್ನಿಶಾಮಕ ಸೇವೆ (ಡಿಎಫ್‌ಎಸ್) ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಅಗ್ನಿಶಾಮಕ ಸಿಬ್ಬಂದಿ ಕಾರ್ಯಾಚರಣೆ ವೇಳೆ ಕಟ್ಟಡದ ಒಳಗಿದ್ದ ಇಬ್ಬರು ಮಕ್ಕಳನ್ನು ರಕ್ಷಿಸಲಾಗಿದೆ. 6 ಹಂತಸ್ತಿನ ಕಟ್ಟಡದ ಮೂರು ಮತ್ತು ನಾಲ್ಕನೇ ಮಹಡಿಯಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಎರಡು ಗಂಟೆಗಳಲ್ಲಿ ಸತತ ಶ್ರಮದ ನಂತರ ಬೆಂಕಿ ನಿಯಂತ್ರಣಕ್ಕೆ ಬಂದಿದೆ ಎಂದು ಅಧಿಕಾರಿ ತಿಳಿಸಿದ್ದಾರೆ. ಮನೆಯೊಳಗಿಂದ ಎರಡು ಶವಗಳನ್ನು ಹೊರತೆಗೆಯಲಾಗಿದೆ, ಅವುಗಳನ್ನು ಶವಾಗಾರಕ್ಕೆ ಸ್ಥಳಾಂತರಿಸಲಾಗಿದೆ ಎಂದು ಅವರು ಹೇಳಿದರು, ಮಕ್ಕಳನ್ನು ಸಹ ಆಸ್ಪತ್ರೆಗೆ ದಾಖಲಿಸಲಾಗಿದೆ. ಬೆಂಕಿ ಅನಾಹುತಕ್ಕೆ ಶಾರ್ಟ್ ಸಕ್ಯೂಯೂಟ್ ಕಾರಣ ಎಂದು ಶಂಕಿಸಲಾಗಿದೆ ಆದರೆ ಪೊಲೀಸರು ಈ ಬಗ್ಗೆ ತನಿಖೆ ನಡೆಸುತ್ತಿದ್ದಾರೆ ಎಂದು ಅವರು ಹೇಳಿದರು.

### ಆರ್‌ಎಸ್‌ಎಸ್ ಕಾರ್ಯಕರ್ತರ ಮೇಲೆ ದುಷ್ಕರ್ಮಿಗಳ ದಾಳಿ, 10 ಮಂದಿ ಗಾಯ

**ಜೈಪುರ:** ಇಲ್ಲಿನ ದೇವಸ್ಥಾನವೊಂದರಲ್ಲಿ ಧಾರ್ಮಿಕ ಕಾರ್ಯಕ್ರಮದ ವೇಳೆ ದುಷ್ಕರ್ಮಿಗಳು ದಾಳಿ ಮಾಡಿದ ಹಿನ್ನಲೆಯಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘ (ಆರ್‌ಎಸ್‌ಎಸ್)ಗೆ ಸೇರಿದ ಹತ್ತು ಮಂದಿ ಗಾಯಗೊಂಡಿದ್ದಾರೆ.

ಶರದ್ ಪೂರ್ಣಿಮೆ ನಿಮಿತ್ತ ದೇವಸ್ಥಾನದಲ್ಲಿ ಜಾಗ್ರಣ ಕಾರ್ಯಕ್ರಮ ನಡೆಯುತ್ತಿತ್ತು. ಭಕ್ತಾದಿಗಳಿಗೆ ಪ್ರಸಾದ ವಿನಿಯೋಗ ಮಾಡುತ್ತಿದ್ದಾಗ ಅಕ್ಕಪಕ್ಕದ ಇಬ್ಬರು ವ್ಯಕ್ತಿಗಳು ತಡರಾತ್ರಿ ಕಾರ್ಯಕ್ರಮ ನಡೆಸಲು ಆಕ್ಷೇಪ ವ್ಯಕ್ತಪಡಿಸಿದರು. ಈ ವಿಷಯದ ಬಗ್ಗೆ ವಾಗ್ವಾದದ ನಂತರ, ಆರೋಪಿಗಳು ಇತರರನ್ನು ಕರೆದು ಜನರ ಮೇಲೆ ಚಾಕುವಿನಿಂದ ಹಲ್ಲೆ ನಡೆಸಿದರು, ಇದರಲ್ಲಿ 10 ಆರ್‌ಎಸ್‌ಎಸ್ ಕಾರ್ಯಕರ್ತರು ಗಾಯಗೊಂಡಿದ್ದಾರೆ ಎಂದು ಅವರು ಹೇಳಿದರು.

ಗಾಯಗೊಂಡ ಆರು ಮಂದಿಯನ್ನು ಚಿಕಿತ್ಸೆಗಾಗಿ ಸವಾಯಿ ಮಾನ್ ಸಿಂಗ್ ಆಸ್ಪತ್ರೆಗೆ ದಾಖಲಿಸಲಾಗಿದೆ.ಆರೋಪಿ ನಸೀಬ್ ಚೌಧರಿ ಮತ್ತು ಆತನ ಮಗನನ್ನು ವಶಕ್ಕೆ ಪಡೆಯಲಾಗಿದ್ದು, ದಾಳಿಯಲ್ಲಿ ಭಾಗಿಯಾಗಿರುವ ಇತರರನ್ನು ಬಂಧಿಸುವ ಪ್ರಯತ್ನಗಳು ನಡೆಯುತ್ತಿವೆ ಮತ್ತು ಹೆಚ್ಚಿನ ತನಿಖೆಯನ್ನು ಮುಂದುವರಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಘಟನೆಯಿಂದ ಆಕ್ರೋಶಗೊಂಡ ಕೆಲವರು ದೆಹಲಿ-ಅಜ್ಮೀರ್ ರಾಷ್ಟ್ರೀಯ ಹೆದ್ದಾರಿಯನ್ನು ಕೆಲಕಾಲ ಪ್ರತಿಭಟನೆ ನಡೆಸಿ ದುಷ್ಕರ್ಮಿಗಳ ಬಂಧನಕ್ಕೆ ಒತ್ತಾಯಿಸಿದ್ದಾರೆ.

### ರ್‍ಯಾಗಿಂಗ್ ಮಾಡಿದ ಇಬ್ಬರು ಎಂಬಿಬಿಎಸ್ ವಿದ್ಯಾರ್ಥಿಗಳ ಅಮಾನತು

**ಮುಂಬೈ:** ಜೂನಿಯರ್ ವಿದ್ಯಾರ್ಥಿಗಳಿಗೆ ರ್‍ಯಾಗಿಂಗ್ ಮಾಡಿದ ಆರೋಪದ ಮೇಲೆ ಅನುದಾನಿತ ಸರ್ಕಾರಿ ವೈದ್ಯಕೀಯ ಕಾಲೇಜಿನ ಎಂಬಿಬಿಎಸ್‌ನ ದ್ವಿತೀಯ ವರ್ಷದ ಇಬ್ಬರು ವಿದ್ಯಾರ್ಥಿಗಳನ್ನು ಹಾಸ್ಟೆಲ್‌ನಿಂದ ಒಂದು ವರ್ಷದವರೆಗೆ ಅಮಾನತುಗೊಳಿಸಲಾಗಿದೆ.

ಮೊದಲ ವರ್ಷದ ವಿದ್ಯಾರ್ಥಿಗಳ ತರಗತಿಗಳು ಪ್ರಾರಂಭವಾದ ನಂತರ ದಕ್ಷಿಣ ಮುಂಬೈನ ವೈದ್ಯಕೀಯ ಕಾಲೇಜು ಕ್ಯಾಂಪಸ್‌ನಲ್ಲಿರುವ ಹಾಸ್ಟೆಲ್‌ನಲ್ಲಿ ಈ ವಾರ ಈ ಘಟನೆ ನಡೆದಿದೆ ಎಂದು ಕಾಲೇಜಿನ ಆಡಳಿತ ಮಂಡಳಿ ತಿಳಿಸಿದೆ. ಕುಡಿದ ಅಮಲಿನಲ್ಲಿದ್ದ ಆರೋಪಿ ವಿದ್ಯಾರ್ಥಿಗಳು ಫ್ರೆಶರ್‌ಗೆ ನತ್ಯ ಮಾಡಲು ಕೇಳಿದ್ದರು ಅದಕ್ಕೆ ನಿರಾಕರಿಸಿದಾಗ ಅವರ ಮೇಲೆ ದಬ್ಬಾಳಿಕೆ ಮಾಡಿದ್ದರು.

ಈ ಘಟನೆಯನ್ನು ವೈದ್ಯಕೀಯ ಕಾಲೇಜಿನ ರ್‍ಯಾಗಿಂಗ್ ವಿರೋಧಿ ಸಮಿತಿಯ ಗಮನಕ್ಕೆ ತರಲಾಯಿತು, ನಂತರ ಇಬ್ಬರು ವಿದ್ಯಾರ್ಥಿಗಳನ್ನು ಅವರ ಹಾಸ್ಟೆಲ್‌ನಿಂದ ಒಂದು ವರ್ಷದವರೆಗೆ ಅಮಾನತುಗೊಳಿಸಲು ನಿರ್ಧರಿಸಲಾಯಿತು ಎಂದು ಅವರು ಹೇಳಿದರು.

### ಪತ್ನಿಯನ್ನು ಕೊಂದ ಪತಿಯ ಸೆರೆ

**ಥಾಣೆ:** ಮಗಳನ್ನು ನೋಡಿಕೊಳ್ಳಲಿಲ್ಲ ಸರಿಯಾಗಿ ನೋಡುಕೊಳ್ಳುತ್ತಿಲ್ಲ ಎಂದು ಪತ್ನಿಯನ್ನು ಭೀಕರವಾಗಿ ಕೊಂದು ಪಾರಾರಿಯಾಗಿದ್ದ ಪತಿಯನ್ನು ಉತ್ತರಪ್ರದೇಶದ ವಾರಣಾಸಿಯಲ್ಲಿ ಇಲ್ಲಿನ ಪೊಲೀಸರು ಬಂಧಿಸಿದ್ದಾರೆ. ಥಾಣೆ ನಗರದ ಅಂಬರನಾಥ್ ಪ್ರದೇಶದ ವಿಕ್ಕಿ ಬಬನ್ ಲೋಂಡೆ(27)ಬಂಧಿತ ಆರೋಪಿ ಕಳೆದ ಅಕ್ಟೋಬರ್ 8 ರಂದು ತನ್ನ ಪತ್ನಿ ರೂಪಾಲಿ (26)ಯನ್ನು ಮನೆಯಲ್ಲೇ ಕತ್ತು ಸೀಳಿ ಕೊಂದಿದ್ದ ಎಂದು ಥಾಣೆ ನಗರ ಪೊಲೀಸ್‌ಅಧಿಕಾರಿ ಸೈಲೇಶ್ ಸಾಲ್ವಿ ತಿಳಿಸಿದ್ದಾರೆ.

ಮೂರು ವರ್ಷಗಳ ಹಿಂದೆ ವಿವಾಹವಾದ ಲೋಂಡೆ ಅವರು ತಮ್ಮ ಪತ್ನಿ ಮತ್ತು ಅವರ ಒಂದು ವರ್ಷದ ಮಗಳೊಂದಿಗೆ ಅಂಬರನಾಥ್ ಪಟ್ಟಣದ ಪಾಲೆಗಾಂವ್ ಪ್ರದೇಶದ ವಸತಿ ಸಂಕೀರ್ಣದಲ್ಲಿ ವಾಸಿಸುತ್ತಿದ್ದರು. ತಮ ಮಗುವನ್ನು ಸರಿಯಾಗಿ ನೋಡಿಕೊಳ್ಳದಿದ್ದಕ್ಕಾಗಿ ಅಸಮಾಧಾನಗೊಂಡಿದ್ದನು.

ಕೊಲೆ ಮಾಡಿ ತಲೆಮರೆಸಿಕೊಂಡಿದ್ದ ಆತ ವಾರಣಾಸಿಯಲ್ಲಿರುವುದು ಗೊತ್ತಾಗಿತ್ತು. ಥಾಣೆ ಪೊಲೀಸರ ತಂಡ ಉತ್ತರ ಪ್ರದೇಶದ ದೇವಸ್ಥಾನ ಪಟ್ಟಣ ವಾರಣಾಸಿಗೆ ತೆರಳಿದಾಗ ಆರೋಪಿ ವೇಶ ಮರೆಸಿಕೊಂಡಿದ್ದ. ಸ್ಥಳೀಯರು ಮತ್ತು ತಾಂತ್ರಿಕ ಬುದ್ಧಿವಂತಿಕೆಯನ್ನು ಬಳಸಿ ಲೊಂಡೆಯನ್ನು ನಮ ತಂಡ ಬಂಧಿಸಿ ಠಾಣೆಗೆ ಕರೆತರಲಾಗುತ್ತಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

# ಜೈ ಹನುಮಾನ್ ಸೀಕ್ವೆಲ್‌ನಲ್ಲಿ ರಿಷಬ್ ಶೆಟ್ಟಿ

ರಾಷ್ಟ್ರಪ್ರಶಸ್ತಿ ವಿಜೇತ ನಟ ರಿಷಬ್ ಶೆಟ್ಟಿ ಅವರು 'ಕಾಂತಾರ ಚಾಪ್ಟರ್ 1'ರಲ್ಲಿ ಬ್ಯುಸಿಯಾಗಿದ್ದಾರೆ. ಇದೀಗ 'ಜೈ ಹನುಮಾನ್ ಪಾರ್ಟ್ 2'ನಲ್ಲಿ ರಿಷಬ್ ನಟಿಸಲಿದ್ದಾರೆ ಎನ್ನಲಾದ ಸುದ್ದಿಯೊಂದು ಗಾಂಧಿನಗರದಲ್ಲಿ ಹರಿದಾಡುತ್ತಿದೆ. ಸೂಪರ್ ಹಿಟ್ ಚಿತ್ರ ಜೈ ಹನುಮಾನ್ ಸಿನಿಮಾದ ಸೀಕ್ವೆಲ್‌ಗೆ ಸಿದ್ಧತೆ ನಡೆಯುತ್ತಿದೆ. ಈ ಚಿತ್ರದ ಪಾರ್ಟ್ 2ನಲ್ಲಿ ರಿಷಬ್ ಶೆಟ್ಟಿ ಪ್ರಮುಖ ಪಾತ್ರದಲ್ಲಿ ನಟಿಸಲು ಚಿತ್ರತಂಡ ನಟನನ್ನು ಅಪ್ರೋಚ್ ಮಾಡಿದ್ದಾರೆ ಎನ್ನಲಾಗಿದೆ. ಈ ಕುರಿತು ರಿಷಬ್ ಆಗಲಿ, ನಿರ್ಮಾಣ ಸಂಸ್ಥೆ ಆಗಲಿ ಯಾವುದೇ ಅಧಿಕೃತ ಮಾಹಿತಿ ನೀಡಿಲ್ಲ. ಇದು ಸದ್ಯ ಹರಿದಾಡುತ್ತಿರುವ ಗಾಸಿಪ್ ಅಥವಾ ನಿಜ ಸಂಗತಿನಾ ಎಂಬುದನ್ನು ಚಿತ್ರತಂಡ ತಿಳಿಸುವವರೆಗೂ ಕಾದು ನೋಡಬೇಕಿದೆ.

ಅಂದಹಾಗೆ, 2024ರಲ್ಲಿ ತೆರೆಕಂಡ 'ಜೈ ಹನುಮಾನ್' ಚಿತ್ರದಲ್ಲಿ ತೇಜ ಸಜ್ಜಾ ಮತ್ತು ಅಮೃತಾ ಅಯ್ಯರ್ ಜೋಡಿಯಾಗಿ ನಟಿಸಿದ್ದರು. ಈ ಚಿತ್ರಕ್ಕೆ ಪ್ರಶಾಂತ್ ವರ್ಮಾ ಆಕ್ಷನ್ ಕಟ್ ಹೇಳಿದ್ದರು. ಇದೀಗ ಇದರ ಎರಡನೇ ಭಾಗಕ್ಕೆ ತೆರೆಮರೆಯಲ್ಲಿ ತಯಾರಿ ನಡೆಯುತ್ತಿದೆ.



## ಹಾರ್ದಿಕ್ ಜೊತೆಗಿನ ವಿಚ್ಛೇದನ



# ಒಂದು ತಾತ್ಕಾಲಿಕ ಪಯಣ ಟ್ರೈಲರ್ ಔಟ್

'ಒಂದು ತಾತ್ಕಾಲಿಕ ಪಯಣ' ಚಿತ್ರದ ಟ್ರೈಲರ್ ಈಗ ಒಂದಷ್ಟು ಚರ್ಚೆಗೆ ಗ್ರಾಸವಾಗಿದೆ. ಸಿನಿಮಾ ರಂಗದಲ್ಲಿ ಸಾಧಿಸಬೇಕೆಂಬ ಕನಸು ಹೊತ್ತ ಜೀವಗಳ ನೋವು, ನಿರಾಸೆಗಳ ಕಥನ ನೋಡುಗರಿಗೆಲ್ಲ ನಾಟಿಕೊಂಡಿದೆ. ಒಂದು ವಿಶಿಷ್ಟ ಕಥೆಯ ಸುಳಿವಿನೊಂದಿಗೆ ಗಮನ ಸೆಳೆದಿರುವ ಈ ಚಿತ್ರದ ಪ್ರಧಾನ ಪಾತ್ರದಲ್ಲಿ ಯುವ ನಟ ಸೂಚನ್ ಶೆಟ್ಟಿ ನಟಿಸಿದ್ದಾರೆ.

ಸ್ಕ್ರೀನ್ ಪ್ಲೇನಲ್ಲಿಯೇ ವೈಶಿಷ್ಟ್ಯ ಹೊಂದಿರೋ ಸದರಿ ಸಿನಿಮಾದ ಆತ್ಮದಂತಿರೋ ಪಾತ್ರಕ್ಕೆ ಸೂಚನ್ ಶೆಟ್ಟಿ ಜೀವ ತುಂಬಿದ್ದಾರೆ. ಅದರ ಒಂದಷ್ಟು ಚಹರೆಗಳು ಈ ಟ್ರೈಲರ್‌ನಲ್ಲಿ ಕಾಣಿಸಿಕೊಂಡಿವೆ. ಮೂಲತಃ ಕುಂದಾಪುರದವರಾದ ಸೂಚನ್ ಶೆಟ್ಟಿ ಸುಮಾರು 12 ವರ್ಷಗಳಿಂದ ಚಿತ್ರರಂಗದ ಭಾಗವಾಗಿದ್ದಾರೆ.

ಸೂಚನ್ ಶೆಟ್ಟಿ ಅವರ ಸ್ನೇಹಿತರೂ ಆಗಿರುವ ಕಾರ್ತಿಕ್ ಈ ಚಿತ್ರವನ್ನು ನಿರ್ದೇಶನ ಮಾಡಿದ್ದಾರೆ. ಇದರ ಲೀಡ್ ಪಾತ್ರಗಳಲ್ಲೊಂದನ್ನು ಆವಾಹಿಸಿಕೊಳ್ಳುವ ಅವಕಾಶವನ್ನು ಸೂಚನ್ ಸವಾಲಾಗಿ ಸ್ವೀಕರಿಸಿ ನಟಿಸಿದ್ದಾರಂತೆ. ಈ ಮೂಲಕ ಒಂದೊಳ್ಳೆಯ ಅನುಭವ ಪಡೆದುಕೊಂಡಿರುವ ಸೂಚನ್, ಓರ್ವ ನಟನಾಗಿ ಬ್ರೇಕ್ ಸಿಗುವ ನಿರೀಕ್ಷೆಗಳಿವೆ.

ಕುಂದಾಪುರವನ್ನೇ ಕರ್ಮಭೂಮಿಯಾಗಿಸಿಕೊಂಡಿರುವ ರವಿ ಬಸ್ರೂರು ನಿರ್ಮಾಣ ಮಾಡಿರುವ ಚೊಚ್ಚಲ ಚಿತ್ರವಿದು. ಆರು ವರ್ಷಗಳ ಕಾಲ ಸೂಚನ್ ಶೆಟ್ಟಿ ಅವರು ರವಿ ಬಸ್ರೂರು ಗರಡಿಯಲ್ಲಿ ನಿರ್ದೇಶನ ವಿಭಾಗದಲ್ಲಿ ಪಳಗಿಕೊಂಡಿದ್ದರು. ಅವರು ನಿರ್ದೇಶನ ಮಾಡಿದ್ದ 'ಕಡಲ್' ಎಂಬ ಚಿತ್ರದಲ್ಲಿ ಒಂದು ನೆಗೆಟಿವ್ ರೋಲ್ ಮಾಡಿದ್ದರು. ಅದು ಸೂಚನ್ ಪಾಲಿಗೆ ನಟನಾಗಿ ಮೊದಲ ಚಿತ್ರ. ಆ ಪಾತ್ರಕ್ಕೆ ಪ್ರೇಕ್ಷಕರ ಕಡೆಯಿಂದ ಮೆಚ್ಚುಗೆ ಸಿಕ್ಕಿತ್ತು. ಅದಾದ ಬಳಿಕ ನಟನೆ ಮತ್ತು ನಿರ್ದೇಶನವನ್ನು ಸರಿದೂಗಿಸಿಕೊಂಡು ಹೋಗುವ ತೀರ್ಮಾನಕ್ಕೆ ಸೂಚನ್ ಬಂದಿದ್ದಾರೆ.



# ಅಕ್ಷಯ್ ಕುಮಾರ್‌ಗೆ ಅನನ್ಯಾ ಸಾಥ್

ಬಾಲಿವುಡ್ ನಟ ಅಕ್ಷಯ್ ಕುಮಾರ್ ಅವರು ಲಾಯರ್ ಆಗಿ ಬೆಳ್ಳಿಪರದೆಯಲ್ಲಿ ಅಬ್ಬರಿಸಲು ಸಜ್ಜಾಗಿದ್ದಾರೆ. ಲಾಯರ್ ಸಿ. ಶಂಕರನ್ ನಾಯರ್ ಬಯೋಪಿಕ್‌ನಲ್ಲಿ ಅಕ್ಷಯ್ ಕುಮಾರ್ ಜೊತೆ ನಟಿಸಲು ಅನನ್ಯಾ ಪಾಂಡೆ ಮತ್ತು ತಮಿಳು ನಟ ಆರ್. ಮಾಧವನ್ ಕೈಜೋಡಿಸಿದ್ದಾರೆ.

ಸಿನಿಮಾದಿಂದ ಸಿನಿಮಾಗೆ ಭಿನ್ನ ಪಾತ್ರಗಳನ್ನು ಆಯ್ಕೆ ಮಾಡೋ ಅಕ್ಷಯ್ ಕುಮಾರ್ ಈಗ ಕಪ್ಪು ಕೋಟ್ ಧರಿಸಿ ಲಾಯರ್ ಆಗಿ ನ್ಯಾಯದ ಪಾಠ ಮಾಡಲು ರೆಡಿಯಾಗಿದ್ದಾರೆ. ಖ್ಯಾತ ಅಡ್ವೋಕೇಟ್ ಸಿ. ಶಂಕರನ್ ನಾಯರ್ ಜೀವನ ಆಧರಿಸಿದ ಕಥೆಯಲ್ಲಿ ಅಕ್ಷಯ್ ಲೀಡ್ ರೋಲ್‌ನಲ್ಲಿ ನಟಿಸುತ್ತಿದ್ದಾರೆ. ಅಕ್ಷಯ್ ಕುಮಾರ್ ಜೊತೆ ಅನನ್ಯಾ ಪಾಂಡೆ ಮತ್ತು ತಮಿಳು ನಟ ಆರ್. ಮಾಧವನ್ ಕೂಡ ಕಾಣಿಸಿಕೊಳ್ತಿದ್ದಾರೆ. ಅವರ ಪಾತ್ರಕ್ಕೂ ಪ್ರಾಮುಖ್ಯತೆ ಇದೆ. ಕರಣ್ ಜೋಹರ್ ಈ ಚಿತ್ರವನ್ನು ನಿರ್ಮಾಣ ಮಾಡೋದಾಗಿ ಅನೌನ್ಸ್ ಮಾಡಿದ್ದು, ಮುಂದಿನ ವರ್ಷ ಮಾರ್ಚ್ 14ರಂದು ರಿಲೀಸ್ ಆಗಲಿದೆ ಎಂದು ಘೋಷಿಸಿದ್ದಾರೆ. ಇನ್ನೂ ಅಕ್ಷಯ್ ನಟನೆಯ ಸಾಲು ಸಾಲು ಸಿನಿಮಾಗಳು ಚಿತ್ರಮಂದಿರದಲ್ಲಿ ಮಕಾಡೆ ಮಲಗಿವೆ. ಹಾಗಾಗಿ ಒಂದು ಗೆಲುವಿಗಾಗಿ ಎದುರು ನೋಡ್ತಿರುವ ನಟನಿಗೆ ಈ ಚಿತ್ರ ಕೈಹಿಡಿಯುತ್ತಾ ಕಾದುನೋಡಬೇಕಿದೆ.



# ಟೀಕಿಸುವವರಿಗೆ ಅರೋರಾ ತಿರುಗೇಟು

ಬಾಲಿವುಡ್ ಬೆಡಗಿ ಮಲೈಕಾ ಅರೋರಾ ಸದಾ ಒಂದಲ್ಲಾ ಒಂದು ವಿಚಾರಕ್ಕೆ ಸುದ್ದಿಯಾಗುತ್ತಲೇ ಇರುತ್ತಾರೆ. ಇದೀಗ ಅರ್ಜುನ್ ಕಪೂರ್ ಜೊತೆಗಿನ ಬ್ರೇಕಪ್ ವಿಚಾರವಾಗಿ ಭಾರೀ ಟೀಕೆ, ಟ್ರೋಲ್‌ಗಳನ್ನು ನಟಿ ಎದುರಿಸುತ್ತಿದ್ದಾರೆ. ಇದೀಗ ಬ್ರೇಕಪ್ ವಿಚಾರಕ್ಕೆ ಟೀಕಿಸುವವರಿಗೆ ಮಲೈಕಾ ತಿರುಗೇಟು ನೀಡಿದ್ದಾರೆ. ಸಂದರ್ಶನವೊಂದರಲ್ಲಿ ಮಲೈಕಾ ಮೊದಲ ಬಾರಿಗೆ ಅರ್ಜುನ್ ಕಪೂರ್ ಜೊತೆಗಿನ ಬ್ರೇಕಪ್ ಬಗ್ಗೆ ಮೌನ ಮುರಿದಿದ್ದಾರೆ. ನಾನು ತೆಗೆದುಕೊಂಡಿರುವ ನಿರ್ಧಾರಕ್ಕೆ ಯಾವುದೇ ವಿಷಾದವಿಲ್ಲದೇ ಬದುಕುತ್ತೇನೆ ಹೊರತು ಕೊರಗುವುದಿಲ್ಲ. ಇಂದು ಏನಾದರೂ ಕಲಿತಿದ್ದೀನಿ ಎಂದಾದರೆ ಅದಕ್ಕೆ ಜೀವನದುದ್ದಕ್ಕೂ ನಾನು ಪಡೆದ ಅನುಭವಗಳೇ ಕಾರಣ. ಇದೆಲ್ಲದರಿಂದಲೇ ಇಂದು ಒಂದೊಳ್ಳೆಯ ಜೀವನವನ್ನು ರೂಪಿಸಿಕೊಂಡಿದ್ದೇನೆ ಎಂದಿದ್ದಾರೆ. ಇನ್ನೂ ನಾನು ನೋವಿನಿಂದ ಹೊರಬರಲು ಕರೀನಾ ಕಪೂರ್ ಖಾನ್, ಕರೀಷ್ಮಾ ಕಪೂರ್ ಮತ್ತು ಸಹೋದರಿ ಅಮೃತಾ ಅರೋರಾ ಅವರೆಲ್ಲರ ಪಾತ್ರ ಸಾಕಷ್ಟಿದೆ. ಅವರಿಲ್ಲದೆ ನಾನಿಲ್ಲ. ಇಲ್ಲಿಯವರೆಗೂ ನಾನು ಕೈಗೊಂಡ ನಿರ್ಧಾರ ನನ್ನ ಜೀವನವನ್ನು ಉತ್ತಮವಾಗಿ ರೂಪಿಸಿದೆ. ಈ ವಿಷಯದಲ್ಲಿ ನನಗೆ ಯಾವುದೇ ಪಶ್ಚಾತ್ತಾಪ ಇಲ್ಲ ಎಂದು ಟೀಕಿಸುವವರಿಗೆ ಖಡಕ್ ಆಗಿ ಉತ್ತರಿಸಿದ್ದಾರೆ ಮಲೈಕಾ.

# 'ಶೇರ್ಷಾ' ಬಳಿಕ ಮತ್ತೊಂದು ಲವ್ ಸ್ಟೋರಿ ಸಿನಿಮಾದಲ್ಲಿ ಸಿದ್ಧಾರ್ಥ್, ಕಿಯಾರಾ

ನಟ ಸಿದ್ಧಾರ್ಥ್ ಮಲ್ಹೋತ್ರಾ ಮತ್ತು ಕಿಯಾರಾ ಮತ್ತೊಮ್ಮೆ ತೆರೆಯ ಮೇಲೆ ಜೋಡಿಯಾಗಿ ನಟಿಸಲು ಸಜ್ಜಾಗಿದ್ದಾರೆ. ಲವ್ ಸ್ಟೋರಿ ಒಳಗೊಂಡ ಚಿತ್ರವನ್ನು ಒಪ್ಪಿದ್ದಾರೆ ಎನ್ನಲಾದ ಸುದ್ದಿಯೊಂದು ಬಿಟೌನ್‌ನಲ್ಲಿ ಹರಿದಾಡುತ್ತಿದ್ದಾರೆ. ಸೂಪರ್ ಹಿಟ್ 'ಶೇರ್ಷಾ' ಸಿನಿಮಾದಿಂದಲೇ ರಿಯಲ್ ಲೈಫ್‌ನಲ್ಲೂ ಸಿದ್ಧಾರ್ಥ್ ಮತ್ತು ಕಿಯಾರಾ ಪ್ರೀತಿಸಿ ಮದುವೆಯಾದರು. ಈ ಸಿನಿಮಾ ಬಳಿಕ ಮತ್ತೆ ಯಾವಾಗ ಜೊತೆಯಾಗಿ ನಟಿಸುತ್ತಾರೆ ಎಂಬ ಅಭಿಮಾನಿಗಳ ಪ್ರಶ್ನೆಗೆ ಇದೀಗ ಉತ್ತರ ಸಿಕ್ಕಿದೆ.



ಪ್ರತಿಷ್ಠಿತ ನಿರ್ಮಾಣ ಸಂಸ್ಥೆ ಮ್ಯಾಡಾಕ್ ಫಿಲ್ಮ್ ಇದೀಗ ಸಿದ್ಧಾರ್ಥ್ ಮತ್ತು ಕಿಯಾರಾ ಜೊತೆ ಹೊಸ ಸಿನಿಮಾ ಮಾಡಲು ಚರ್ಚಿಸಿದ್ದಾರೆ ಎನ್ನಲಾಗಿದೆ.

ಲವ್ ಸ್ಟೋರಿ ಸಿನಿಮಾ ಆಗಿದ್ರೂ, ಸಾಕಷ್ಟು ಟ್ವಿಸ್ಟ್‌ಗಳಿರುವಂತಹ ವಿಭಿನ್ನ ಕಥೆಗೆ ಈ ಜೋಡಿಯೇ ಸರಿ ಎಂದು ನಿರ್ಮಾಣ ಸಂಸ್ಥೆ ಸಿದ್ಧಾರ್ಥ್ ದಂಪತಿಯನ್ನು ಅಪ್ರೋಚ್ ಮಾಡಿದೆ ಎನ್ನಲಾಗಿದೆ. ಹಾಗಾದ್ರೆ ಸದ್ಯ ಹರಿದಾಡುತ್ತಿರುವ ಈ ಸುದ್ದಿ ಅದೆಷ್ಟರ ಮಟ್ಟಿಗೆ ನಿಜ ಕಾದುನೋಡಬೇಕಿದೆ.

ಅಂದಹಾಗೆ, 2021ರಲ್ಲಿ ತೆರೆಕಂಡ 'ಶೇರ್ಷಾ' ಸಿನಿಮಾದಲ್ಲಿ ಸಿದ್ಧಾರ್ಥ್ ಮತ್ತು ಕಿಯಾರಾ ಮೊದಲ ಬಾರಿಗೆ ಜೋಡಿಯಾಗಿ ನಟಿಸಿದರು. ಈ ಚಿತ್ರಕ್ಕೆ ವಿಷ್ಣುವರ್ಧನ್ ಆಕ್ಷನ್ ಕಟ್ ಹೇಳಿದ್ದರು.



## ಲವ್ ಸ್ಟೋರಿ ಸಿನಿಮಾ ಆಗಿದ್ರೂ ಸಾಕಷ್ಟು ಟ್ವಿಸ್ಟ್

## ನೀವು ನೋಡಿ ನಕ್ಕುಬಿಡಿ



# ವಿಶ್ವ ಕ್ರಿಕೆಟ್‌ನಲ್ಲಿ ಈ ಸಾಧನೆ ಮಾಡಿದ ಏಕೈಕ ಬ್ಯಾಟ್ಸ್‌ಮನ್ ಕಿಂಗ್ ಕೊಹ್ಲಿ

ಭಾರತ ಮತ್ತು ನ್ಯೂಜಿಲೆಂಡ್ ನಡುವೆ ನಡೆಯುತ್ತಿರುವ ಬೆಂಗಳೂರು ಟೆಸ್ಟ್ ಪಂದ್ಯದ ಮೂರನೇ ದಿನ ಉಭಯ ತಂಡಗಳಿಂದ ಅದ್ಭುತ ಆಟ ಕಂಡು ಬಂದಿತು. ನ್ಯೂಜಿಲೆಂಡ್‌ನ ಮೊದಲ ಇನ್ನಿಂಗ್ಸ್ 402 ರನ್‌ಗಳಿಗೆ ಕೊನೆಗೊಂಡಿತು. ಇದಕ್ಕೆ ಪ್ರತಿಯಾಗಿ ಟೀಂ ಇಂಡಿಯಾ ಕೂಡ ಉತ್ತಮ ಹೋರಾಟ ನೀಡುತ್ತಿದೆ. ದಿನದಾಟದಂತ್ಯಕ್ಕೆ ಭಾರತ ತಂಡ 3 ವಿಕೆಟ್ ಕಳೆದುಕೊಂಡು 231 ರನ್ ಕಲೆಹಾಕಿದೆ. ತಂಡದ ಪರ ನಾಯಕ ರೋಹಿತ್ ಶರ್ಮಾ ಅರ್ಧಶತಕ ಗಳಿಸುವಲ್ಲಿ ಯಶಸ್ವಿಯಾದರೆ, ವಿರಾಟ್ ಕೊಹ್ಲಿ ಮತ್ತು ಸರ್ಫರಾಜ್ ಖಾನ್ ಕೂಡ 50+ ರನ್‌ಗಳ ಇನ್ನಿಂಗ್ಸ್ ಆಡಿದರು. ಅಲ್ಲದೆ ಈ ಇಬ್ಬರ ನಡುವೆ ಶತಕದ ಜೊತೆಯಾಟವು ಕಂಡುಬಂತು. ಈ ವೇಳೆ ಕೊಹ್ಲಿ 70 ರನ್‌ಗಳ ಇನ್ನಿಂಗ್ಸ್ ಆಡಿ ವಿಕೆಟ್ ಒಪ್ಪಿಸಿದರೆ, ಸರ್ಫರಾಜ್ ಖಾನ್ 70 ರನ್ ಬಾರಿಸಿ ಅಜೇಯರಾಗಿ ಉಳಿದಿದ್ದಾರೆ. ದಿನದಾಟದ ಕೊನೆಯಲ್ಲಿ ಎಡವಿದ ಕೊಹ್ಲಿ ವಿಕೆಟ್ ಒಪ್ಪಿಸಿ ಪೆವಿಲಿಯನ್ ಸೇರಿಕೊಂಡರಾದರೂ, ಬೆಂಗಳೂರಿನಲ್ಲಿ ಸ್ಮರಣೀಯ ಇನ್ನಿಂಗ್ಸ್ ಆಡಿದರು. ತಮ್ಮ ಇನ್ನಿಂಗ್ಸ್‌ನಲ್ಲಿ 102 ಎಸೆತಗಳನ್ನು ಎದುರಿಸಿದ ಕೊಹ್ಲಿ 8 ಬೌಂಡರಿ ಹಾಗೂ 1 ಸಿಕ್ಸರ್ ಸಹಿತ 70 ರನ್ ಬಾರಿಸಿದರು. ಈ ಇನ್ನಿಂಗ್ಸ್ ಮೂಲಕ ಕೊಹ್ಲಿ ಎರಡು ಪ್ರಮುಖ ದಾಖಲೆಗಳನ್ನು ನಿರ್ಮಿಸಿದರು. ಈ ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲಿ ಖಾತೆ ತೆರೆಯದೆ ಔಟಾಗಿದ್ದ ವಿರಾಟ್ ಕೊಹ್ಲಿ ಎರಡನೇ ಇನ್ನಿಂಗ್ಸ್‌ನಲ್ಲಿ ಎಚ್ಚರಿಕೆಯಿಂದ ಬ್ಯಾಟಿಂಗ್ ಮಾಡಿ ತಂಡದ ಸ್ಕೋರ್ ಅನ್ನು ಮುಂದಕ್ಕೆ ಕೊಂಡೊಯ್ದರು. ಈ ಮೂಲಕ ತಮ್ಮ ಅಂತರಾಷ್ಟ್ರೀಯ ವೃತ್ತಿಜೀವನದಲ್ಲಿ 221 ನೇ ಬಾರಿಗೆ 50+ ರನ್ ದಾಖಲಿಸಿದರು. ಅದೇ ಸಮಯದಲ್ಲಿ, ಟೆಸ್ಟ್ ಕ್ರಿಕೆಟ್‌ನಲ್ಲಿ 9 ಸಾವಿರ ರನ್ ಸಹ ಪೂರೈಸಿದರು. ಈ ಮೂಲಕ ಭಾರತ ಪರ ಈ ಸಾಧನೆ ಮಾಡಿದ ನಾಲ್ಕನೇ ಬ್ಯಾಟ್ಸ್‌ಮನ್ ಎನಿಸಿಕೊಂಡರು. ಅಲ್ಲದೆ ಈ ಪಂದ್ಯದಲ್ಲಿ ಮೂರನೇ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಇಳಿದಿದ್ದ ಕೊಹ್ಲಿ ಅಂತರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಮೂರನೇ ಕ್ರಮಾಂಕದಲ್ಲಿ ಬ್ಯಾಟ್ ಬೀಸಿ 15000 ರನ್ ಪೂರೈಸಿದ ದಾಖಲೆಯನ್ನೂ ತನ್ನದಾಗಿಸಿಕೊಂಡಿದ್ದಾರೆ.

ಕೊಹ್ಲಿ ತಮ್ಮ 316 ಇನ್ನಿಂಗ್ಸ್‌ಗಳಲ್ಲಿ ಈ ಸಾಧನೆ ಮಾಡಿದ್ದು, ವಿರಾಟ್ ನಂತರ ರಾಹುಲ್ ದ್ರಾವಿಡ್ ಹೆಸರು ಈ ಪಟ್ಟಿಯಲ್ಲಿದೆ. ದ್ರಾವಿಡ್ ಅಂತರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಮೂರನೇ ಕ್ರಮಾಂಕದಲ್ಲಿ ಬ್ಯಾಟಿಂಗ್ ಮಾಡಿ 14555 ರನ್ ಕಲೆಹಾಕಿದ್ದರು. ಇದೀಗ ವಿರಾಟ್ ಕೊಹ್ಲಿ ದ್ರಾವಿಡ್‌ರನ್ನು ಹಿಂದಿಕ್ಕಿದ್ದಾರೆ.

# ಸಿಕ್ಸ್ ಸಿಡಿಸುವುದರಲ್ಲಿ ಸೆಹ್ವಾಗ್ ದಾಖಲೆ ಮುರಿದ ಸೌಥಿ

ನ್ಯೂಜಿಲೆಂಡ್ ವಿರುದ್ಧದ ಟೆಸ್ಟ್ ಸರಣಿಯ ಮೊದಲ ಪಂದ್ಯದಲ್ಲಿ ಟೀಂ ಇಂಡಿಯಾ ಹಿನ್ನಡೆ ಅನುಭವಿಸಿದೆ. ಈ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡ ಸಂಪೂರ್ಣ ಪ್ರಾಬಲ್ಯ ಮೆರೆದಿದ್ದು, 402 ರನ್‌ಗಳಿಗೆ ಮೊದಲ ಇನ್ನಿಂಗ್ಸ್ ಮುಗಿಸಿದೆ. ಈ ಮೂಲಕ ಮೊದಲ ಇನ್ನಿಂಗ್ಸ್‌ನಲ್ಲಿ 356 ರನ್‌ಗಳ ಮುನ್ನಡೆ ಕಾಯ್ದುಕೊಂಡಿದೆ. ತಂಡದ ಪರ ರಚಿನ್ ರವೀಂದ್ರ ಶತಕದ ಇನ್ನಿಂಗ್ಸ್ ಆಡಿದರೆ, ಕಾನ್ವೇ ಹಾಗೂ ಸೌಥಿ ಅರ್ಧಶತಕ ಬಾರಿಸಿದರು.

ಅದರಲ್ಲೂ ಟೀಂ ಇಂಡಿಯಾ ವಿರುದ್ಧ ಸ್ಮರಣೀಯ ಇನ್ನಿಂಗ್ಸ್ ಆಡಿದ 35 ವರ್ಷದ ಬೌಲರ್ ಟಿಮ್ ಸೌಥಿ 65 ರನ್‌ಗಳ ಸ್ಫೋಟಕ ಇನ್ನಿಂಗ್ಸ್ ಆಡುವ ಮೂಲಕ ತಂಡವನ್ನು ಬೃಹತ್ ಮೊತ್ತದ ಕೊಂಡೊಯ್ಯುವಲ್ಲಿ ನೆರವಾದರು. ಇದೇ ವೇಳೆ ಟೀಂ ಇಂಡಿಯಾದ ಮಾಜಿ ಆರಂಭಿಕ ಆಟಗಾರ ವೀರೇಂದ್ರ ಸೆಹ್ವಾಗ್ ಅವರ ದಾಖಲೆಯನ್ನು ಸೌಥಿ ಮುರಿದರು. ಭಾರತದ ವಿರುದ್ಧ ಟೆಸ್ಟ್‌ನಲ್ಲಿ ಚೊಚ್ಚಲ ಅರ್ಧಶತಕ ಸಿಡಿಸಿದ ಸೌಥಿ ಕೇವಲ 57 ಎಸೆತಗಳಲ್ಲಿ 50 ರನ್‌ಗಳ ಗಡಿ ಮುಟ್ಟಿದರು. ಇದು ಅವರ ಟೆಸ್ಟ್ ವೃತ್ತಿಜೀವನದ 7ನೇ ಅರ್ಧಶತಕವಾಗಿದೆ. ಟಿಮ್ ಸೌಥಿ ಅವರ ಇನ್ನಿಂಗ್ಸ್‌ನಲ್ಲಿ 3 ಬೌಂಡರಿ ಮತ್ತು 3 ಸಿಕ್ಸರ್‌ಗಳು ಸೇರಿದ್ದವು. ಈ ಮೂರು ಸಿಕ್ಸರ್‌ಗಳೊಂದಿಗೆ ಟಿಮ್ ಸೌಥಿ, ಟೆಸ್ಟ್‌ನಲ್ಲಿ ಅಧಿಕ ಸಿಕ್ಸರ್ ಸಿಡಿಸಿದ ಆಟಗಾರರ ಪಟ್ಟಿಯಲ್ಲಿ ವೀರೇಂದ್ರ ಸೆಹ್ವಾಗ್ ಅವರನ್ನು ಹಿಂದಿಕ್ಕಿದರು. ಟೀಂ ಇಂಡಿಯಾ ವಿರುದ್ಧ ಮೂರು ಸಿಕ್ಸರ್ ಸಿಡಿಸುವ ಮೂಲಕ ಟಿಮ್ ಸೌಥಿ ತಮ್ಮ ಟೆಸ್ಟ್ ವೃತ್ತಿಜೀವನದಲ್ಲಿ 92 ಸಿಕ್ಸರ್‌ಗಳನ್ನು ಪೂರ್ಣಗೊಳಿಸಿದರು. ಇದರೊಂದಿಗೆ ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲಿ ಅತಿ ಹೆಚ್ಚು ಸಿಕ್ಸರ್ ಬಾರಿಸಿದ ದಾಖಲೆಯಲ್ಲಿ ವೀರೇಂದ್ರ ಸೆಹ್ವಾಗ್ ಅವರನ್ನು ಹಿಂದಿಕ್ಕಿದ್ದಾರೆ. ವೀರೇಂದ್ರ ಸೆಹ್ವಾಗ್ ತಮ್ಮ ಟೆಸ್ಟ್ ವೃತ್ತಿಜೀವನದಲ್ಲಿ 91 ಸಿಕ್ಸರ್‌ಗಳನ್ನು ಬಾರಿಸಿದ್ದರು.

ಇದೀಗ ತಮ್ಮ ಟೆಸ್ಟ್ ಸಿಕ್ಸರ್‌ಗಳ ಸಂಖ್ಯೆಯನ್ನು 92ಕ್ಕೇರಿಸಿಕೊಂಡಿರುವ ಟಿಮ್ ಸೌಥಿ ಸಿಡಿಲಮರಿ ಸೆಹ್ವಾಗ್‌ರನ್ನು ಹಿಂದಿಕ್ಕಿದ್ದಾರೆ. ಈಗ ಟೆಸ್ಟ್ ಕ್ರಿಕೆಟ್‌ನಲ್ಲಿ ಅತಿ ಹೆಚ್ಚು ಸಿಕ್ಸರ್‌ಗಳನ್ನು ಬಾರಿಸಿದ ವಿಷಯದಲ್ಲಿ ಟಿಮ್ ಸೌಥಿಗಿಂತ ಕೇವಲ 5 ಬ್ಯಾಟ್ಸ್‌ಮನ್‌ಗಳು ಮುಂದಿದ್ದು, ಇಂಗ್ಲೆಂಡ್‌ನ ಬೆನ್ ಸ್ಟೋಕ್ಸ್ 131 ಸಿಕ್ಸರ್‌ಗಳೊಂದಿಗೆ ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದ್ದಾರೆ.

ಇನ್ನು ನ್ಯೂಜಿಲೆಂಡ್ ತಂಡದ ಮೊದಲ ಇನ್ನಿಂಗ್ಸ್ ಬಗ್ಗೆ ಹೇಳುವುದಾದರೆ.. ಕಿವೀಸ್ ಪಡೆ ಮೂರನೇ ದಿನದಾಟದ ಮೊದಲ ಇನ್ನಿಂಗ್ಸ್‌ನಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು 402 ರನ್‌ಗಳಿಗೆ ಆಲೌಟ್ ಆಯಿತು. ತಂಡ ಈ ಬೃಹತ್ ಮೊತ್ತ ಕಲೆಹಾಕುವಲ್ಲಿ ನೆರವಾದ ಟಿಮ್ ಸೌಥಿ 8ನೇ ವಿಕೆಟ್‌ಗೆ ರಚಿನ್ ರವೀಂದ್ರ, ಜೊತೆಗೂಡಿ 130ಕ್ಕೂ ಹೆಚ್ಚು ರನ್ ಸೇರಿಸುವಲ್ಲಿ ಯಶಸ್ವಿಯಾದರು.



# ಅದೃಷ್ಟ ಕೈಕೊಟ್ಟಾಗ ಹೀಗೆಲ್ಲ ಆಗುತ್ತೆ

## ಬ್ಯಾಡ್ ಲಕ್ ರೋಹಿತ್ ಶರ್ಮಾ

ಬೆಂಗಳೂರು ಟೆಸ್ಟ್‌ನ ಮೊದಲ ಇನ್ನಿಂಗ್ಸ್‌ನಲ್ಲಿ ಕೇವಲ ಒಂದಂಕಿಗೆ ಸುಸ್ತಾಗಿದ್ದ ಟೀಂ ಇಂಡಿಯಾ ನಾಯಕ ರೋಹಿತ್ ಶರ್ಮಾ, ಎರಡನೇ ಇನ್ನಿಂಗ್ಸ್‌ನಲ್ಲಿ ಅರ್ಧಶತಕದ ಇನ್ನಿಂಗ್ಸ್ ಆಡಿದರು. ಈ ಮೂಲಕ ಸಂಕಷ್ಟದಲ್ಲಿದ್ದ ತಂಡಕ್ಕೆ ಉತ್ತಮ ಆರಂಭ ಒದಗಿಸಿಕೊಟ್ಟರು. ಆದರೆ ಅರ್ಧಶತಕ ಸಿಡಿಸಿದ ಬೆನ್ನಲ್ಲೇ ರೋಹಿತ್ ಅತ್ಯಂತ ದುರದೃಷ್ಟಕರ ರೀತಿಯಲ್ಲಿ ಔಟಾದರು.

ಬೆಂಗಳೂರು ಟೆಸ್ಟ್‌ನಲ್ಲಿ ಕಿವೀಸ್ ತಂಡವನ್ನು 402 ರನ್‌ಗಳಿಗೆ ಆಲೌಟ್ ಮಾಡಿದ್ದ ಟೀಂ ಇಂಡಿಯಾ ತನ್ನ ಎರಡನೇ ಇನ್ನಿಂಗ್ಸ್‌ನಲ್ಲಿ ದಿಟ್ಟ ಹೋರಾಟ ನೀಡುತ್ತಿದೆ. ಮೊದಲ ಇನ್ನಿಂಗ್ಸ್‌ನಲ್ಲಿ 46 ರನ್‌ಗಳಿಗೆ ಆಲೌಟ್ ಆಗಿದ್ದ ಟೀಂ ಇಂಡಿಯಾ ಎರಡನೇ ಇನ್ನಿಂಗ್ಸ್‌ನಲ್ಲಿ ಉತ್ತಮ ಆರಂಭ ಪಡೆದುಕೊಂಡಿದೆ. ತಂಡದ ಪರ ಆರಂಭಿಕರಾದ ಯಶಸ್ವಿ ಜೈಸ್ವಾಲ್ ಹಾಗೂ ನಾಯಕ ರೋಹಿತ್ ಶರ್ಮಾ ಮೊದಲ ವಿಕೆಟ್‌ಗೆ 72 ರನ್‌ಗಳ ಜೊತೆಯಾಟ ನೀಡಿದರು. ಈ ವೇಳೆ ನಾಯಕ ರೋಹಿತ್ ಶರ್ಮಾ ಭರ್ಜರಿ ಅರ್ಧಶತಕ ಕೂಡ ಬಾರಿಸಿದರು. ಹಿಟ್‌ಮ್ಯಾನ್ 63 ಎಸೆತಗಳಲ್ಲಿ 8 ಬೌಂಡರಿ ಹಾಗೂ ಒಂದು ಸಿಕ್ಸರ್ ನೆರವಿನಿಂದ 52 ರನ್ ಗಳಿಸಿದರು. ಆದರೆ ಅರ್ಧಶತಕ ಸಿಡಿಸಿದ ಕೂಡಲೇ ರೋಹಿತ್ ಅತ್ಯಂತ ದುರದೃಷ್ಟಕರ ರೀತಿಯಲ್ಲಿ ಔಟಾದರು.





# ಬೇಡದ ದಾಖಲೆಗೆ ಕೊರಳೊಡ್ಡಿದ ಅಶ್ವಿನ್

## ಟೆಸ್ಟ್ ವೃತ್ತಿ ಜೀವನದಲ್ಲಿ ಇದೇ ಮೊದಲ ಬಾರಿಗೆ

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ನ್ಯೂಜಿಲೆಂಡ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯದಲ್ಲಿ ಟೀಂ ಇಂಡಿಯಾದ ಎರಡನೇ ಇನ್ನಿಂಗ್ಸ್ ಆರಂಭಿಸಿದೆ. ಮೊದಲ ಇನ್ನಿಂಗ್ಸ್ ನಲ್ಲಿ ನ್ಯೂಜಿಲೆಂಡ್ ತಂಡವನ್ನು 402 ರನ್‌ಗಳಿಗೆ ಆಲೌಟ್ ಮಾಡುವಲ್ಲಿ ಟೀಂ ಇಂಡಿಯಾದ ಬೌಲರ್‌ಗಳು ಯಶಸ್ವಿಯಾದರು.

ಟೀಂ ಇಂಡಿಯಾ ಪರ ಕುಲ್ದೀಪ್ ಹಾಗೂ ಜಡೇಜಾ ತಲಾ 3 ವಿಕೆಟ್ ಪಡೆದರೆ, ಸಿರಾಜ್ 2, ಬುಮ್ರಾ ಹಾಗೂ ಅಶ್ವಿನ್ ತಲಾ 1 ವಿಕೆಟ್ ಪಡೆದರು. ಆದಾಗ್ಯೂ ಅಶ್ವಿನ್‌ಗೆ ಬೆಂಗಳೂರು ಟೆಸ್ಟ್ ಇದುವರೆಗೆ ವಿಶೇಷವೇನೂ ಆಗಿಲ್ಲ. ಮೊದಲು ಬ್ಯಾಟಿಂಗ್‌ನಲ್ಲಿ ವೈಫಲ್ಯ ಅನುಭವಿಸಿದ್ದ ಅಶ್ವಿನ್ ಶೂನ್ಯ ಸುತ್ತಿದರೆ, ಆ ನಂತರ ಬೌಲಿಂಗ್‌ನಲ್ಲೂ ಬೇಡದ ದಾಖಲೆಯನ್ನು ತನ್ನ ಖಾತೆಗೆ ಹಾಕಿಕೊಂಡಿದ್ದಾರೆ.

ಈ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ 16 ಓವರ್ ಬೌಲ್ ಮಾಡಿದ ಅಶ್ವಿನ್, 5.87 ರ ಎಕಾನಮಿಯಲ್ಲಿ 94 ರನ್‌ಗಳನ್ನು ನೀಡಿ ಕೇವಲ 1 ವಿಕೆಟ್ ಪಡೆದರು. ಆದರೆ ಈ ಪಂದ್ಯದಲ್ಲಿ ತಾವು ಬೌಲ್ ಮಾಡಿದ ಒಂದು ಓವರ್‌ನಲ್ಲಿ ಅತ್ಯಧಿಕ ರನ್ ಬಿಟ್ಟುಕೊಟ್ಟು, ತಮ್ಮ ಟೆಸ್ಟ್ ವೃತ್ತಿಜೀವನದಲ್ಲಿ ಇದೇ ಮೊದಲ ಬಾರಿಗೆ ಬೇಡದ ದಾಖಲೆಗೆ ಕೊರಳೊಡ್ಡಿದರು.

ವಾಸ್ತವವಾಗಿ ನ್ಯೂಜಿಲೆಂಡ್ ಇನಿಂಗ್ಸ್‌ನ 80ನೇ ಓವರ್ ಬೌಲ್ ಮಾಡಿದ ಅಶ್ವಿನ್, ಈ ಓವರ್‌ನಲ್ಲಿ ಒಟ್ಟು 20 ರನ್‌ಗಳನ್ನು ನೀಡಿದರು. ಇದರಲ್ಲಿ 3 ಬೌಂಡರಿ ಹಾಗೂ 1 ಸಿಕ್ಸರ್ ಸೇರಿದ್ದವು. ಆರ್ ಅಶ್ವಿನ್ ಅವರ ಟೆಸ್ಟ್ ವೃತ್ತಿಜೀವನದಲ್ಲಿ ಇದೇ ಮೊದಲ ಬಾರಿಗೆ ಅವರು ಓವರ್‌ನಲ್ಲಿ 20 ರನ್‌ಗಳನ್ನು ಬಿಟ್ಟುಕೊಟ್ಟ ಬೇಡದ ದಾಖಲೆಯನ್ನು ತಮ್ಮದಾಗಿಸಿಕೊಂಡರು.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**